ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 302

27–5–2025 ಮಂಗಳವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 302

## ಹೆಚ್‌ಎಎಲ್ ಸ್ಥಳಾಂತರಕ್ಕೆ ಆಂಧ್ರ ಸಿಎಂ ಮನವಿ ‘ಅನುಚಿತ, ಕಳವಳಕಾರಿ’; ಡಿಫೆನ್ಸ್ ಕಾರಿಡಾರ್‌ಗೆ ಎಂಬಿ ಪಾಟೀಲ್ ಪಟ್ಟು



**ಬೆಂಗಳೂರು:** ಆಂಧ್ರ ಪ್ರದೇಶ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಅವರು ಎಚ್‌ಎಎಲ್‌ನ ಅಡ್ವಾನ್ಸ್ಡ ಮೀಡಿಯಂ ಕಾಂಬ್ಯಾಟ್ ಏರ್‌ಕ್ರಾಫ್ಟ್(ಎಎಂಸಿಎ) ಮತ್ತು ಲೈಟ್ ಕಾಂಬ್ಯಾಟ್ ಏರ್‌ಕ್ರಾಫ್ಟ್ (ಎಲ್‌ಸಿಎ) ಉತ್ಪಾದನೆಯನ್ನು ಕರ್ನಾಟಕದಿಂದ ತಮ್ಮ ರಾಜ್ಯಕ್ಕೆ ಸ್ಥಳಾಂತರಿಸಲು ಒತ್ತಾಯಿಸುತ್ತಿದ್ದಾರೆ ಎಂಬ ಮಾಧ್ಯಮ ವರದಿಗಳ ಬಗ್ಗೆ ಸೋಮವಾರ ಕಳವಳ ವ್ಯಕ್ತಪಡಿಸಿದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ಅವರು, ಅವರ ಹೇಳಿಕೆ “ಅನುಚಿತ ಮತ್ತು ಕಳವಳಕಾರಿ” ಎಂದು ಕರೆದಿದ್ದಾರೆ.

ಇದೇ ವೇಳೆ ಭಾರತದ ಬಾಹ್ಯಾಕಾಶ ಮತ್ತು ರಕ್ಷಣಾ ವಲಯಕ್ಕೆ ರಾಜ್ಯದ ಕೊಡುಗೆಯನ್ನು ಎತ್ತಿ ತೋರಿಸಿದ ಸಚಿವ ಎಂಬಿ ಪಾಟೀಲ್ ಅವರು, ಕರ್ನಾಟಕಕ್ಕೆ ರಕ್ಷಣಾ ಕೈಗಾರಿಕಾ ಕಾರಿಡಾರ್ ನೀಡಬೇಕೆಂದು ಒತ್ತಾಯಿಸಿದರು.

ಈ ಸಂಬಂಧ ಶೀಘ್ರದಲ್ಲೇ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿ ಮಾಡಿ, ರಾಜ್ಯಕ್ಕೆ ಸಿಗಬೇಕಾಗಿರುವ ಡಿಫೆನ್ಸ್ ಕಾರಿಡಾರ್ ಕೊಡುವಂತೆ ಆಗ್ರಹಿಸಲಾಗುವುದು ಪಾಟೀಲ್ ತಿಳಿಸಿದ್ದಾರೆ.

“ನಾನು ಇದರ ಬಗ್ಗೆ ಪ್ರಧಾನ ಕಾರ್ಯದರ್ಶಿಯೊಂದಿಗೆ ಚರ್ಚಿಸುತ್ತಿದ್ದೇನೆ ಮತ್ತು ಮುಖ್ಯಮಂತ್ರಿಯೊಂದಿಗೆ ಚರ್ಚಿಸುತ್ತೇನೆ. ನಮ್ಮ ರಾಜ್ಯದ ಕೇಂದ್ರ ಸಚಿವರೊಂದಿಗೆ ಸಹ ಮಾತನಾಡುತ್ತೇನೆ. ಚಂದ್ರಬಾಬು ನಾಯ್ಡು ಅಂತಹ ಹೇಳಿಕೆ ನೀಡಿದ್ದರೆ, ಅದು ತಪ್ಪಾಗುತ್ತದೆ. ಅವರು ತಮ್ಮ ರಾಜ್ಯದಲ್ಲಿ ಊಂಖ ಘಟಕವನ್ನು ಸ್ಥಾಪಿಸಲು ಕೇಳಬಹುದು, ಆದರೆ ಅವರು ಕರ್ನಾಟಕದಲ್ಲಿ ಇರುವುದನ್ನು ಸ್ಥಳಾಂತರಿಸಲು ಕೇಳಿದ್ದರೆ ಅದು ಸರಿಯಲ್ಲ ಮತ್ತು ಕಳವಳಕಾರಿ” ಎಂದು ಸಚಿವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಇಂದು ನಗರದಲ್ಲಿ ವರದಿಗಾರರನ್ನುದ್ದೇಶಿಸಿ ಮಾತನಾಡಿದ ಎಂಬಿ ಪಾಟೀಲ್ ಅವರು, ನಮ್ಮ ರಾಜ್ಯದ #ಊಂಖ ಘಟಕವನ್ನು ಆಂಧ್ರ ಪ್ರದೇಶಕ್ಕೆ ಸ್ಥಳಾಂತರ ಮಾಡುವಂತೆ ಅಲ್ಲಿನ ಮುಖ್ಯಮಂತ್ರಿಗಳಾದ ಚಂದ್ರಬಾಬು ನಾಯ್ಡು ಅವರು ಕೇಂದ್ರ ಸರ್ಕಾರಕ್ಕೆ ಕೋರಿರುವುದಾಗಿ ಮಾಧ್ಯಮಗಳಲ್ಲಿ ವರದಿಯಾಗಿದೆ. ಹಾಗೊಂದು ವೇಳೆ ಅವರು ಮನವಿ ಮಾಡಿದ್ದರೆ ಅದು ತಪ್ಪು. ರಾಜ್ಯಗಳ ನಡುವಿನ ಸಹಕಾರಕ್ಕೆ ಸೂಕ್ತವಲ್ಲ. ಈ ಬಗ್ಗೆ ನಾವು ಗಂಭೀರವಾಗಿ ಚರ್ಚಿಸುತ್ತೇವೆ ಎಂದಿದ್ದಾರೆ.

ವರದಿಗಳ ಪ್ರಕಾರ, ನಾಯ್ಡು ಇತ್ತೀಚೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರೊಂದಿಗಿನ ಭೇಟಿಯ ಸಮಯದಲ್ಲಿ ಅಂತಹ ಪ್ರಸ್ತಾಪ ಮಾಡಿದ್ದಾರೆ ಎನ್ನಲಾಗಿದೆ.

## ಜನನ, ಮರಣ ನೋಂದಣಿ ವಿಳಂಬಕ್ಕೆ ಆಸ್ಪದವಿಲ್ಲ : ಡಿಸಿ



**ದಾವಣಗೆರೆ :** ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ಯಾವುದೇ ಕಾರಣಕ್ಕೂ ವಿಳಂಬವಾಗಬಾರದು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಹೇಳಿದರು.

ಸೋಮವಾರ(ಮೇ.26) ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಜಿಲ್ಲಾ ಮಟ್ಟದ ನಾಗರೀಕ ನೋಂದಣಿ ಪದ್ದತಿಯ ಸಮನ್ವಯ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನ್ಯಾಯಾಲಯದ ಆದೇಶದಂತೆ ಜನನ, ಮರಣದಿನಾಂಕವುನೋಂದಾಣಿಯಾಗಬೇಕು. ನ್ಯಾಮತಿಯಲ್ಲಿ ನೋಂದಾಣಿಗೆ ಶೀಘ್ರವೇ ಲಾಗಿನ್ ಸಮಸ್ಯೆಯನ್ನು ಸರಿಮಾಡಿಸಬೇಕು. ಸಾರ್ವಜನಿಕರು ಜನನ ದಿನಾಂಕವನ್ನು ತಿದ್ದುಪಡಿ ಮಾಡುವಂತೆ ಒತ್ತಾಯಿಸಬಾರದು. ಜನನ ಮರಣಗಳನ್ನು ನಿಗಧಿತ ದಿನಗಳ ಒಳಗಾಗಿ ಕಡ್ಡಾಯವಾಗಿ ಪ್ರಾಧಿಕಾರದ ಮುಂದೆ ಪ್ರತಿಯೊಬ್ಬರೂ ನೋಂದಾಯಿಸಬೇಕು ಎಂದರು.

2024 ರ ಸಾಲಿನ ಜನವರಿಯಿಂದ ಡಿಸೆಂಬರ್ ಮಾಹೆಯವರೆಗೆ ಜನನ ಅಂಕಿ ಅಂಶದಲ್ಲಿ 14703 ಗಂಡು, 13847 ಹೆಣ್ಣು ಸೇರಿ 28550 ಜನನ ಪ್ರಕರಣಗಳಿವೆ. ಮರಣ ಪ್ರಕರಣಗಳಲ್ಲಿ ಇದೇ ಅವಧಿಯಲ್ಲಿ 9902 ಗಂಡು, 7361, ಹೆಣ್ಣು, 1 ತೃತೀಯ ಲಿಂಗ ಸೇರಿ 17264 ಮರಣ ಪ್ರಕರಣಗಳು ಜಿಲ್ಲೆಯಲ್ಲಿ ಜರುಗಿದೆ.

ಪ್ರಸಕ್ತ 2025 ರ ಸಾಲಿನ ಜನವರಿಯಿಂದ ಏಪ್ರಿಲ್ ವರೆಗೆ ಜನನ ಅಂಕಿ ಅಂಶದಲ್ಲಿ 4593 ಗಂಡು, 4439 ಹೆಣ್ಣು ಸೇರಿ 9032 ಜನನ ಪ್ರಕರಣಗಳಿವೆ. ಮರಣ ಪ್ರಕರಣಗಳಲ್ಲಿ ಇದೇ ಅವಧಿಯಲ್ಲಿ 3313 ಗಂಡು, 2599 ಹೆಣ್ಣು ಸೇರಿ 5912 ಮರಣ ಪ್ರಕರಣಗಳು ಜಿಲ್ಲೆಯಲ್ಲಿ ಜರುಗಿದೆ. ಜನನ ಹಾಗೂ ಮರಣಗಳ ಅಂಕಿ ಅಂಶಗಳನ್ನು ಇ–ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಲಾಗಿದ್ದು ಗ್ರಾಮೀಣ ಪ್ರದೇಶದಲ್ಲಿ ಗ್ರಾಮಲೆಕ್ಕಿಗರು, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಜನನ, ಮರಣ ನೊಂದಣಿ ಪ್ರಾಧಿಕಾರವಾಗಿದ್ದು ನಗರ, ಪಟ್ಟಣ ಪ್ರದೇಶದಲ್ಲಿ ಮುಖ್ಯಾಧಿಕಾರಿ, ಆಯುಕ್ತರು ಪ್ರಾಧಿಕಾರವಾಗಿರುತ್ತಾರೆ.

ಜಿಲ್ಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ 916 ನೊಂದಣಿ ಘಟಕಗಳು, ನಗರ ಪ್ರದೇಶದಲ್ಲಿ 20 ಸೇರಿದಂತೆ ಒಟ್ಟು 936 ನೊಂದಣಿ ಘಟಕಗಳಿರುತ್ತವೆ.

ಜಿಲ್ಲಾ ಸಾಂಖ್ಯಿಕ ಅಧಿಕಾರಿ ನೀಲಾ, ಜಂಟಿ ಕೃಷಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್, ತೋಟಗಾರಿಕೆ ಉಪನಿರ್ದೇಶಕ ರಾಘವೇಂದ್ರ ಪ್ರಸಾದ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ, ಜಿಲ್ಲಾ ಸರ್ಜನ್ ಡಾ; ನಾಗೇಂದ್ರಪ್ಪ ಉಪಸ್ಥಿತರಿದ್ದರು.

### ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಕೋವಿಡ್ ಸಭೆ

## ಜ್ವರ, ನೆಗಡಿ ಇರುವ ವಿದ್ಯಾರ್ಥಿಗಳಿಗೆ ರಜೆ



**ಬೆಂಗಳೂರು:** ಬೆಂಗಳೂರು: ರಾಜ್ಯದಲ್ಲಿ ಮತ್ತೆ ಕೊರೋನಾ ಉಲ್ಬಣಗೊಳ್ಳುವ ಆತಂಕ ಎದುರಾಗಿದ್ದು, ಪರಿಸ್ಥಿತಿಯನ್ನು ಅವಲೋಕಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಆರೋಗ್ಯ ಇಲಾಖೆ ಮತ್ತು ಶಿಕ್ಷಣ ಇಲಾಖೆ ಸಚಿವರು, ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಸಭೆಯಲ್ಲಿ ಅಧಿಕಾರಿಗಳು, ತಜ್ಞರು ಮತ್ತು ಸಚಿವರುಗಳಿಂದ ಮಾಹಿತಿ ಪಡೆದ ಮುಖ್ಯಮಂತ್ರಿಗಳು ಹಲವು ಸೂಚನೆಗಳನ್ನು ನೀಡಿದ್ದಾರೆ.

ಕೊರೋನಾ ನಿಯಂತ್ರಣಕ್ಕೆ ಎಲ್ಲ ಸಿದ್ಧತೆಗಳನ್ನ ಮಾಡಿಕೊಳ್ಳಿ. ಕಳೆದ ಬಾರಿ ಆದಂತೆ ಈ ಬಾರಿ ಸಮಸ್ಯೆ ಆಗಬಾರದು. ಕೋವಿಡ್? ಸಹಾಯವಾಣಿ?? ತೆರೆಯಿರಿ ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸಿಎಂ ಮಹತ್ವದ ಸೂಚನೆ ನೀಡಿದರು. ಅಲ್ಲದೇ ಜ್ವರ, ನೆಗಡಿ ಇರುವ ಮಕ್ಕಳಿಗೆ ರಜೆ ನೀಡುವಂತೆ ಶಾಲೆಗಳಿಗೆ ಸೂಚಿಸಿದ್ದಾರೆ. ಪ್ರತಿ ವಾರ ಕೊವಿಡ್ ಟಾಸ್ಕ್ ಫೋರ್ಸ್ ಸಭೆ ನಡೆಸಿ ಪರಿಸ್ಥಿತಿ ಅವಲೋಕಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

## ಸಚಿವರು, ಸಂಸದರ ಕೊಡುಗೆ ಏನೆಂದು ತಿಳಿಸಲಿ

### ಯಶವಂತ ರಾವ್ ಜಾಧವ್ ಸವಾಲು

**ದಾವಣಗೆರೆ:** ದಾವಣಗೆರೆಯನ್ನು ಸಿಂಗಾಪುರ್ ನಂತೆ ಮಾಡಲು 10 ವರ್ಷ ಮಂತ್ರಿಯಾಗಿ ಎಸ್.ಎಸ್. ಮಲ್ಲಿಕಾರ್ಜುನ್ ಹಾಗೂ ಹಿಂದಿನ ಸಂಸದರು 25 ವರ್ಷಗಳಲ್ಲಿ ಮಾಡದ ಕೆಲಸವನ್ನು ಒಂದು ವರ್ಷದಲ್ಲಿ ಇಂದಿನ ಸಂಸದರು ಏನೇನು ಮಾಡಿದ್ದಾರೆ ಎಂಬುದನ್ನು ಪಟ್ಟಿ ಮಾಡಿ, ದಾಖಲೆ ಸಮೇತ ಬಿಡುಗಡೆ ಮಾಡಲಿ ಎಂದು ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಯಶವಂತ ರಾವ್ ಜಾಧವ್ ಸವಾಲು ಹಾಕಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಕಾಂಗ್ರೆಸ್‌ನ ಮಾಜಿ ಮೇಯರ್, ಮಾಜಿ ಕಾರ್ಪೋರೇಟರ್ ಹಾಗೂ ನಗರಾಭಿವೃದ್ಧಿ




ಪ್ರಾಧಿಕಾರದ ಅಧ್ಯಕ್ಷರು ಸುದ್ದಿಗೋಷ್ಠಿ ನಡೆಸಿ ಹೇಳಿದ್ದು, ದಾಖಲೆ ಸಮೇತ ಬಂದರೆ ನಾವು ಚರ್ಚೆಗೆ ಸಿದ್ಧ ಎಂದರು.

ದಾವಣಗೆರೆಯಲ್ಲಿ ಜಿಲ್ಲಾಡಳಿತ ಭವನ, ಮಹಾನಗರ ಪಾಲಿಕೆ ಮಾಡಿದ್ದು, ವಿಶ್ವವಿದ್ಯಾಲಯ, 104 ಉದ್ಯಾನಗಳ ಅಭಿವೃದ್ಧಿ, ಆಧುನಿಕ ರೈಲ್ವೆ ನಿಲ್ದಾಣ, ಪಾಸ್ ಪೋರ್ಟ್ ಕಚೇರಿ, ಕಾರ್ಮಿಕ ಆಸ್ಪತ್ರೆಗೆ ವಿಶೇಷ ಸವಲತ್ತು, ಹೆಣ್ಣು ಮಕ್ಕಳ ಆಸ್ಪತ್ರೆಗೆ 150 ಬೆಡ್, ಆವರಗೊಳ್ಳದಲ್ಲಿ ಕೇಂದ್ರೀಯ ವಿದ್ಯಾಲಯ, ಸಿಆರ್ ಸಿ ಕೇಂದ್ರ, ಹರಿಹರದಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ20 ಕೋಟಿ, ನಾಲಾ ಆಧುನೀಕರಣ, ಬರೆದ ನಾಡು ಜಗಳೂರಿಗೆ 22 ಕೆರೆ ನೀರು ಯೋಜನೆ, ಕೆಎಸ್ಆರ್ಟಿಸಿ ಹಾಗೂ ಖಾಸಗಿ ಬಸ್ ನಿಲ್ದಾಣದ ಅಭಿವೃದ್ಧಿಯಲ್ಲಿ ನಮ್ಮ ಸಿದ್ದೇಶ್ವರ್ ಅವರ ಶ್ರಮವಿದೆ ಎಂದರು.

ಇದಲ್ಲದೆ ಸಾಫ್ಟ್ ವೇರ್ ಟೆಕ್ನಾಲಜಿ ಪಾರ್ಕ್ ಇಂಡಿಯಾ, ಥೀಮ್ ಪಾರ್ಕ್ ಅಭಿವೃದ್ಧಿ, ಬಾಡಾ ಕ್ರಾಸ್ ಬಳಿ ಅಂಡರ್ ಪಾಸ್ ಗೆ ಅನುದಾನ, ಜಿಲ್ಲಾಸ್ಪತ್ರೆಗೆ 34 ಕೋಟಿ ಅನುದಾನ, ಹರಿಹರದ ಅಮರಾವತಿ ಮೇಲ್ಸೇತುವೆ, ಜಿಲ್ಲಾಸ್ಪತ್ರೆಗೆ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯ, ನಿರ್ಮಾಣಕ್ಕೆ ಕಾರಣರಾದವರು ಜಿ.ಎಂ. ಸಿದ್ದೇಶ್ವರ್ ಎಂದು ಹೇಳಿದರಲ್ಲದೆ,

ದಾವಣಗೆರೆ ಅಭಿವೃದ್ಧಿಗೆ ತ್ರಿಬಲ್ ಇಂಜಿನ್ ಕೊಡುಗೆ ಶೂನ್ಯ ಎಂದು ಮಾತಿನ ಮೂಲಕ ತಿವಿದರು.

ದಾವಣಗೆರೆ ನಗರದ ಪುರಾತನ ಹೊಂಡದ ಪುಷ್ಕರಣಿ ಅಭಿವೃದ್ಧಿ ಈಗ ನಾನು ಹೇಳಿರುವ ಎಲ್ಲಾ ಅಭಿವೃದ್ಧಿ ಕೆಲಸಗಳನ್ನು ನಮ್ಮ ಅವಧಿಯಲ್ಲಿ ಮಾಡಿಸಿರುವುದಕ್ಕೆ ದಾಖಲೆ ಸಮೇತ ಚರ್ಚೆಗೆ ಸಿದ್ಧರಿದ್ದೇವೆ ಎಂದರು.

ಸುದ್ದಿಗೋಷ್ಠಿಯಲ್ಲಿ, ಅಣಬೇರು ಜೀವನ ಮೂರ್ತಿ, ಬಿ. ರಮೇಶ್ ನಾಯಕ್, ಕೊಂಡಜ್ಜಿ ಜಯಪ್ರಕಾಶ್, ಟಿಂಕರ್ ಮಂಜಣ್ಣ, ನೀಲಗುಂದ ಜಯಣ್ಣ, ಶಿವನಗೌಡ ಪಾಟೀಲ್ ಉಪಸ್ಥಿತರಿದ್ದರು.

## ಗ್ಯಾಂಗ್ ರೇಪ್ ರೋಡ್ ಶೋ ನಡೆಸಿದ ಆರೋಪಿಗಳು ಮತ್ತೆ ಜೈಲಿಗೆ

**ಹಾವೇರಿ :** ಜಾಮೀನು ದೊರೆಯುತ್ತಿದ್ದಂತೆ ಜೈಲಿನಿಂದ ಹೊರಬಂದು ರೋಡ್ ಶೋ ನಡೆಸಿದ ಹಾನಗಲ್ ಗ್ಯಾಂಗ್ ರೇಪ್ ಆರೋಪಿಗಳು ಮತ್ತೆ ಜೈಲುಪಾಲಾಗಿದ್ದಾರೆ.

ರೋಡ್ ಶೋ ನಡೆಸಿದ್ದ 7 ಮಂದಿ ಅತ್ಯಾಚಾರ ಆರೋಪಿಗಳಿಗೆ ಜೂನ್ 2 ರವರೆಗೆ ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ.

ಆರೋಪಿಗಳಿಗೆ ತಾಲೂಕು ಮ್ಯಾಜಿಸ್ಟ್ರೇಟ್ ನ್ಯಾಯಾಂಗ ಬಂಧನ ವಿಧಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಆರೋಪಿಗಳನ್ನ ಮತ್ತೆ ಹಾವೇರಿ



ಸಬ್ ಜೈಲಿಗೆ ಹಾಕಲಾಗಿದೆ. ಈ ಆರೋಪಿಗಳು ಹಾನಗಲ್ ಗ್ಯಾಂಗ್ ರೇಪ್ ಪ್ರಕರಣದಲ್ಲಿ 17 ತಿಂಗಳು ಜೈಲಿನಲ್ಲಿದ್ದರು. ಕಳೆದ ನಾಲ್ಕು ದಿನಗಳ ಹಿಂದಷ್ಟೇ ಜಾಮೀನು ಪಡೆದು ಹೊರ ಬಂದಿದ್ದರು.

ಜಾಮೀನು ಸಿಕ್ಕಿದ್ದೇ ತಡ ಆರೋಪಿಗಳು 30 ಕಿ.ಮೀ ರೋಡ್ ಶೋ ನಡೆಸಿದ್ದರು. ರೋಡ್ ಶೋ ವಿಡಿಯೋಗಳನ್ನು ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದರು.

ಜಾಮೀನು ಷರತ್ತುಗಳನ್ನು ಉಲ್ಲಂಘಿಸಿದ ಹಿನ್ನೆಲೆಯಲ್ಲಿ ಮತ್ತೆ ಆರೋಪಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದರು. ಅಲ್ಲದೆ ಆರೋಪಿಗಳ ಜಾಮೀನು ರದ್ದು ಪಡಿಸುವಂತೆ ತನಿಖಾಧಿಕಾರಿಗಳು ಅರ್ಜಿ ಸಲ್ಲಿಸಿದ್ದಾರೆ.

ಆರೋಪಿಗಳನ್ನು ರೌಡಿಪಟ್ಟಿಗೆ ಸೇರಿಸಿ ಹೊಸ ಕೇಸ್ ಸಹ ಪೊಲೀಸರು ದಾಖಲಿಸಿದ್ದಾರೆ. ಜೂನ್ 2 ರವರೆಗೆ ಆರೋಪಿಗಳು ನ್ಯಾಯಾಂಗ ಬಂಧನದಲ್ಲಿರಲಿದ್ದು, ನಂತರ ನ್ಯಾಯಾಲಯದ ನಿರ್ದೇಶನದ ಮೇರೆಗೆ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಜಿಎಂ ವಿವಿಯಿಂದ ಮೂರು ದಿನಗಳ ಪಿಜಿಸಿಇಟಿ ಕ್ರ್ಯಾಶ್ ಕೋರ್ಸ್




**ದಾವಣಗೆರೆ:** ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಈ ಸಾಲಿನಲ್ಲಿ ನಡೆಸಲಾಗುವ ಎಂಬಿಎ ಕೋರ್ಸ್‌ನ ಪ್ರವೇಶದ ಅರ್ಹತಾ ಪರೀಕ್ಷೆಗೆ ಅರ್ಹ ವಿದ್ಯಾರ್ಥಿಗಳನ್ನು ಪೂರ್ವ ತಯಾರಿಗೊಳಿಸುವ ನಿಟ್ಟಿನಲ್ಲಿ ಜಿಎಂ ವಿಶ್ವವಿದ್ಯಾಲಯದಿಂದ ಉಚಿತವಾಗಿ ಜೂನ್ 2, 3 ಹಾಗೂ 4 ಮೂರು ದಿನಗಳ ಕಾಲ ಉಚಿತವಾಗಿ ಕ್ಯಾಶ್ ಕೋರ್ಸ್ ನೀಡುವುದಾಗಿ ವಿಭಾಗದ ಮುಖ್ಯಸ್ಥ ಡಾ. ಪಿ.ಎಸ್. ಬಸವರಾಜು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೇ 31, 2025 ರಂದು ಎಂಇ, ಎಂ.ಟೆಕ್ ಪರೀಕ್ಷೆಗಳು ನಡೆಯಲಿದೆ. ಜೂನ್ 22, 2025 ರಂದು ಎಂಬಿಎ, ಎಂಸಿಎ ಪರೀಕ್ಷೆಗಳು ನಡೆಯಲಿದೆ. ಈ ಹಿನ್ನೆಲೆ ಪ್ರೊಫೆಶಿಯನ್ಸಿ ಇನ್ ಇಂಗ್ಲಿಷ್ ಲಾಂಗ್ರೇಜ್, ಟೆಸ್ಟ್ ಫಾರ್ ರೀಸನಿಂಗ್ ಅಂಡ್ ಜನರಲ್ ಇಂಟಲಿಜೆಂನ್, ಜನರಲ್ ನಾಲೆಡ್, ಕ್ಯಾಂಟಿಟೇಟಿವ್ ಅನಾಲಿಸಿಸ್ ಎಂಬ ಎಂಬಿಎ ಪಿಜಿಸಿಇಟಿ ಪಠ್ಯಕ್ರಮವನ್ನು ಒಳಗೊಂಡ ವಿಷಯಗಳ ಮೇಲೆ ಬೆಂಗಳೂರಿನ ಪರಿಣಿತರಿಂದ ತರಬೇತಿ ನೀಡಲಾಗುವುದು. ಈ ಮೂರು ದಿನಗಳು ಬೆಳಗ್ಗೆ 9 ಗಂಟೆಯಿಂದ ಸಂಜೆ 5 ರವರೆಗೆ ತರಗತಿ ನಡೆಯಲಿದೆ ಎಂದು ವಿವರಿಸಿದರು.

ಚಿತ್ರದುರ್ಗ, ಹೊನ್ನಾಳಿ, ಶಿವಮೊಗ್ಗ, ಹಾವೇರಿ, ರಾಣೆಬೆನ್ನೂರು, ಹರಪನಹಳ್ಳಿ ಸೇರಿದಂತೆ ವಿವಿಧ ಜಿಲ್ಲೆಗಳ 150ಕ್ಕೂ ಹೆಚ್ಚು ಅಸಕ್ತ ಅರ್ಹ ವಿದ್ಯಾರ್ಥಿಗಳು ತರಬೇತಿ ಪಡೆಯಲು ನೋಂದಣಿ ಮಾಡಿಸಿದ್ದಾರೆ. ಆಸಕ್ತಿಯುಳ್ಳ ವಿದ್ಯಾರ್ಥಿಗಳಿಗೆ ಉಚಿತ ತರಬೇತಿಗೆ ಅವಕಾಶವಿದ್ದು, https://forms.gle/WbA-b1WsX2mN94GTS6 ನೋಂದಾಯಿಸಿಕೊಳ್ಳಬಹುದು. ಅಲ್ಲದೇ 8553654836 ಈ ದೂರವಾಣಿ ಸಂಖ್ಯೆಗೆ ವಿವರಣೆ ಸಹಿತ ವಾಟ್ಸಪ್ ಸಂದೇಶ ಕಳುಹಿಸಬಹುದು ಎಂದು ಹೇಳಿದರು.

ತರಬೇತಿಯ ಕೊನೆಯ ದಿನದಂದು ಜಿಎಂ ವಿಶ್ವವಿದ್ಯಾಲಯದಲ್ಲಿ ಪ್ರವೇಶ ಪಡೆಯುವ ತರಬೇತಿ ಪಡೆದ ಆಯ್ದ ಅರ್ಹ ವಿದ್ಯಾರ್ಥಿಗಳಿಗೆ ಶುಲ್ಕದಲ್ಲಿ ವಿಶೇಷ ರಿಯಾಯಿತಿ ನೀಡಲಾಗುವುದು. ಅಲ್ಲದೇ ತರಬೇತಿಯಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ಆಕರ್ಷಕ ಬಹುಮಾನ ನೀಡಲಾಗುವುದು ಎಂದರು.


ಸುದ್ದಿಗೋಷ್ಠಿಯಲ್ಲಿ ಜಿಎಂ ವಿಶ್ವವಿದ್ಯಾಲಯದ ಪ್ರಚಾರ ವಿಭಾಗದ ಡೀನ್ ಡಾ. ಟಿ.ಎಂ. ವೀರ ಗಂಗಾಧರಸ್ವಾಮಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಅಹಲ್ಯಾ ಬಾಯಿ ಹೋಳ್ಕರ್ ಭಾರತೀಯ ಸಂಸ್ಕೃತಿಯ ಉನ್ನತಿಗೆ ಶ್ರಮಿಸಿದ ಸಾಧ್ವಿ: ಹೇಮಲತಾ ನಾಯಕ್

**ದಾವಣಗೆರೆ:** ಅಹಲ್ಯಾ ಬಾಯಿ ಹೋಳ್ಕರ್ ಒಬ್ಬ ಉತ್ತಮ ಆಡಳಿತಗಾರಳು ಎನ್ನುವುದಷ್ಟೇ ಅಲ್ಲ, ಆಕೆ ಭಾರತೀಯ ಸಂಸ್ಕೃತಿಯ ಉನ್ನತಿಗೆ ಶ್ರಮಿಸಿದ ಸಾಧ್ವಿ ಎಂಬ ಅಭಿಮಾನದ ನುಡಿಗಳನ್ನು ಕೊಪ್ಪಳ ವಿಧಾನಪರಿಷತ್ ಸದಸ್ಯೆ ಹೇಮಲತಾ ನಾಯಕ್ ಆಡಿದರು.

ಸೋಮವಾರ ನಗರದ ಬಿಜೆಪಿ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಜಮಾತೆ ಅಹಲ್ಯಾ ಬಾಯಿ ಹೋಳ್ಕರ್ ಅವರ 300 ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಭಾರತೀಯರ ಮನದಾಳದಲ್ಲಿ ಚಿರಸ್ಥಾಯಿಯಾಗಿ ನಿಲ್ಲಲು ಕಾರಣ ಆಕೆಯ ಉತ್ತಮ ಆಡಳಿತ, ಜನಾನುರಾಗಿ ಕಾರ್ಯಗಳು, ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಕ್ಷೇತ್ರಗಳಲ್ಲಿ ತಂದೆ ಗಮನಾರ್ಹ ಅಭಿವೃದ್ಧಿ ಕಾರ್ಯಗಳಿಂದ ಇಂದಿಗೂ ಮನೆಮಾತಾಗಿದ್ದಾರೆ ಎಂದರು.




ಅಹಲ್ಯಾ ಬಾಯಿ ತಮ್ಮ ಜೀವನದಲ್ಲಿ ಎದುರಿಸಿದ ಕಷ್ಟ ನಷ್ಟಗಳಿಗೆ ದುಃಖಿಸದೆ, ಧೃತಿಗೆಡದೆ ದಿಟ್ಟ ಆಡಳಿತಗಾರಳಾಗಿ ಮಾಳ್ವದ ಪ್ರಾಂತ್ಯವನ್ನು ಆಳಿದ ಕೀರ್ತಿ ಸಲ್ಲುತ್ತದೆ. ಅಂದಿನ ದಿನಗಳಲ್ಲೇ ಬಾಲ್ಯ ವಿವಾಹ, ಸತಿಸಹಗಮನದಂತಹ ಅನಿಷ್ಟ ಪದ್ಧತಿ ವಿರುದ್ಧ ನಿಂತಳು. ವಿಧವೆಯರನ್ನು ಕಟ್ಟುಪಾಡುಗಳಿಂದ ಹೊರತಂದು, ಶಿಕ್ಷಣ ಹಾಗೂ ಮರುವಿವಾಹಕ್ಕೆ ಮುಂದಾದಳು. ಬಾಲ್ಯ ವಿವಾಹವಾದ ಹೆಣ್ಣು ಮಕ್ಕಳಿಗೆ ಸೈನಿಕ ತರಬೇತಿ ನೀಡಲಾಯಿತು. ವಿಧವೆಯರಿಗೆ ಆಸ್ತಿಯ ಮೇಲೆ ಹಕ್ಕು ಇದೆ ಸಾರುವ ಮೂಲಕ ಮಹಿಳಾ ಸಬಲೀಕರಣಕ್ಕೆ ಪ್ರಾಮುಖ್ಯತೆ ನೀಡಿದ ಅಹಲ್ಯಾ ಬಾಯಿ ನಮಗೆ ಮಾದರಿಯಾಗಿದ್ದಾರೆ ಎಂದು ತಿಳಿಸಿದರು.

ತನ್ನ 30 ವರ್ಷಗಳ ಆಡಳಿತದಲ್ಲಿ ಇಂದೋರ್ ನಗರವನ್ನು ಒಂದು ಪ್ರಮುಖ ನಗರವಾಗಿ ಮಾರ್ಪಡಿಸಿದಲ್ಲದೆ ಕೈಗಾರಿಕೆಗಳನ್ನು, ವಿಶ್ವವಿದ್ಯಾಲಯಗಳನ್ನು ನಿರ್ಮಿಸಲಾಯಿತು. ಕೇವಲ ತನ್ನ ರಾಜ್ಯದಲ್ಲಿ ಮಾತ್ರವಲ್ಲದೆ ಭರತ ಖಂಡದಾದ್ಯಂತ ಮಂದಿರಗಳು, ಧರ್ಮ ಛತ್ರಗಳು, ಸ್ನಾನ ಘಟ್ಟಗಳು, ದೇವಸ್ಥಾನಕ್ಕೆ ದಾನ, ದತ್ತಿ, ಪ್ರಮುಖವಾಗಿ ವಾರಣಾಸಿಯ ಕಾಶಿ ವಿಶ್ವನಾಥ ಮಂದಿರ, ಚೋಳದ ಗೌರಿ ಸೋಮನಾಥ ಮಂದಿರ ಮತ್ತು ಬನಾರಸ್‌ನಲ್ಲಿ ಪ್ರಸಿದ್ಧ ದಶಾಶ್ವಮೇಧ ಘಾಟ್‌ನ ನಿರ್ಮಾಣದಂತಹ ಹಲವಾರು ಪ್ರಸಿದ್ಧ ದೇವಾಲಯಗಳ ದುರಸ್ತಿ ಹಾಗೂ ನಿರ್ಮಾಣದ ಕೀರ್ತಿ ಆಕೆಗೆ ಸಲ್ಲುತ್ತದೆ ಎಂದು ವಿವರಿಸಿದರು.

ವೇದಿಕೆಯಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಅನಿಲ್ ಕುಮಾರ್ ನಾಯಕ್, ಅಣ್ಣೇಶ್, ರಾಜ್ಯ ಮಹಿಳಾ ಮೋರ್ಚಾ ಉಪಾಧ್ಯಕ್ಷೆ ಬಿ. ಜಯಮ್ಮ, ಜಿಲ್ಲಾ ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ಭಾಗ್ಯ ಪಿಸಾಳೆ, ಪುಷ್ಪ ವಾಲಿ, ರೇಣುಕ ಉಪಸ್ಥಿತರಿದ್ದರು.

ರೂಪ ಹಾಗೂ ಕಮಲ ಪ್ರಾರ್ಥಿಸಿದರು. ಗೌರಮ್ಮ ಪಾಟೀಲ್ ಸ್ವಾಗತಿಸಿದರು.

## ಬಿಜೆಪಿಯವರ ಸೋಗಿನ ಬಾಗಿನದ ಅವಶ್ಯಕತೆ ನನಗಿಲ್ಲ: ಲಕ್ಷ್ಮೀ ಹೆಬ್ಬಾಳ್ಕರ್



**ಚಿಕ್ಕಮಗಳೂರು:** ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರು ಸದನದಲ್ಲಿ ಮಾಡಬಾರದ ಅವಮಾನ ಮಾಡಿದ್ದಾರೆ. ಈಗ ಬಾಗಿನ ನೀಡಲು ಬಂದಿದ್ದಾರೆ. ಬಿಜೆಪಿಯವರ ಸೋಗಿನ ಬಾಗಿನದ ಅವಶ್ಯಕತೆ ನನಗಿಲ್ಲ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿಕ್ಕಮಗಳೂರಿನ ಜನತೆ ನನಗೆ ಮನೆ ಮಗಳಂತೆ ಸ್ವಾಗತ ಕೋರಿದ್ದಾರೆ. ಅದು ನನಗೆ ಸಾಕು ಎಂದರು.

ಬೆಳಗಾವಿಯಲ್ಲಿ ವೈದ್ಯಕೀಯ ವಿದ್ಯಾರ್ಥಿನಿಯ ಮೇಲೆ ನಡೆದ ಅತ್ಯಾಚಾರ ಪ್ರಕರಣವನ್ನು ಕಠಿಣ ಶಬ್ದದಿಂದ ಖಂಡಿಸುತ್ತೇನೆ. ಆರೋಪಿಗಳು ಯಾರೇ ಆಗಿದ್ದರೂ ಅತ್ಯಂತ ಕಠಿಣವಾದ ಶಿಕ್ಷೆ ನೀಡಬೇಕು ಎಂದು ಒತ್ತಾಯಿಸುತ್ತೇನೆ ಎಂದರು.

ಪ್ರಕರಣವನ್ನು ಕಂಪ್ಲೀಟ್ ಆಗಿ ಟ್ರ್ಯಾಕ್ ಮಾಡುತ್ತಿದ್ದೇನೆ. ಸಂತ್ರಸ್ತೆಯ ಮನೆಯವರು ಹಾಗೂ ಪೊಲೀಸರ ಜೊತೆ ನಿರಂತರ ಸಂಪರ್ಕದಲ್ಲಿ ಇದ್ದೇನೆ. ಜೊತೆಗೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪಿನ್ ಟು ಪಿನ್ ಮಾಹಿತಿಯನ್ನು ಪಡೆದುಕೊಳ್ಳುತ್ತಿದ್ದೇನೆ. ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಆಗಲೇಬೇಕು. ಅವರಿಗೆ ಕ್ಷಮೆ ಎನ್ನುವುದೇ ಇಲ್ಲ ಎಂದು ಹೇಳಿದರು.

ಬಿಜೆಪಿ ನಡೆಸುತ್ತಿರುವ ಕಲಬುರ್ಗಿ ಚಲೋ ಹೋರಾಟಕ್ಕೆ ಪ್ರತಿಕ್ರಿಯಿಸಿದ ಅವರು, ಪ್ರಜಾಪ್ರಭುತ್ವವಿದೆ. ಅವರು ಎಲ್ಲಿಗೆ ಬೇಕಾದರೂ ಚಲೋ ಕೊಡಬಹುದು ಎಂದು ವ್ಯಂಗ್ಯವಾಡಿದರು.

## ಆದಿವಾಸಿಗಳಿಗೆ ವಿಷಯುಕ್ತ ಆಹಾರ ಪೂರೈಕೆ : ಕ್ರಮಕ್ಕೆ ಒತ್ತಾಯ

**ಚಿಕ್ಕಮಗಳೂರು :** ಆದಿವಾಸಿ ಸಮುದಾಯದವರಿಗೆ ಗುಣಮಟ್ಟದ ಪೌಷ್ಠಿಕ ಆಹಾರ ವಿತರಿಸ ಬೇಕು ಎಂದು ಸಮುದಾಯದ ಮುಖಂಡರು ಶುಕ್ರವಾರ ಸಮಾಜ ಗಿರಿಜನ ಅಭಿವೃದ್ಧಿ ಇಲಾಖೆ ಸಮನ್ವ ಯಾಧಿಕಾರಿ ರಮೇಶ್ ಅವರಿಗೆ ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಜನಾಂಗದ ಮುಖಂಡ ಗೋಪಾಲ್ ಬಾಳೆಹೊನ್ನೂರಿನ ಬಿ.ಕಣಬೂರು ಗ್ರಾಮ ಸೇರಿದಂತೆ ವಿವಿದೆಡೆ ಆದಿವಾಸಿ ಹಸಲರು, ಗೌಡಲು ಜನಾಂಗದವರಿಗೆ ಆಹಾರ ಪದಾರ್ಥಗಳು ಗು ಣಮಟ್ಟ ಕಾಪಾಡದೇ ಕಳಪೆಯಾಗಿ ಬೇಕಾಬೇಟ್ಟಿಯಾಗಿ ನೀಡಲು ಮುಂದಾಗುತ್ತಿದೆ ಎಂದರು.

ಆದಿವಾಸಿ ಜನಾಂಗದವರಿಗೆ ವರ್ಷಪೂರ್ತಿ ಸರ್ಕಾರ ಪೌಷ್ಟಿಕ ಆಹಾರ ಯೋಜನೆ ಜಾರಿಗೆ ತಂದು ವಿತರಿಸಲು ಸೂಚಿಸಿದ್ದು ಕಳೆದ ಎರಡು ತಿಂಗಳಿನಿಂದ ಬಾಳೆಹೊನ್ನೂರು ಸುತ್ತಮುತ್ತಲು ಅಕ್ಕಿ, ಬೇಳೆಕಾಲು ಪದಾರ್ಥಗಳನ್ನು ರಸಗೊಬ್ಬರ ಚೀಲಗಳನ್ನು ತುಂಬಿಸಿ ಬಿಸಿಎಂ ಹಾಸ್ಟೆಲ್‌ಗಳ ಮೂಲಕ ವಿತರಿಸಲು ಸಜ್ಜಾಗುತ್ತಿದೆ ಎಂದು ಹೇಳಿದರು.

ಕಳಪೆ ಆಹಾರದ ಸಂಬಂಧ ಅಧಿಕಾರಿಗಳಿಗೆ ದೂರನ್ನು ನೀಡಿದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಬೆಲ್ಲ ಕೊಳೆತು ನಾರಿ ನೀರಾಗುತ್ತಿದೆ. ಅಧಿಕ ಪೌಷ್ಠಿಕ ಆಹಾರವನ್ನು ಗೊಬ್ಬರದ ಚೀಲಗಳಲ್ಲಿ ತುಂಬಿಟ್ಟು ಆದಿ ವಾಸಿಗಳಿಗೆ ವಿಷಯುಕ್ತ ಆಹಾರವನ್ನು ಉಣಿಸುವ ಕೆಲಸ ಗುತ್ತಿಗೆದಾರರು ಮಾಡುತ್ತಿದ್ದಾರೆ ಎಂದರು.

ಕೂಡಲೇ ಕಳಪೆ ಆಹಾರ ಪದಾರ್ಥಗಳನ್ನು ತೆರವುಗೊಳಿಸಿ ಗುಣಮಟ್ಟದ ಆಹಾರವನ್ನು ವಿತರಿಸಬೇಕು ಹಾಗೂ ಕಳಪೆ ಆಹಾರ ಪೂರೈಸುವ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಂಡು ಜಿಲ್ಲಾವಾರು ಟೆಂಡರ್ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಆದಿವಾಸಿ ಸಮುದಾಯದ ಮುಖಂಡರುಗಳಾದ ಚಂದು, ರಮೇಶ್, ಮಧು, ಗೋಪಾಲ್ ಮತ್ತಿತರರಿದ್ದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಮನೆಯಲ್ಲಿನ ಪರಿಸ್ಥಿತಿಗಳಿಂದ ನಿಮಗೆ ಅಸಮಾಧಾನ ಉಂಟಾಗಬಹುದು. ಪ್ರೇಮ ಧನಾತ್ಮಕ ಕಂಪನಗಳನ್ನು ತೋರಿಸುತ್ತದೆ ನೀವು ಒಂದು ಹೊಸ ವ್ಯಾಪಾರ ಪಾಲುದಾರಿಕೆಯನ್ನು ಪರಿಗಣಿಸುತ್ತಿದ್ದಲ್ಲಿ – ನೀವು ಯಾವುದೇ ಬದ್ಧತೆಯನ್ನು ಮಾಡುವ ಮೊದಲು ಎಲ್ಲಾ ಸತ್ಯಾಸತ್ಯತೆಗಳನ್ನು ಅರಿತುಕೊಳ್ಳುವುದು ಅಗತ್ಯ

### ವೃಷಭ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ. ಮನ್ಮಥನ ಬಾಣದಿಂದ ತಪ್ಪಿಸಿಕೊಳ್ಳುವ ಅವಕಾಶ ಕಡಿಮೆಯಿದೆ

### ಮಿಥುನ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ. ನಿಮ್ಮ ಬಿಡುವಿನ ವೇಳೆಯನ್ನು ನಿಮ್ಮ ಮನೆಯ ಸೌಂದರ್ಯ ಹೆಚ್ಚಿಸಲು ಬಳಸಿ.

### ಕರ್ಕ ರಾಶಿ

ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು ಸಂಜೆಯಲ್ಲಿ ಬಗ್ಗೆ ಅನಿರೀಕ್ಷಿತವಾದ ಉತ್ತಮ ಸುದ್ದಿಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತರುತ್ತದೆ.

### ಸಿಂಹ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು–ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ನಿಮ್ಮ ವರ್ತನೆಯಲ್ಲಿ, ವಿಶೇಷವಾಗಿ ನಿಮ್ಮ ಸಂಗಾತಿಯ ಜೊತೆ, ತಾಳ ತಪ್ಪದಿರಲಿ. ಇಲ್ಲವಾದರೆ ಅದು ಮನೆಯಲ್ಲಿನ ಶಾಂತಿಯನ್ನು ಹಾಳಾಗಿಸಬಹುದು.

### ಕನ್ಯಾ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ.

### ತುಲಾ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ ಶೀಘ್ರದಲ್ಲೇ ಸುಧಾರಿಸುತ್ತದೆ. ಹೆಂಡತಿ ನಿಮ್ಮ ಜೀವನವನ್ನು ಬದಲಾಯಿಸಲು ಸಹಾಯ ಮಾಡುತ್ತಾಳೆ. ಇತರರನ್ನು ಊರುಗೋಲಾಗಿ ಅವಲಂಬಿಸುವ ವ್ಯಕ್ತಿಗಿಂತ ತನ್ನ ಜೀವನವನ್ನು ತಾನೇ ರೂಪಿಸಿಕೊಳ್ಳಬಯಸುವ ಒಬ್ಬ ಚೈತನ್ಯಯುಕ್ತ ವ್ಯಕ್ತಿಯಾಗಿ.

### ವೃಶ್ಚಿಕ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು. ಇತರರಲ್ಲಿ ಅನಗತ್ಯವಾಗಿ ದೋಷಗಳನ್ನು ಹುಡುಕುವ ನಿಮ್ಮ ಬುದ್ಧಿಗೆ ಸಂಬಂಧಿಕರಿಂದ ಟೀಕೆ ಎದುರಾಗಬಹುದು.

### ಧನು ರಾಶಿ

ಧ್ಯಾನ ಮತ್ತು ಯೋಗವನ್ನು ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಮಕ್ಕಳು ನಿಮ್ಮ ಗೃಹಕೃತ್ಯಗಳನ್ನು ಮುಗಿಸುವಲ್ಲಿ ನಿಮಗೆ ಸಹಾಯ ಮಾಡುತ್ತಾರೆ. ತಮ್ಮ ಬಿಡುವಿನ ವೇಳೆಯಲ್ಲಿ ಈ ರೀತಿಯ ಚಟುವಟಿಕೆಗಳನ್ನು ಮಾಡಲು ಅವರಿಗೆ ಪ್ರೋತ್ಸಾಹಿಸಿ.

### ಮಕರ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಕುಟುಂಬದಲ್ಲಿ ಕೆಲವು ಸ್ತ್ರೀ ಸದಸ್ಯರ ಆರೋಗ್ಯ ಚಿಂತೆಗೆ ಕಾರಣವಾಗಬಹುದು. ನಿಮ್ಮ ಪ್ರೇಮ ಜೀವನವಾಗಿ ಮದುವೆಯ ಪ್ರಸ್ತಾಪ ಜೀವನಪೂರ್ಣದ ಬಂಧದಲ್ಲಿ ಬದಲಾಗಬಹುದು.

### ಕುಂಭ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಕೋಪ ಅಲ್ಪಾವಧಿ ಹಾಗೂ ಅದು ನಿಮ್ಮನ್ನು ತೊಂದರೆಯಲ್ಲಿ ಸಿಲುಕಿಸಬಹುದೆಂದು ಅರ್ಥ ಮಾಡಿಕೊಳ್ಳುವ ಸಮಯ.

### ಮೀನ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ಒಬ್ಬ ಹಳೆಯ ಸ್ನೇಹಿತರು ಸಂಜೆ ನಿಮಗೆ ಕರೆ ಮಾಡುತ್ತಾರೆ ಮತ್ತು ಹಳೆಯ ನೆನಪುಗಳನ್ನು ತೆರೆದಿಡುತ್ತಾರೆ. ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ. ಸಹೋದ್ಯೋಗಿಗಳು ನಿಮಗೆ ಕೆಲಸದಲ್ಲಿ ಕ್ರಿಯಾತ್ಮಕ ಮತ್ತು ಪ್ರಗತಿಪರ ಬದಲಾವಣೆಯನ್ನು ಮಾಡಲು ಬೆಂಬಲಿಸುತ್ತಾರೆ.

# ಎಲೆಬೇತೂರಿನಲ್ಲಿ ಮದ್ಯವರ್ಜನ ಶಿಬಿರ ಉದ್ಘಾಟನೆ

**ದಾವಣಗೆರೆ:** ಮದ್ಯವರ್ಜನ ಶಿಬಿರ ವ್ಯವಸ್ಥಾಪನಾ ಸಮಿತಿ ಎಲೆಬೇತೂರು ವಲಯ ಇವರ ಆಶ್ರಯದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ (ರಿ.) ದಾವಣಗೆರೆ ಗ್ರಾಮಾಂತರ ಹಾಗೂ ವಿವಿಧ ಸಂಘ ಸಂಸ್ಥೆಗಳು, ದಾನಿಗಳ ಸಂಯುಕ್ತಾಶ್ರಯದಲ್ಲಿ 1927ನೇ ಮದ್ಯವರ್ಜನ ಶಿಬಿರದ ಉದ್ಘಾಟನಾ ಸಮಾರಂಭವನ್ನು ಎಲೆಬೇತೂರು ಅಂಬೇಡ್ಕರ್ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ಗ್ರಾ.ಪಂ. ಅಧ್ಯಕ್ಷ ಕೆ.ಎಂ. ರೇವಣ ಸಿದ್ದಪ್ಪ ನೆರವೇರಿಸಿದರು. ಸಭಾಧ್ಯಕ್ಷತೆ ತಿನ್ನು ಸಮಿತಿಯ ಅಧ್ಯಕ್ಷ ವಹಿಸಿದ್ದರು.

ಯೋಜನಾಧಿಕಾರಿ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಪ್ರಾದೇಶಿಕ ವಿಭಾಗ ಚಿತ್ರದುರ್ಗ ಇದರ ಯೋಜನಾಧಿಕಾರಿ ನಾಗರಾಜ್ ಕುಲಾಲ್ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಮುಖ್ಯ ಅತಿಥಿಗಳಾಗಿ ದಾವಣಗೆರೆ ಜಿಲ್ಲೆಯ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ (ರಿ.)



ನಿರ್ದೇಶಕ ಲಕ್ಷ್ಮಣ್ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಆರಂಭ, ವಿಸ್ತರಣೆಯ ಅನುಭವ ಹಾಗೂ ಸಾಧನೆಗಳ ಪರಿಚಯದೊಂದಿಗೆ ಸಮುದಾಯದ ಕಾರ್ಯಕ್ರಮಗಳಾದ ನಮ್ಮೂರು ನಮ್ಮ ಕೆರೆ, ರುದ್ರಭೂಮಿ ಅನುದಾನ, ಶಿಥಿಲಗೊಂಡ ದೇವಸ್ಥಾನಗಳ ಜೀರ್ಣೋದ್ಧಾರ, ಶಾಲೆಗಳಿಗೆ ಪೀಠೋಪಕರಣ ಒದಗಣೆ, ಜ್ಞಾನದೀಪ ಕಾರ್ಯಕ್ರಮದ ಮುಖೇನ ಗೌರವ ಶಿಕ್ಷಕರ ಒದಗಣೆ, ಶಿಷ್ಯವೇತನ, ಮಾಸಾಶನ, ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮ ಮತ್ತು ಶೈಕ್ಷಣಿಕ, ಸಾಂಸ್ಕೃತಿಕ, ಹಾಗೂ ಧಾರ್ಮಿಕ ಕ್ಷೇತ್ರ ಹೀಗೆ ಹಲವು ವಿಭಾಗಗಳಲ್ಲಿ ಜನಮೆಚ್ಚುಗೆಯೊಂದಿಗೆ ಸಂಸ್ಥೆಯು ವಿಶ್ವ ಮಾನ್ಯತೆಯನ್ನು ಪಡೆದುಕೊಂಡಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ವೇದಿಕೆಯಲ್ಲಿ ಗೌರವಾಧ್ಯಕ್ಷ ಹೆಚ್ ಬಸವರಾಜಪ್ಪ, ಬಸವರಾಜಪ್ಪ ಮಾಳಗೇರಾ , ಸಿದ್ದಯ್ಯ ಟಿ.ಎಂ., ಎಂ ನಾಗರಾಜ್, ವಿಶ್ವನಾಥ್, ಎನ್.ಎಂ. ಬಸಪ್ಪ, ಮಠದ ಬಸವರಾಜಯ್ಯ, ಬಿ. ಶಿವಕುಮಾರ್ ವೈ. ರಮೇಶ್, ಎಸ್ ಬಸವರಾಜ, ಎಸ್.ಕೆ ಚಂದ್ರಶೇಖರ್, ಮಂಜಣ್ಣ, ವಿರೂಪಾಕ್ಷಪ್ಪ, ಬಿ. ಪ್ರಭು, ಕೊಂಡಜ್ಜಿ ಬಸಪ್ಪ, ಪೂಜಾರ್ ಹಾಲಪ್ಪ, ಸೌಭಾಗ್ಯಮ್ಮ, ನಿರ್ಮಲ ಕುಲಕರ್ಣಿ, ಯಶೋಧ, ನಂದಕುಮಾರ್ ಪಿ ಪಿ,, ಪ್ರೆಸಿಲ್ಲಾ ಡಿಸೋಜ, ರುದ್ರಪ್ಪ ಹೂಗಾರ್, ಇನ್ನಿತರ ಗಣ್ಯರು ಉಪಸ್ಥಿತರಿದ್ದರು.

ಇದೇ ವೇಳೆ ನಿವೃತ್ತ ಯೋಧರಾದ ಎಂ.ಎಸ್. ಬಸಪ್ಪ, ಅವರನ್ನು ಗೌರವಿಸಲಾಯಿತು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ (ರಿ.) ಎಲೆಬೇತೂರು ವಲಯದ ಮೇಲ್ವಿಚಾರಕರಾದ ರಮೇಶ್ ನಿರ್ವಹಿಸಿದರು.

ಕಾರ್ಯಕ್ರಮವನ್ನು ಯೋಜನೆಯ ಸಿಬ್ಬಂದಿಗಳು ಪ್ರಾರ್ಥಿಸಿ, ಯಶೋಧ ಯೋಜನಾಧಿಕಾರಿ ಸ್ವಾಗತಿಸಿ, ಕೊಟ್ರೇಶ್ ಮೇಲ್ವಿಚಾರಕರು ನಿರೂಪಿಸಿ, ವಂದಿಸಿದರು.*

## ಥಲಸ್ಸೇಮಿಯಾ ಕಾಯಿಲೆ ಕುರಿತು ಅರಿವಿನ ಕೊರತೆಯಿದೆ: ಡಾ.ಎಂ.ಬಿ. ಕೌಜಲಗಿ

**ದಾವಣಗೆರೆ:** ಥಲಸ್ಸೇಮಿಯಾ ಅನುವಂಶಿಕ ರಕ್ತದ ಕಾಯಿಲೆಯಾಗಿದ್ದು, ಈ ಕಾಯಿಲೆ ಕುರಿತು ಜನಸಾಮಾನ್ಯರಲ್ಲಿ ಅರಿವಿನ ಕೊರತೆ ಇದೆ ಎಂದು ಜಜಮು ವೈದ್ಯಕೀಯ ಮಹಾವಿದ್ಯಾಲಯ ಮಕ್ಕಳ ವಿಭಾಗದ ಪ್ರಾಧ್ಯಾಪಕ ಡಾ. ಎಂ.ಬಿ. ಕೌಜಲಗಿ ಹೇಳಿದರು.

ಗುರುವಾರ ನಗರದ ಬಾಪೂಜಿ ಮಕ್ಕಳ ಆಸ್ಪತ್ರೆಯಲ್ಲಿ ವಿವೇಕ್ ಪೋಷಕರ ಕಾರ್ಯಾಗಾರದಡಿ 'ಥಲಸ್ಸೇಮಿಯಗಾಗಿ ಒಗ್ಗೂಡುವುದು ಸಮುದಾಯಗಳನ್ನು ಒಂದುಗೂಡಿಸಿ ರೋಗಿಗಳಿಗೆ ಆದ್ಯತೆ ನೀಡುವುದು' ವಿಷಯ ಕುರಿತು ಮಾತನಾಡಿದರು.

ಆಮ್ಲಜನಕವನ್ನು ಸಾಗಿಸಲು ಕಾರಣವಾದ ಕೆಂಪು ರಕ್ತ ಕಣಗಳಲ್ಲಿನ ಪ್ರಮುಖ ಪ್ರೋಟಿನ್ ಹಿಮೋಗ್ಲೋಬಿನ್ ಉತ್ಪಾದಿಸುವ ದೇಹದ ಸಾಮರ್ಥ್ಯದ ಮೇಲೆ ಪರಿಣಾಮ ಬೀರುತ್ತದೆ. ಹಿಮೋಗ್ಲೋಬಿನ್ ಅಂಶದ ಉತ್ಪಾದನೆಯು ಕಡಿಮೆಯಾದಾಗ ಅಥವಾ ದೋಷಪೂರಿತವಾದಾಗ ಕೆಂಪು ರಕ್ತ ಕಣಗಳು ಸರಿಯಾಗಿ ಕಾರ್ಯ ನಿರ್ವಹಿಸುವುದಿಲ್ಲ. ಇದು ರಕ್ತಹೀನತೆ ಹಾಗೂ ಇನ್ನಿತರ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತದೆ ಎಂದರು.

ಥಲಸ್ಸೇಮಿಯಾ ಜಾಗತಿಕವಾಗಿ ಪ್ರತಿ 10 ಸಾವಿರ ಜೀವಂತ ಜನನಗಳಲ್ಲಿ ಸರಿ ಸುಮಾರು 4.4ರ ಮೇಲೆ ಪರಿಣಾಮ ಬೀರುತ್ತದೆ. ಇದು ಹಿಮೋಗ್ಲೋಬಿನ್ ಉತ್ಪಾದನೆಯನ್ನು ಅಡ್ಡಿಪಡಿಸಿ ಲಕ್ಷಾಂತರ ಮಕ್ಕಳು. ಜೀವನಪರ್ಯಂತ ರಕ್ತ ವರ್ಗಾವಣೆ ಹಾಗೂ ದುಬಾರಿ ಚಿಕಿತ್ಸೆಗಳ ಮೇಲೆ ಅವಲಂಬಿತರಾಗುವಂತೆ ಮಾಡುತ್ತದೆ ಎಂದರು.

ತಂದೆ–ತಾಯಿಗಳಲ್ಲಿ ಒಬ್ಬರು ಅಥವಾ ಇಬ್ಬರು ದೋಷಯುಕ್ತ ಹಿಮೋಗ್ಲೋಬಿನ್ ಜೀನ್ ಅನ್ನು ಆನುವಂಶಿಕವಾಗಿ ಪಡೆದಾಗ ಮಗುವಿನಲ್ಲಿ ಥಲಸ್ಸೇಮಿಯಾ ಸಂಭವಿಸುತ್ತದೆ. ಇಬ್ಬರೂ ಪಾಲಕರು ರೋಗದ ಜೀನ್ ಹೊಂದಿದ್ದರೆ, ಮಗುವಿಗೆ ತೀವ್ರವಾದ ಥಲಸ್ಸೇಮಿಯಾ ಬರುವ ಸಾಧ್ಯತೆ ಶೇ. 25, ವಾಹಕವಾಗುವ ಸಾಧ್ಯತೆ ಶೇ. 50 ಮತ್ತು



ಸಾಮಾನ್ಯ ಜೀನ್‌ಗಳನ್ನು ಆನುವಂಶಿಕವಾಗಿ ಪಡೆಯುವ ಸಾಧ್ಯತೆ ಶೇ. 25 ರಷ್ಟು ಇರುತ್ತದೆ ಎಂದು ತಿಳಿಸಿದರು.

ಥಲಸ್ಸೇಮಿಯಾ ಇರುವವರಲ್ಲಿ ಆಯಾಸ ಹಾಗೂ ದೌರ್ಬಲ್ಯಗಳು ಉಂಟಾಗುತ್ತವೆ. ಕಾಮಾಲೆ (ಹಳದಿ ಬಣ್ಣದ ಚರ್ಮ ಮತ್ತು ಕಣ್ಣುಗಳು),ಹೆಚ್ಚಿನ ದೈಹಿಕ ಚಟುವಟಿಕೆಯಲ್ಲಿ ಭಾಗಿಯಾದಾಗ ತಲೆಸುತ್ತುವಿಕೆ, ಉಸಿರಾಟದ ತೊಂದರೆ ಉಂಟಾಗುತ್ತದೆ ಎಂದು ರೋಗದ ಲಕ್ಷಣಗಳನ್ನು ತಿಳಿಸಿದರಲ್ಲದೆ, ರೋಗದ ಚಿಕಿತ್ಸಾ ವಿಧಾನಗಳನ್ನು ವಿವರಿಸಿದರು. ಥಲಸ್ಸೇಮಿಯಾ ಇರುವವರಲ್ಲಿ ಆಯಾಸ ಹಾಗೂ ದೌರ್ಬಲ್ಯಗಳು ಉಂಟಾಗುತ್ತವೆ. ಕಾಮಾಲೆ (ಹಳದಿ ಬಣ್ಣದ ಚರ್ಮ ಮತ್ತು ಕಣ್ಣುಗಳು),ಹೆಚ್ಚಿನ ದೈಹಿಕ ಚಟುವಟಿಕೆಯಲ್ಲಿ ಭಾಗಿಯಾದಾಗ ತಲೆಸುತ್ತುವಿಕೆ, ಉಸಿರಾಟದ ತೊಂದರೆ ಉಂಟಾಗುತ್ತದೆ ಎಂದು ರೋಗದ ಲಕ್ಷಣಗಳನ್ನು ತಿಳಿಸಿದರಲ್ಲದೆ, ರೋಗದ ಚಿಕಿತ್ಸಾ ವಿಧಾನಗಳನ್ನು ವಿವರಿಸಿದರು.

ಥಲಸ್ಸೇಮಿಯಾ ಹೆಚ್ಚಿರುವ ಪ್ರದೇಶಗಳಲ್ಲಿ ಸರ್ಕಾರ ದಂಪತಿಗಳಿಗೆ ಉಚಿತ ಸ್ಕ್ರೀನಿಂಗ್ ವ್ಯವಸ್ಥೆಗೆ ಒತ್ತು ನೀಡಬೇಕು. ಆರೋಗ್ಯ ಇಲಾಖೆಯು ಈ ನಿಟ್ಟಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಅನುವಂಶಿಕ ಸಮಾಲೋಚನೆಯ ವ್ಯವಸ್ಥೆಯನ್ನು ಉತ್ತೇಜಿಸುವ ಯೋಜನೆಗಳನ್ನು ಜಾರಿಗೆ ತರಬೇಕು ಎಂದು ಸಲಹೆ ನೀಡಿದರು.

ಬಾಪೂಜಿ ಮಕ್ಕಳ ಆರೋಗ್ಯ ಸಂಸ್ಥೆಯು ಸತತ 30 ವರ್ಷಗಳಿಂದ ಥಲಸ್ಸೇಮಿಯಾ ಮಕ್ಕಳ ತಪಾಸಣೆ ಹಾಗೂ ಚಿಕಿತ್ಸೆಯಲ್ಲಿ ಮಹತ್ವದ ಸೇವೆ ಸಲ್ಲಿಸುತ್ತ ಬಂದಿದೆ ಎಂದು ಕೌಜಲಗಿ ಹೇಳಿದರು.

ಕಾರ್ಯಕ್ರಮದಲ್ಲಿ, ಬಾಪೂಜಿ ಮಕ್ಕಳ ಆಸ್ಪತ್ರೆಯ ನಿರ್ದೇಶಕ ಡಾ. ಗುರುಪ್ರಸಾದ್, ಹಿರಿಯ ಮಕ್ಕಳ ತಜ್ಞರಾದಂತಹ ಡಾ. ಬಾಣಪುರ ಮಠ್, ಡಾ. ಶೋಭಾ ಬಾಣಪುರ ಮಠ್, ವ್ಯವಸ್ಥಾಪಕರಾದ ಸಿದ್ದೇಶ್ವರ ಗುಬ್ಬಿ, ಡಾ. ಮೃತ್ಯುಂಜಯ, ಡಾ.ರೇವಪ್ಪ, ಮಕ್ಕಳ ಪೋಷಕರು, ನರ್ಸಿಂಗ್ ವಿದ್ಯಾರ್ಥಿಗಳು ಹಾಗೂ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

## ಗದಗ ಜಿಲ್ಲಾ ಪೊಲೀಸ್ ಪ್ರಕಟಣೆ

**ಗದಗ :** ಗದಗ–ಬೆಟಗೇರಿ ಅವಳಿ ನಗರದ ಸಾರ್ವಜನಿಕರಲ್ಲಿ ಈ ಮೂಲಕ ಕೋರುವುದೇನೆಂದರೆ, ಗದಗ ಶಹರದ ಶ್ರೀ ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಹಾಕಲಾದ ಅಂಗಡಿಗಳ ತೆರವುಗೊಳಿಸುವ ವಿಚಾರವಾಗಿ ಕೆಲವು ಸಂಘಟನೆಗಳು ಸೇರಿಕೊಂಡು ದಿನಾಂಕ:26.05.2025 ರಂದು 'ಗದಗ ಬಂದ್' ಕರೆ ನೀಡಿರುವಹಿನ್ನೆಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಠಿಯಿಂದ ಸದರಿ ಬಂದ್ ಕರೆ ನಿಷೇಧಿಸಿ ಗದಗ ತಾಲೂಕ ದಂಡಾಧಿಕಾರಿಗಳು ಪ್ರತಿಬಂಧಕಾಜ್ಞೆಯನ್ನು ಹೊರಡಿಸಿ ಆದೇಶಿರುತ್ತಾರೆ.ಆದ್ದರಿಂದ ಯಾವುದೇ ಸಾರ್ವಜನಿಕರು ಬಂದ್‌ಗೆ ಕರೆ ನೀಡುವುದು, ಬಂದ್‌ಗೆ ಬೆಂಬಲಿಸುವುದು ಮತ್ತು ಬಂದ್‌ಗೆ ಬೆಂಬಲಿಸಿ ಪ್ರತಿಭಟನೆಯಲ್ಲಿ ಭಾಗವಹಿಸುವುದು ನಿಷೇಧಾಜ್ಞೆ ಉಲ್ಲಂಘಿಸಿದಂತಾಗಿ ಅಪರಾಧವಾಗುವುದು.


ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು. ಸಾರ್ವಜನಿಕರು ಬಂದ್ ಕರೆಯ ವದಂತಿಗಳ ಬಗ್ಗೆ ಕಿವಿಗೊಡಬಾರದು ಅಂತಹ ಊಹಾಪೋಹಗಳಿಗೆ ಒಳಗಾಗಬಾರದು, ಸಾಮಾನ್ಯವಾಗಿ ದಿನನಿತ್ಯದಂತೆ ತಮ್ಮ ವ್ಯಾಪಾರ ವಹಿವಾಟುಗಳನ್ನು ನಡೆಸಿಕೊಂಡು ಹೋಗುವಂತೆ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಬಿ ಎಸ್ ನೇಮಗೌಡ ಅವರು ಸಾರ್ವಜನಿಕರಲ್ಲಿ ವಿನಂತಿಸಿದ್ದಾರೆ.

## ಸತತ 6 ವರ್ಷಗಳಿಂದಲೂ ನೂರಕ್ಕೆನೂರು ಫಲಿತಾಂಶ.

**ಶ್ಯಾಗಲೆ;** ಕುವೆಂಪು ಪ್ರೌಢಶಾಲೆಗೆ ನೂರಕ್ಕೆನೂರು ಫಲಿತಾಂಶ ಮಾಯಕೊಂಡ; ಸಮೀಪದ ಶ್ಯಾಗಲೆ ಗ್ರಾಮದ ಕುವೆಂಪು ಪ್ರೌಢಶಾಲೆಗೆ ಎಸ್ ಎಸ್ ಎಲ್ ಸಿಯಲ್ಲಿ ಶೇ.ನೂರಕ್ಕೆನೂರರಷ್ಟು ಫಲಿತಾಂಶ ಬಂದಿದೆ. ಪರೀಕ್ಷೆ ಬರೆದ 46ವಿದ್ಯಾರ್ಥಿಗಳೆಲ್ಲರೂ ಉತ್ತೀರ್ಣರಾಗಿದ್ದಾರೆ.

30 ಡಿಸ್ಟಿಂಕ್ಷನ್, 13 ಪ್ರಥಮ ದರ್ಜೆ ಮತ್ತು 3 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಅನುಷಾ 625 ಕ್ಕೆ 617, ಸಂಧ್ಯಾ 625ಕ್ಕೆ 613, ಲಕ್ಷ್ಮೀ ಕೀರ್ತನಾ 625 ಕ್ಕೆ 611 ಅಂಕಗಳನ್ನು ಪಡೆದಿದ್ದಾರೆ ಸತತ 6ನೇ ವರ್ಷ ನೂರಕ್ಕೆನೂರು ಫಲಿತಾಂಶ ಗಳಿಸಿದೆ.ಕಾಲೇಜಿಗೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಆಡಳಿತ ಮಂಡಳಿ ಅಧ್ಯಕ್ಷ ಸಿದ್ದೇಶ್ ಮತ್ತು ಸದಸ್ಯರು, ಪ್ರಾಚಾರ್ಯ ಸುರೇಶ್, ಮುಖ್ಯ ಶಿಕ್ಷಕ ಹನುಮಂತಪ್ಪ, ಸಹ ಶಿಕ್ಷಕರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಅಭಿನಂದಿಸಿದ್ದಾರೆ.

## ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿದ ಜಿಲ್ಲಾ ಉಸ್ತುವಾರಿ ಸಚಿವರು



**ದಾವಣಗೆರೆ:** ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕಾ ಮತ್ತು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್ ಮಲ್ಲಿಕಾರ್ಜುನ್ ಅವರು ದಾವಣಗೆರೆ ನಗರದಲ್ಲಿನ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿದರು.

ವಿವಾಹ ಕಾರ್ಯಕ್ರಮಗಳು, ಗೃಹ ಪ್ರವೇಶ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ಶುಭ ಹಾರೈಸಿದ ಸಚಿವರು, ಬಳಿಕ ಗೃಹ ಕಚೇರಿಯಲ್ಲಿ ಸಾರ್ವಜನಿಕರು ಕುಂದುಕೊರತೆಗಳನ್ನು ಆಲಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು, ಮಾಜಿ ಪಾಲಿಕೆ ಸದಸ್ಯರು, ಗ್ರಾಮಸ್ಥರು ಮತ್ತು ಕಾಂಗ್ರೆಸ್ ಕಾರ್ಯಕರ್ತರು, ಉಪಸ್ಥಿತರಿದ್ದರು.

## ಸಂಸದರ ನೆಚ್ಚಿನ ಕೌಶಲ್ಯ ತರಬೇತಿ ಕಾರ್ಯಕ್ರಮ ಯಶಸ್ವಿ: ವಿವಿಧ ಕಂಪನಿಗಳಿಗೆ ವಿದ್ಯಾರ್ಥಿಗಳು ಆಯ್ಕೆ




**ದಾವಣಗೆರೆ:** ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ನೆಚ್ಚಿನ ಕೌಶಲ್ಯ ತರಬೇತಿ ಕಾರ್ಯಕ್ರಮ ಯಶಸ್ವಿಯಾಗಿದ್ದು ಹಲವು ಕಂಪನಿಗಳಿಗೆ ವಿಧ್ಯಾರ್ಥಿಗಳು ಆಯ್ಕೆಯಾಗಿ ಉದ್ಯೋಗವನ್ನು ಪಡೆದಿದ್ದಾರೆ.

ಎಸ್.ಎಸ್ ಕೇರ್ ಟ್ರಸ್ಟ್ ವತಿಯಿಂದ ದಾವಣಗೆರೆ ವಿಶ್ವವಿದ್ಯಾನಿಲಯ ಮತ್ತು ಕ್ಯೂ–ಸ್ಪೈಡರ್ಸ್ ತರಬೇತಿ ಸಂಸ್ಥೆಗಳ ಸಹಯೋಗದಲ್ಲಿ ಸಂಸದರಾದ ಡಾ ಪ್ರಭಾ ಮಲ್ಲಿಕಾರ್ಜುನ್

ಅವರ ನೇತೃತ್ವದಲ್ಲಿ ನಗರದ ಬಿಐಇಟಿ ಹಾಗೂ ಬಾಪೂಜಿ ಎಂಬಿಎ ಕಾಲೇಜಿನಲ್ಲಿ ಕೌಶಲ್ಯ – ಉದ್ಯೋಗಧಾರಿತ ತರಬೇತಿ ಕಾರ್ಯಕ್ರಮದಡಿ ವಿದ್ಯಾರ್ಥಿಗಳಿಗೆ ಸಂದರ್ಶನ ನಡೆಸಲಾಗಿದ್ದು ಸಂದರ್ಶನದಲ್ಲಿ 100 ರಕ್ಕು ಹೆಚ್ಚು ವಿದ್ಯಾರ್ಥಿಗಳು ಆಯ್ಕೆಯಾಗಿ ತಮ್ಮ ಭವಿಷ್ಯ ರೂಪಿಸಿಕೊಳ್ಳಲು ಮುಂದಾಗಿದ್ದಾರೆ.

ಸಂದರ್ಶನದಲ್ಲಿ ಹೆಚ್.ಡಿ.ಬಿ ಫೈನಾನ್ಸಿಯಲ್ ಸರ್ವೀಸಸ್ ಕಂಪನಿಗೆ 92 ವಿದ್ಯಾರ್ಥಿಗಳು ಹಾಗೂ ಮುತ್ತೂಟ್ ಫೈನಾನ್ಸ್ ಕಂಪನಿಗೆ 89 ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳು ಅಂತಿಮ ಪದವಿ ಪರೀಕ್ಷೆಯ ನಂತರ ಜುಲೈ ತಿಂಗಳಲ್ಲಿ ದಾವಣಗೆರೆ, ಬೆಂಗಳೂರು, ಹುಬ್ಬಳ್ಳಿ, ಮೈಸೂರು ಮುಂತಾದ ಕಡೆ ಉದ್ಯೋಗಕ್ಕೆ ಸೇರಲಿದ್ದಾರೆ ಕೌಶಲ್ಯ ತರಬೇತುದಾರರು ಅನಿಸಿಕೆ ವ್ಯಕ್ತಪಡಿಸಿದ್ದಾರೆ.

ಇನ್ನು ಆಯ್ಕೆಯಾದ ವಿದ್ಯಾರ್ಥಿಗಳಿಗೆ ಹಿರಿಯ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ, ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್ ಮಲ್ಲಿಕಾರ್ಜುನ್ ಹಾಗೂ ಸಂಸದರಾದ ಡಾ ಪ್ರಭಾ ಮಲ್ಲಿಕಾರ್ಜುನ್ ಶುಭ ಹಾರೈಸಿದ್ದಾರೆ.


ಕರ್ನಾಟಕ ಸರ್ಕಾರ

**ಪುರಸಭಾ ಕಾರ್ಯಾಲಯ, ಚನ್ನಗಿರಿ, ದಾವಣಗೆರೆ ಜಿಲ್ಲೆ**

EMail:itstaff_ulb_channagiri@yahoo.in Ph.:–08189–228021

ಕ್ರಮಾಂಕ:ಚ.ಪು/ ತಾಂತ್ರಿಕ /ಸಿಆರ್– 01/2025–26 ದಿನಾಂಕ: 22–05–2025

**ಕೊಟೇಷನ್ ಪ್ರಕಟಣೆ**

ಚನ್ನಗಿರಿ ಸುರ ಸಭಾಯ ಸಾಮಾನ್ಯ ನೀವಿ ಯೋಜನೆ ಅನುದಾನಡಿ ಚನ್ನಗಿರಿ ಪಟ್ಟಣದ ಗಣಪತಿ ಹೊಂಡ ಕ್ಕೆ ಹೋಲಿಂಗ್ ಗೇಟ್ ಕರೆಕಲ್ಲು ದೇವರಸತ್ತಲ್ಲು ಎಸ್ ಎಸ್ ಚಾಲರಿ ಅಳವಡಿಸುವ ಕಾಮಗಾರಿ ಮಾಡಲು ದರಪಟ್ಟಿ ಆಹ್ವಾನಿಸಲಾಗಿದೆ. ಇಚ್ಚೆವುಳ್ಳ ಅರ್ಹ ಗುತ್ತಿಗೆದಾರರು/ ಏಜೆನ್ಸಿಯವರು ಅಂದಾಜು ದರಗಳಂತೆ ಕಾಮಗಾರಿ ಮಾಡಲು ವರ ನಮೂದಿಸಿ ಲಕೋಟೆಯಲ್ಲಿಟ್ಟು ಸೀಲ್ ಮಾಡಿ ದಿನಾಂಕ:28–05–2025 ರಂದು ಸಂಜೆ 430 ಗಂಟೆಯೊಳಗಾಗಿ ಮುಖ್ಯಾಧಿಕಾರಿ, ಪುರಸಭೆ ಚನ್ನಗಿರಿ ಇವರ ಕಚೇರಿಗೆ ಸಲ್ಲಿಸತಕ್ಕದ್ದು ಹಾಗೂ ಹೆಚ್ಚಿನ ಮಾಹಿತಿಯನ್ನು ಕಛೇರಿ ವೇಳೆಯಲ್ಲಿ ತಾಂತ್ರಿಕ ಶಾಖೆಯಿಂದ ಕೇಳಿ. ಪಡೆಯಬಹುದಾಗಿರುತ್ತೆ ತಡವಾಗಿ ಬಂದ ಕೊಟೇಷನ್‌ಗಳನ್ನು ತಿರಸ್ಕರಿಸಲಾಗುವುದು.

| SL NO | Deurption of work | qty | unit | Rent | Amount |
|---|---|---|---|---|---|
| 1 | Providing and fixing Steel work in built up tubular (round, square or rectangular hollow tabes etc) trusses etc., including cutting hoisting, fixing in position and applying a priming coat of approved steel primer, including welding and buited with special shaped washers etc. complete. Hot finished welded type tubes including cost of materials, labour, usage charges of machinery complete as per specifications and as per directions of the Engineer-in-Charge | 255.00 | KG | | |
| 2 | Providing and fixing stainless steel ( Grade 304) railing made of Hollow nubes, channels, plates etc, including welding, grinding, buffing polishing and making curvature (wherever herever required) and fitting the same with necessary stainless steel nuts and bolts complete, i/e fixing the railing with necessary accessories & stainless steel dash fasteners stainless steel baits etz. of required size, on the top of the floor or the side of waist slab with suitable arrangement as per approval of Engineer-in charge, (for payment purpose only weight of stainless steel members shall be considered excluding fixing accessories such as nuts, holts, fasteners etc.) including cost of materials, labour, usage charges of machinery comp | 81.00 | sqm | | |

ಸಹಿ/–
ಅಧ್ಯಕ್ಷರು
ಪಟ್ಟಣ ಪಂಚಾಯಿತಿ ಚನ್ನಗಿರಿ

ಸಹಿ/–
ಮುಖ್ಯಾಧಿಕಾರಿ
ಪಟ್ಟಣ ಪಂಚಾಯಿತಿ ಚನ್ನಗಿರಿ

# ಜನರ ಸಮಸ್ಯೆಗಳಿಗೆ ಮಿಡಿಯುವ ಹೃದಯ ಹಾಗೂ ಹೋರಾಟದ ಮನೋಭಾವನೆಯೇ ನಿಜವಾದ ನಾಯಕತ್ವ; ಫಯಾಜ್ ಅಹಮದ್

**ಹರಿಹರ:** ಜನರ ಸಮಸ್ಯೆಗಳಿಗೆ ಮಿಡಿಯುವ ಹೃದಯ ಹಾಗು ಹೋರಾಟದ ಮನೋಭಾವನೆಯೇ ನಿಜವಾದ ನಾಯಕತ್ವವಾಗಿದೆ ಎಂದು ಫಯಾಜ್ ಅಹಮದ್ ಎಸ್ ಡಿ ಪಿ ಐ ರಾಜ್ಯ ಸಮಿತಿ ಸದಸ್ಯರಾದ ಫಯಾಝ್ ಅಹಮದ್ ಹೇಳಿದರು.




ನಗರದ ಅಂಜುಮನ್ ಶಾದಿ ಹಾಲ್ ನಲ್ಲಿ ಮಂಗಳವಾರ ಸಂಜೆ ಎಸ್‌ಡಿಪಿಐ ಪಕ್ಷದ ವತಿಯಿಂದ ದಿಟ್ಟ ನಾಯಕತ್ವ ಬಲಿಷ್ಠ ಕಾರ್ಯಕರ್ತ" ಎಂಬ ಘೋಷವಾಕ್ಯದ ಡಿಂಯುಲ್ಲಿ ಕಾರ್ಯಕರ್ತರು ಮತ್ತು ಸದಸ್ಯರ ವಿಶೇಷ ಸಮಾವೇಶದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು,ನಿಜವಾದ ನಾಯಕತ್ವವೆಂದರೆ ಜನರ ಸಮಸ್ಯೆಗಳಿಗೆ ಮಿಡಿಯುವ ಮತ್ತು ಹೋರಾಟದ ಮನೋಭಾವನೆ ಅಗತ್ಯ ಎಂದು ತಿಳಿಸಿದರು.

ನಮ್ಮ ಕಾರ್ಯಕರ್ತರು ಸಮಾಜದಲ್ಲಿ ನಿಸ್ವಾರ್ಥ ಸೇವೆಯ ಮೂಲಕ ಪಕ್ಷದ ಮೌಲ್ಯಗಳನ್ನು ಸಾರಬೇಕು. ಎಸ್‌ಡಿಪಿಐ ಪಕ್ಷವು ಸಂವಿಧಾನಾತ್ಮಕ ಹಕ್ಕುಗಳ ಮತ್ತು ಸಮಾಜದ ನ್ಯಾಯದೊಂದಿಗೆ ನಿಂತಿರುವ ಪಕ್ಷವಾಗಿದೆ ಎಂಬುದನ್ನು ಅವರು ಒತ್ತಿ ಹೇಳಿ,ಪಕ್ಷದ ಸಂಘಟನೆ, ಸಮಾಜ ಸೇವೆ, ಮತ್ತು ರಾಜಕೀಯ ಸಜೀವತೆಯ ಕುರಿತು ಸವಿಸ್ತಾರವಾದ ಚರ್ಚೆಯನ್ನು ಮಾಡಿದರು.

ಕಾರ್ಯಕ್ರಮದಲ್ಲಿ ಸ್ಥಳೀಯ ಹಾಗೂ ಜಿಲ್ಲಾಮಟ್ಟದ ನಾಯಕರೂ ಸಹ ಭಾಗವಹಿಸಿದ್ದರು. ಸಭೆಯಲ್ಲಿ ಅಂತ್ಯದಲ್ಲಿ ಬಲಿಷ್ಠ ಸಂಘಟನೆ ನಿರ್ಮಾಣಕ್ಕೆ ಶ್ರದ್ಧೆ ಮತ್ತು ಸಂಕಲ್ಪ ಕೈಗೊಳ್ಳಲಾಯಿತು. . ವೇದಿಕೆಯಲ್ಲಿ ಎಸ್ ಡಿ ಪಿ ಐ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ. ಆರ್.ತಾಹೀರ್,ಜಿಲ್ಲಾ ಕೋಶಾಧಿಕಾರಿ ಮೊಹಮ್ಮದ್ ಅಜರುದ್ದೀನ್,ಜಿಲ್ಲಾ ಕಾರ್ಯದರ್ಶಿ ಮೊಹಮ್ಮದ್ ಜುನೈದ್, ಹರಿಹರ ವಿಧಾನ ಸಭಾ ಕ್ಷೇತ್ರ ಸಮಿತಿ ಅಧ್ಯಕ್ಷ ಸಮಿ ಮುಲ್ಲಾ ಹಾಗೂ ಜಿಲ್ಲಾ ಮತ್ತು ಇತರೆ ವಿಧಾನಸಭಾ ಕ್ಷೇತ್ರ ಸಮಿತಿ ಸದಸ್ಯರು, ಸೇರಿದಂತೆ ಪಕ್ಷದ ಕಾರ್ಯಕರ್ತರು ಮತ್ತು ಸದಸ್ಯರುಗಳು ಉಪಸ್ಥಿತರಿದ್ದರು

# ಆಪರೇಷನ್ ಸಿಂಧೂರ ಬಗ್ಗೆ ಟೀಕೆ ಮಾಡುವವರಿಗೆ ನಾಚಿಕೆ, ಮಾನ, ಮರ್ಯಾದೆ ಇದೆಯೇನ್ರಿ?

**ಹುಬ್ಬಳ್ಳಿ:** ಆಪರೇಷನ್ ಸಿಂದೂರ ಬಗ್ಗೆ ಶಾಸಕ ಕೊತ್ತೂರು ಮಂಜುನಾಥ್ ಉದ್ಧಟತನದ ಹೇಳಿಕೆ ವಿಚಾರವಾಗಿ ಸಂಸದ ಜಗದೀಶ್ ಶೆಟ್ಟರ್ ಪ್ರತಿಕ್ರಿಯಿಸಿದ್ದಾರೆ.



ಟೀಕೆ ಮಾಡುವವರಿಗೆ ನಾಚಿಕೆ, ಮ'ಾ ನ', ಮರ್ಯಾದೆ ಇದ್ರೆ ಈ ರೀತಿ ಹೇಳಿಕೆ ನೀಡಬಾರದು. ಕೆಳಗಿನ ಚಿಲ್ಲರೆ ನಾಯಕರ ಹೇಳಿಕೆಯಿಂದ ಯಾವುದೇ ವ್ಯತ್ಯಾಸ ಆಗೋದಿಲ್ಲ ಎಂದು ಹುಬ್ಬಳ್ಳಿಯಲ್ಲಿ ಸಂಸದ ಜಗದೀಶ್ ಶೆಟ್ಟರ್ ಹೇಳಿಕೆ ನೀಡಿದ್ದಾರೆ.

ನರೇಂದ್ರ ಮೋದಿ ನಾಯಕತ್ವ ಗುರಿ ಇಟ್ಟರೆ ಗುರಿ ಮುಟ್ಟುವವರೆಗೆ ಬಿಡುವುದಿಲ್ಲ. ಗುಜರಾತ್ ಮುಖ್ಯಮಂತ್ರಿ ಇದ್ದಾಗಿನಿಂದಲೂ ಹಾಗೆ ಇದ್ದಾರೆ. ಪಹಲ್ಗಾಂನಲ್ಲಿ ಭಯೋತ್ಪಾದಕರು 26 ಅಮಾಯಕರನ್ನ ಕೊಂದು ಹಾಕಿದ್ರು. ಅದಾದ ಮೇಲೆ ಪ್ರಧಾನಿ ಮೋದಿಯವರು ಭಯೋತ್ಪಾದಕರನ್ನು ಕೊಲ್ಲುವುದಾಗಿ ಹೇಳಿದ್ರು, ಅದೇ ರೀತಿ ಮಾಡಿದ್ದಾರೆ. ಸೈನಿಕರಿಂದ ಉಗ್ರರ ಸಂಹಾರ ಮಾಡಿಸಿದ್ದಾರೆ. ಇದು ನರೇಂದ್ರ ಮೋದಿ ಅವರ ಪರಿಶ್ರಮ ಎಂದರು.

ಸ್ವದೇಶಿ ಡ್ರೋನ್ ಬ್ರೋಮೋಸ್ ಮೂಲಕ ಅಟ್ಯಾಕ್ ಮಾಡಿದ್ರು. ಇವತ್ತು ಅದರ ಶಕ್ತಿ ಏನು ಅನ್ನೋದು ಗೊತ್ತಾಗಿದೆ. ಈಗ ಅದರ ಬೇಡಿಕೆ ವಿದೇಶದಲ್ಲೂ ಹೆಚ್ಚಾಗಿದೆ. ಇದು ಮೋದಿ ಕಾಲದಲ್ಲಿ ಆಗಿದೆ. ಕಾಂಗ್ರೆಸ್ ಕಾಲದಲ್ಲಿ ಯಾಕೆ ಆಗಿಲ್ಲ ಎಂದು ಪ್ರಶ್ನಿಸಿದರು. ಪಾಕಿಸ್ತಾನ ಉಗ್ರಗಾಮಿಗಳಿಗೆ ಉತ್ತೇಜನ ಕೊಡ್ತಾ ಇದೆ. ಹೀಗಾಗಿ ಸರ್ವ ಪಕ್ಷಗಳ ರಾಜಕಾರಣಿಗಳ ತಂಡವನ್ನ ಹಲವು ದೇಶಗಳಿಗೆ ಕಳುಹಿಸಲು ನಿರ್ಧಾರ ಮಾಡಿದ್ದಾರೆ. ಮೋದಿ ಅವರ ರಾಜತಾಂತ್ರಿಕ ನಡೆಗೆ ಮುಂದಿನ ದಿನಗಳಲ್ಲಿ ಒಳ್ಳೆಯದಾಗುತ್ತೆ ಎಂದರು.

ಮೋದಿ ಅವರ ಪ್ರತಿ ಹೆಜ್ಜೆ ಟೀಕೆ ಮಾಡ್ತಾರೆ. ಮೋದಿ ಬಾರ್ಡರ್ ವರೆಗೆ ಹೋಗಿ ಜನರಿಗೆ ಸಮಾಧಾನ ಮಾಡುವ ಕೆಲಸ ಮಾಡ್ತಾರೆ. ರಾಹುಲ್ ಗಾಂಧಿ ಅವರು ಬಾರ್ಡರ್ ಗೆ ಹೋಗಲಿ ನೋಡೋಣ.

# ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ–ಅವಧಿ ವಿಸ್ತರಣೆ

**ಚಿಕ್ಕಮಗಳೂರು, ಮೇ 26:** ಸರ್ಕಾರದ ಆದೇಶ ಕಳೆದ ವರ್ಷದ ನವೆಂಬರ್ 12 ರಂದು ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ವಿವಿಧ ಉಪ ಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು (ಎಂಪೆರಿಕಲ್ ಡಾಟಾ) ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬಗ್ಗೆ ಸೂಕ್ತ ಶಿಫಾರಸ್ಸಿನೊಂದಿಗೆ ವರದಿ ಸಲ್ಲಿಸಲು ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ.ಹೆಚ್.ಎನ್.ನಾಗಮೋಹನ್‌ದಾಸ್ ಇವರ ಅಧ್ಯಕ್ಷತೆಯಲ್ಲಿ ಈಗಾಗಲೇ ಏಕ ಸದಸ್ಯ ಆಯೋಗವನ್ನು ರಚಿಸಲಾಗಿದೆ.

ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು (ಎಂಪೆರಿಕಲ್ ಡಾಟಾ) ಸಂಗ್ರಹಿಸಲು ಹೊಸದಾದ ಸಮೀಕ್ಷೆಯನ್ನು ನಡೆಸಲು ಕಳೆದ ಮಾರ್ಚ್ 27ರ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾದ ಹಿನ್ನೆಲೆಯಲ್ಲಿ ಮೇ 5ರಿಂದ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವುದರ ಮೂಲಕ ರಾಜ್ಯಾದ್ಯಂತ ಈಗಾಗಲೇ ಸಮೀಕ್ಷೆ ನಡೆಯುತ್ತಿದೆ.

ಬಿಬಿಎಂಪಿ ವ್ಯಾಪ್ತಿಯ ವಲಯಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯವು ಇನ್ನೂ ಪ್ರಗತಿಯಾಗಬೇಕಾಗಿರುವುದರಿಂದ, ಮಳೆ, ಹವಾಮಾನ ವೈಪರೀತ್ಯ ಕಾರಣಗಳಿಂದಾಗಿ ಅನೇಕ ಪರಿಶಿಷ್ಟ ಜಾತಿ ಸಂಘಗಳಿಂದ ಮತ್ತು ಬೆಂಗಳೂರು ಮಹಾನಗರ ಪಾಲಿಕೆಯ ಕೋರಿಕೆ ಮೇರೆಗೆ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಲು ಅನುವಾಗುವಂತೆ ದಿನಾಂಕವನ್ನು ವಿಸ್ತರಿಸಲು ನಿರ್ಣಯಿಸಲಾಗಿದೆ. ಮನೆ–ಮನೆ ಭೇಟಿ ನೀಡುವ ಸಮೀಕ್ಷೆಯನ್ನು ಮೇ 26 ರಿಂದ 29 ರವರೆಗೆ ವಿಸ್ತರಿಸಲಾಗಿದೆ. ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) ಮೂರು ದಿನಗಳ ಕಾಲ ಅಂದರೆ ಮೇ 30, 31 ಹಾಗೂ ಜೂನ್ 1 ರವರೆಗೆ ಮರು ನಿಗದಿಪಡಿಸಲಾಗಿದೆ ಮತ್ತು ಆನ್‌ಲೈನ್ ಮೂಲಕ ಸ್ವಯಂಘೋಷಣೆ–ಜೂನ್ 1 ರವರೆಗೆ ಮುಂದುವರೆಯಲಿದೆ ಎಂದು ಏಕ ಸದಸ್ಯ ಆಯೋಗದ ಕಾರ್ಯದರ್ಶಿಗಳು ತಿಳಿಸಿರುವುದಾಗಿ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ರಮ ವಕ್ಫ್ ಆಸ್ತಿಗಳನ್ನು ಮರಳಿ ಪಡೆಯಲು ಅಧಿಕಾರವಿದೆ: ಸುಪ್ರೀಂಗೆ ಕೇಂದ್ರ ಸರ್ಕಾರ

**ನವದೆಹಲಿ:** ಸರ್ಕಾರಿ ಭೂಮಿಯ ಮೇಲೆ ಯಾರೂ ಹಕ್ಕು ಸ್ಥಾಪಿಸಲು ಸಾಧ್ಯವಿಲ್ಲ ಮತ್ತು ವಕ್ಫ್ ತತ್ವವನ್ನು ಬಳಸಿಕೊಂಡು ವಕ್ಫ್ ಎಂದು ಘೋಷಿಸಲಾದ ಆಸ್ತಿಗಳನ್ನು ಮರಳಿ ಪಡೆಯಲು ಕಾನೂನುಬದ್ಧವಾಗಿ ಅಧಿಕಾರ ಹೊಂದಿರುವುದಾಗಿ ಕೇಂದ್ರ ಸರ್ಕಾರ ಬುಧವಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿದೆ.




ಔಪಚಾರಿಕ ದಾಖಲೆಗಳಿಲ್ಲದೆಯೂ ಸಹ ಧಾರ್ಮಿಕ ಅಥವಾ ದತ್ತಿ ಉದ್ದೇಶಗಳಿಗಾಗಿ ದೀರ್ಘಕಾಲೀನ ಬಳಕೆಯ ಆಧಾರದ ಮೇಲೆ ಆಸ್ತಿಯನ್ನು ವಕ್ಫ್ ಎಂದು ಗುರುತಿಸುವ ಬಳಕೆದಾರರಿಂದ ವಕ್ಫ್ ಪರಿಕಲ್ಪನೆಯಾಗಿದೆ.

ವಕ್ಫ್ (ತಿದ್ದುಪಡಿ) ಕಾಯ್ದೆ, 2025ರ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸುವ ಅರ್ಜಿಗಳಿಗೆ ಪ್ರತಿಕ್ರಿಯಿಸಿದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಮುಖ್ಯ ನ್ಯಾಯಮೂರ್ತಿ ಬಿ ಆರ್ ಗವಾಯಿ ಮತ್ತು ನ್ಯಾಯಮೂರ್ತಿ ಆಗಸ್ಟೀನ್ ಜಾರ್ಜ್ ಮಸಿಹ್ ಅವರನ್ನೊಳಗೊಂಡ ಪೀಠದ ಮುಂದೆ ಕೇಂದ್ರದ ಪರವಾಗಿ ತಮ್ಮ ವಾದ ಮಂಡಿಸಿದ್ದಾರೆ.

"ಸರ್ಕಾರಿ ಭೂಮಿಯ ಮೇಲೆ ಯಾರಿಗೂ ಹಕ್ಕಿಲ್ಲ" ಎಂದು ಕೇಂದ್ರ ಸರ್ಕಾರವನ್ನು ಪ್ರತಿನಿಧಿಸುತ್ತಿರುವ ಕಾನೂನು ಅಧಿಕಾರಿ ಹೇಳಿದ್ದಾರೆ".

"ಸರ್ಕಾರಕ್ಕೆ ಸೇರಿದ್ದರೆ ಮತ್ತು ವಕ್ಫ್ ಎಂದು ಘೋಷಿಸಿದ್ದರೆ ಸರ್ಕಾರವು ಆಸ್ತಿಯನ್ನು ಉಳಿಸಬಹುದು ಎಂದು ಹೇಳುವ ಸುಪ್ರೀಂ ಕೋರ್ಟ್ ತೀರ್ಪು ಇದೆ" ಎಂದು ತುಷಾರ್ ಮೆಹ್ತಾ ಹೇಳಿದ್ದಾರೆ. ಯಾವುದೇ ಬಾಧಿತ ಪಕ್ಷಗಳು ನ್ಯಾಯಾಲಯದ ಮೆಟ್ಟಿಲೇರಿಲ್ಲ ಮತ್ತು 'ಸಂಸತ್ತು ಈ ಶಾಸನವನ್ನು ಅಂಗೀಕರಿಸುವ ಸಾಮರ್ಥ್ಯವನ್ನು ಹೊಂದಿಲ್ಲ ಎಂದು ಯಾರೂ ಹೇಳಲಾಗದು' ಎಂದು ಹೇಳಿದ್ದಾರೆ.ಜಂಟಿ ಸಂಸದೀಯ ಸಮಿತಿಯ ವರದಿ ಮತ್ತು ಕಾಯ್ದೆ ಜಾರಿಗೆ ಬರುವ ಮೊದಲು ಅನೇಕ ರಾಜ್ಯ ಸರ್ಕಾರಗಳು ಮತ್ತು ರಾಜ್ಯ ವಕ್ಫ್ ಮಂಡಳಿಗಳೊಂದಿಗೆ ಸಮಾಲೋಚಿಸಲಾಗಿತ್ತು ಎಂಬ ಅಂಶವನ್ನು ತುಷಾರ್ ಮೆಹ್ತಾ ಉಲ್ಲೇಖಿಸಿದ್ದಾರೆ. ಜಿಲ್ಲಾಧಿಕಾರಿಗಳ ಶ್ರೇಣಿಗಿಂತ ಮೇಲಿನ ಅಧಿಕಾರಿಯೊಬ್ಬರು ವಕ್ಫ್ ಆಸ್ತಿಗಳು ಸರ್ಕಾರದವು ಎಂಬ ಆಧಾರದ ಮೇಲೆ ಅವುಗಳ ಮೇಲಿನ ಹಕ್ಕನ್ನು ನಿರ್ಧರಿಸಬಹುದು

# ವಿದ್ಯೆ, ಶಿಸ್ತು, ಪರಿಶ್ರಮ ಸಾಧನೆಗೆ ದಾರಿ : ಡಾ. ಸಿ.ಟಿ. ಜಯದೇವ್



**ಚಿಕ್ಕಮಗಳೂರು:** ವಿದ್ಯೆ ಸಾಧಕನ ಸ್ವತ್ತು, ಶ್ರದ್ಧೆ, ಶಿಸ್ತು ಮತ್ತು ಪರಿಶ್ರಮದಿಂದ ಮಾತ್ರ ಅದನ್ನು ಗಳಿಸಬಹುದುಎಂದು ಎಐಟಿ ಪ್ರಾಂಶುಪಾಲ ಡಾ. ಸಿ.ಟಿ ಜಯದೇವ್ ಹೇಳಿದರು.

ಮಲೆನಾಡು ವಿದ್ಯಾಸಂಸ್ಥೆಯ ಎಂ.ಎಸ್. ಪದ್ಮಾವತಮ್ಮ, ಎಂ.ಕೆ. ಸಾಂಬಶಿವ ಶೆಟ್ಟಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇತ್ತೀಚಿಗೆ ನಡೆದ ವಿವಿಧ ವಿದ್ಯಾರ್ಥಿ ಸಂಘಗಳ ಸಮಾರೋಪ ಮತ್ತು ಪದವಿ ಪ್ರಧಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬಡತನ ಮತ್ತು ಅಜ್ಞಾನವೆಂಬ ಶತ್ರುವನ್ನು ಓಡಿಸಲು ವಿದ್ಯೆ ಅತ್ಯಂತ ಪ್ರಮುಖವಾದ ಅಸ್ತ್ರ, ವಿದ್ಯಾವಂತನನ್ನು ಮಾತ್ರ ಸಮಾಜ ಗೌರವಿಸುತ್ತದೆ. ಸೂಕ್ತ ಸ್ಥಾನಮಾನ ನೀಡುತ್ತದೆ. ಶಿಕ್ಷಣವಂತರಾದರೆ ಮಾತ್ರ ನಮ್ಮ ಭವಿಷ್ಯ ಉಜ್ವಲವಾಗುತ್ತದೆ ಎಂದ ಅವರು, ವಿದ್ಯಾರ್ಥಿಗಳು ಇದನ್ನು ಅರಿತು ಶ್ರದ್ಧೆ ಮತ್ತು ಪರಿಶ್ರಮದಿಂದ ವಿದ್ಯಾರ್ಜನೆ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಹೃದ್ರೋಗ ತಜ್ಞ ಡಾ. ಅನಿಕೇತ್ ವಿಜಯ್ ಮಾತನಾಡಿ, ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ, ಉತ್ತಮ ಭವಿಷ್ಯಕ್ಕೆ, ವಿದ್ಯಾರ್ಥಿ ಸಂಘಗಳು ಸಹಕಾರಿ ಎಂದರು.

ವಿದ್ಯಾರ್ಥಿ ಸಂಘಗಳು ನಾಯಕತ್ವ ಗುಣಗಳನ್ನು ಬೆಳೆಸುತ್ತವೆ ಎಂದ ಅವರು, ವಿದ್ಯಾರ್ಥಿಗಳು ತಮ್ಮ ಭವಿಷ್ಯದ ದೃಷ್ಟಿಯಿಂದ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಪಾಲ್ಗೊಳ್ಳಬೇಕು ಎಂದು ಸಲಹೆ ಮಾಡಿದರು.

ಮಲೆನಾಡು ವಿದ್ಯಾಸಂಸ್ಥೆಯ ಗೌರವ ಕಾರ್ಯದರ್ಶಿ ಡಾ. ಡಿ.ಎಲ್. ವಿಜಯಕುಮಾರ್ ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾರ್ಥಿ ಸಂಘಗಳನ್ನು ಸದುಪಯೋಗಪಡಿಸಿಕೊಂಡು ಬೆಳೆಯಬೇಕು ಎಂದು ಕಿವಿಮಾತು ಹೇಳಿದರು.

ಪ್ರಾಂಶುಪಾಲೆ ಪ್ರೊ. ಹಸೀನಾ ಬಾನು ಕಾಲೇಜಿನ ವಾರ್ಷಿಕ ವರದಿಯನ್ನು ಮಂಡಿಸಿದರು, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸಮಾರಂಭದಲ್ಲಿ ಪುರಸ್ಕರಿಸಲಾಯಿತು, ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಪದವಿ ಪ್ರಧಾನ ಮಾಡಲಾಯಿತು.

ಮಲೆನಾಡು ವಿದ್ಯಾಸಂಸ್ಥೆಯ ಅಧ್ಯಕ್ಷ ಎನ್. ಕೇಶವಮೂರ್ತಿ ಅಧ್ಯಕ್ಷತೆ ವಹಿಸಿದ್ದರು. ಸಂಸ್ಥೆಯ ಸಹಕಾರ್ಯದರ್ಶಿ ಶಂಕರನಾರಾಯಣ ಭಟ್, ಶೈಕ್ಷಣಿಕ ಸಲಹೆಗಾರ ಪ್ರೊ. ಕೆ.ಎನ್. ಮಂಜುನಾಥ ಭಟ್, ಕಚೇರಿ ವ್ಯವಸ್ಥಾಪಕಿ ಶ್ರೀಲಕ್ಷ್ಮಿ, ಉಪನ್ಯಾಸಕರಾದ ಸುಮಂತ್‌ಕುಮಾರ್, ಶುಗುಪ್ತಾ ಜಬೀನ್, ವಿದ್ಯಾರ್ಥಿಗಳಾದ ಎಂ.ಜೆ ಖುಷಿ, ವಿ.ವಿಷ್ಣು ಉಪಸ್ಥಿತರಿದ್ದರು.

# ಸಾರ್ವಜನಿಕರು ಮನೆ ಸುತ್ತಮುತ್ತ ಸ್ವಚ್ಛತೆ ಕಾಪಾಡಬೇಕು: ಡಾ.ಎಸ್.ಸೀಮಾ

**ಚಿಕ್ಕಮಗಳೂರು :** ಜಿಲ್ಲಾದ್ಯಂತ ಡೆಂಗ್ಯೂ ಪ್ರಕರಣಗಳು ಕಂಡು ಬರುತ್ತಿರುವ ಹಿನ್ನಲೆಯಲ್ಲಿ ಸಾರ್ವಜನಿಕರು ಮನೆಯ ಸುತ್ತಮುತ್ತ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎಸ್.ಸೀಮಾ ಅವರು ತಿಳಿಸಿದರು.

ಮೇ 23 ರಂದು ನಗರದ ಕೋಟೆಯಲ್ಲಿ ನಡೆದ ಲಾರ್ವಾ ಸಮೀಕ್ಷೆ ವೇಳೆ ಭೇಟಿ ನೀಡಿದ ಅವರು ಮಾತನಾಡಿ, ಮನೆಯ ಸುತ್ತಮುತ್ತ ಸೊಳ್ಳೆ ಉತ್ಪತ್ತಿ ಆಗುವಂತೆ ನೀರು ನಿಲ್ಲಲು ಬಿಡಬಾರದು. ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶ ಪಡಿಸಬೇಕು ಮತ್ತು ಜ್ವರ ಬಂದ ಸಂದರ್ಭದಲ್ಲಿ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆದು ವಿಶ್ರಾಂತಿ ಪಡೆದುಕೊಳ್ಳುವಂತೆ ಮತ್ತು ಡೆಂಗ್ಯೂ ನಿಯಂತ್ರಣ ಕ್ರಮಗಳನ್ನು ಅನುಸರಿಸುವಂತೆ ಸಲಹೆ ನೀಡಿದರು.

ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ಒಳಗೊಂಡಂತೆ ತಂಡಗಳನ್ನಾಗಿ ಮಾಡಿ ಲಾರ್ವಾ ಸಮೀಕ್ಷೆ ನಡೆಸಲಾಗುತ್ತಿದ್ದು, ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸುವ ಬಗ್ಗೆ ಮತ್ತು ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವ ಬಗ್ಗೆ ಅರಿವನ್ನು ಮೂಡಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜೆ.ಎನ್.ಬೇಬಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಜಯಣ್ಣ, ಕಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನವೀನ್ ಮತ್ತು ಶ್ರೀನಿಧಿ, ಪ್ರಾಥಮಿಕ ಆರೋಗ್ಯ ಸುರಕ್ಷಾತಾಧಿಕಾರಿಗಳಾದ ಚಂದನ ಮತ್ತು ವೀಣಾ ಭಾಗವಹಿಸಿದ್ದರು.

# ಅಂಗನವಾಡಿಗಳಿಗೆ ರಜೆ

**ಚಿಕ್ಕಮಗಳೂರು, ಮೇ 26:** ಜಿಲ್ಲೆಯಲ್ಲಿ ಸತತವಾಗಿ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಚಿಕ್ಕಮಗಳೂರು, ಮೂಡಿಗೆರೆ, ಕಳಸ, ಶೃಂಗೇರಿ, ಕೊಪ್ಪ ಮತ್ತು ಎನ್.ಆರ್.ಪುರ ತಾಲ್ಲೂಕುಗಳ ಅಂಗನವಾಡಿ ಕೇಂದ್ರಗಳಿಗೆ ಇಂದಿನಿಂದ ಮೇ 28ರವರೆಗೆ ರಜೆ ಘೋಷಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸಗೊಬ್ಬರ ವಿತರಣೆಗೆ ಸಹಾಯವಾಣಿ

**ಚಿಕ್ಕಮಗಳೂರು :** ಜಿಲ್ಲೆಯಲ್ಲಿ ರಸಗೊಬ್ಬರಗಳ ಸಮರ್ಪಕ ಸರಬರಾಜು, ದಾಸ್ತಾನು ಮತ್ತು ವಿತರಣೆಗೆ ಸಹಾಯವಾಣಿಗಳನ್ನು ಆರಂಭಿಸಲಾಗಿದೆ. ರೈತರು ರಸಗೊಬ್ಬರಗಳನ್ನು ಖರೀದಿಸುವ ಸಂದರ್ಭದಲ್ಲಿ ಮಾರಾಟಗಾರರು ಅಧಿಕೃತ ರಶೀದಿಗಳನ್ನು ನೀಡದಿದ್ದರೆ ಅಥವಾ ಎಂ.ಆರ್.ಪಿ. ದರಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿದ್ದರೆ ಇಲ್ಲವೇ ಬೇರೆ ಯಾವುದೇ ರೀತಿಯ ಕಾನೂನು ಉಲ್ಲಂಘನೆ ಮಾಡುತ್ತಿದ್ದರೆ, ಸಹಾಯವಾಣಿ ಮೊಬೈಲ್ ಸಂಖ್ಯೆಗಳಿಗೆ ದೂರು ನೀಡುವಂತೆ ಜಂಟಿ ಕೃಷಿ ನಿರ್ದೇಶಕಿ ಎಚ್.ಎಲ್.ಸುಜಾತ ಕೋರಿದ್ದಾರೆ.

ಎಲ್ಲ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯ ಸಹಾಯವಾಣಿ ಮೊಬೈಲ್ ಸಂಖ್ಯೆಗಳು ಲಭ್ಯವಿದ್ದು, ಚಿಕ್ಕಮಗಳೂರು–8277930894, ಮೂಡಿಗೆರೆ–8277930914, ಕೊಪ್ಪ–8277930913, ಶೃಂಗೇರಿ–8277928494, ನರಸಿಂಹರಾಜಪುರ–8277930921, ತರೀಕೆರೆ–8277930923, ಕಡೂರು–8277930937, ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಹಾಯಕ ಕೃಷಿ ನಿರ್ದೇಶಕರು (ಉ ಮತ್ತು ಮೌ)–8277930896 ಹಾಗೂ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ)–8277930893 ಇವರನ್ನು ದೂರುಗಳಿದ್ದಾಗ ಸಂಪರ್ಕಿಸಬಹುದು ಎಂದು ಮಾಹಿತಿ ನೀಡಲಾಗಿದೆ.

ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಆಹ್ವಾನ

ಚಿಕ್ಕಮಗಳೂರು, ಮೇ 20: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ, ಬಾಲಕಿಯರ ವಿದ್ಯಾರ್ಥಿ ನಿಲಯಗಳ ಪಿಯುಸಿ, ಐಟಿಐ ಮತ್ತು ಡಿಪ್ಲೊಮಾ ಕೋರ್ಸ್‌ಗಳ ಪ್ರವೇಶಕ್ಕಾಗಿ, ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ 1, 2ಎ, 2ಬಿ, 3ಎ, 3ಬಿ, ಪ.ಜಾ., ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ಎಲ್ಲ ವಿದ್ಯಾರ್ಥಿಗಳಿಗೆ 2025–26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿಯು ಪ್ರವರ್ಗ1, ಎಸ್.ಸಿ. ಮತ್ತು ಎಸ್.ಟಿ.ಗಳಿಗೆ ರೂ.2.50 ಲಕ್ಷ ಹಾಗೂ 2ಎ, 2ಬಿ, 3ಎ, 3ಬಿ, ಇತರೆಯವರಿಗೆ ರೂ. ಒಂದು ಲಕ್ಷ ಆಗಿರಬೇಕು. ವಾಸ ಸ್ಥಳದಿಂದ ಶಾಲೆಗೆ ಹೋಗುವ ಅಂತರ 5 ಕಿ.ಮೀ. ಮಿತಿಯೊಳಗಿರಬೇಕಿದ್ದು, ರಾಜ್ಯ ವಿದ್ಯಾರ್ಥಿ ವೇತನ ಎಸ್‌ಎಸ್‌ಪಿ ತಂತ್ರಾಂಶದಲ್ಲಿ ನೋಂದಣಿಯಾಗಿರಬೇಕು. ವಿದ್ಯಾರ್ಥಿ ಎಸ್‌ಎಟಿಎಸ್ ಸಂಖ್ಯೆ, ಶೈಕ್ಷಣಿಕ ಉದ್ದೇಶಕ್ಕಾಗಿ ಪಡೆದ ಜಾತಿ, ಆದಾಯ ಪ್ರಮಾಣ ಪತ್ರದ ಪ್ರತಿ, ಹಿಂದಿನ ವರ್ಷದ ದೃಢೀಕೃತ ಅಂಕಪಟ್ಟಿ ಪ್ರತಿ, ಪೋಷಕರ ಮತ್ತು ವಿದ್ಯಾರ್ಥಿಯ ಆಧಾರ್ ಕಾರ್ಡ್ ಪ್ರತಿ, ಮೊಬೈಲ್ ಸಂಖ್ಯೆಯೊಂದಿಗೆ ಅರ್ಜಿಯನ್ನು ತಿತಿತಿ.ಭಛಿತಿಜ.ಇಚಿಡಿಟಿಚಿಣಚಿಞಚಿ.ರಿಠತಿ.ಟಿ ನಲ್ಲಿ ಸಂಪರ್ಕಿಸಿ ಸ್ಟೇಟ್ ಹಾಸ್ಟೆಲ್ ಪೋರ್ಟಲ್ ಮೂಲಕ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಸಹಾಯವಾಣಿ (08262–295073) ಸಂಖ್ಯೆಯನ್ನು ಸಂಪರ್ಕಿಸಬಹುದು ಅಥವಾ ಎಂದು ಚಿಕ್ಕಮಗಳೂರು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾಲಾನುಕ್ರಮಣಿಕೆ ನಿಗದಿ: ಹೊಸ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಜೂನ್ 20 ಕೊನೆಯ ದಿನವಾಗಿದೆ. ಹೊಸ ಅರ್ಜಿಗಳನ್ನು ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು ಜೂನ್ 23 ರಂದು ಪರಿಶೀಲನೆ ಮಾಡಲಿದ್ದು, ತಾಲ್ಲೂಕು ಸಮಿತಿಯ ಮೂಲಕ ಆಯ್ಕೆಯಾದ ಹೊಸ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಜೂನ್ 27 ರಂದು ಪ್ರಕಟಿಸಲಾಗುವುದು. ಆಯ್ಕೆಯಾದ ವಿದ್ಯಾರ್ಥಿಗಳು ವಿದ್ಯಾರ್ಥಿ ನಿಲಯಗಳಿಗೆ ಜೂನ್ 30 ರಂದು ಪ್ರವೇಶ ಪಡೆಯಬಹುದು ಎಂದು ಅವರು ಮಾಹಿತಿ ನೀಡಿದ್ದಾರೆ.

# ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು, ಮೇ 26:** 2025–26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯು ಚಿಕ್ಕಮಗಳೂರು ತಾಲ್ಲೂಕು ವ್ಯಾಪ್ತಿಯಲ್ಲಿ ನಡೆಯುತ್ತಿರುವ ಡಾ.ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ 5 ರಿಂದ 10ನೇ ತರಗತಿ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪಿಯುಸಿ, ಪದವಿ ಹಾಗೂ ವಿವಿಧ ವೃತ್ತಿಪರ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನ. ವಿದ್ಯಾರ್ಥಿಗಳು ತಿತಿತಿ.ತಿಜ.ಇಚಿಡಿಟಿಚಿಣಚಿಞಚಿ.ಟುಛಿ.ಟಿ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ನಗರದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್–)ರವರ ಕಚೇರಿಯನ್ನು (08262–295123, 9480843100) ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ಪಟ್ಟಣಕ್ಕೆ ಒಂಟಿ ಸಲಗ ಪ್ರವೇಶ: ಕಾಡಾನೆ ಸೆರೆಗೆ ಅರಣ್ಯ ಇಲಾಖೆ ಸಿದ್ಧತೆ

**ಮೂಡಿಗೆರೆ:** ತೋಟಗಳಿಗೆ ಪ್ರವೇಶ ಮಾಡುತ್ತಿದ್ದ ಕಾಡಾನೆ ಇದೀಗ ಒಂಟಿ ಸಲಗವೊಂದು ಶನಿವಾರ ತಡ ರಾತ್ರಿ 2 ಗಂಟೆ ಸಂದರ್ಭದಲ್ಲಿ ಪಟ್ಟಣದ ಬಿಳಗುಳ ಗ್ರಾಮಕ್ಕೆ ಪ್ರವೇಶಿಸಿ ಜನರಲ್ಲಿ ಆತಂಕ ಮೂಡಿಸಿದೆ.

ಗೆಂಡೇಹಳ್ಳಿ ಭಾಗದಲ್ಲಿದ್ದ ಈ ಒಂಟಿ ಸಲಗದ ಚಲನವಲನ ಗಮನಿಸಿಸುತ್ತಿದ್ದ ಅರಣ್ಯ ಇಲಾಖೆ, ಮೂಡಿಗೆರೆ ಪಟ್ಟಣ ಸಮೀಪ ಸಾಗಬಹುದೆಂದು ಮೊದಲೇ ಅಂದಾಜಿಸಿದ್ದರಿಂದ ಅರಣ್ಯ ಇಲಾಖೆ ಪಟ್ಟಣ, ಸೇರಿದಂತೆ ಬೀಜವಳ್ಳಿ, ಛತ್ರಮೈಧಾನ, ಕಡೇ ಮಾಡ್ಕಲ್, ಮೇಗಲಪೇಟೆ ಗ್ರಾಮದ ಜನರು ಹಾಗೂ ವಾಹನ ಸವಾರರು ಎಚ್ಚರಿಕೆಯಿಂದಿರಬೇಕೆಂದು ಶನಿವಾರ ಪ್ರಚಾರ ನಡೆಸಲಾಗಿತ್ತು. ಇದರಿಂದ



ಜನರು ಕೂಡ ಎಚ್ಚೆತ್ತುಕೊಂಡಿದ್ದರು. ಆದರೆ ಶನಿವಾರ ತಡರಾತ್ರಿ ಸುಮಾರು 2 ಗಂಟೆಗೆ ಒಂಟಿ ಸಲಗ ಪಟ್ಟಣದ ಬಿಳಗುಳ, ಇಂದಿರಾನಗರ, ಕೊಲ್ಲಿಬೈಲ್ ಗ್ರಾಮಕ್ಕೆ ಪ್ರವೇಶಿಸಿ ರಸ್ತೆಯಲ್ಲಿ ಸಂಚರಿಸಿದೆ.

ಜನ ವಸತಿ ಪ್ರದೇಶಕ್ಕೆ ಒಂಟಿ ಸಲಗ ಕಾಲಿಟ್ಟ ಹಿನ್ನಲೆಯಲ್ಲಿ ಜನರ ಪ್ರಾಣ ರಕ್ಷಣೆಗಾಗಿ ಒಂಟಿ ಸಲಗ ಸೆರೆ ಹಿಡಿಯಲು ಅರಣ್ಯ ಇಲಾಖೆ ದಿಢೀರ್ ಸಿದ್ಧತೆ ಮಾಡಿಕೊಂಡಿತು. ಕಾರ್ಯಚರಣೆಗೆ ಮಹೇಂದ್ರ, ಭೀಮ, ಧನಂಜಯ, ಸುಗ್ರೀವ, ಏಕಲವ್ಯ ಮತ್ತು ಕಂಜಾನ್ ಒಟ್ಟು 6 ಸಾಕಾನೆಗಳನ್ನು ಕರೆ ತರಲಾಗಿತ್ತು.

ಅಷ್ಟೊತ್ತಿಗಾಗಲೇ ಬಿಳಗುಳದಿಂದ ಸಾಗಿ ಚಿಕ್ಕಳ್ಳ ಸಮೀಪದ ಕಾರೆಹಳ್ಳಿ ಹತ್ತಿರ ಎಸ್ಟೇಟ್‌ವೊಂದರಲ್ಲಿ ಬೀಡು ಬಿಟ್ಟಿದ್ದ ಒಂಟಿ ಸಲಗ ಅಲ್ಲಿಂದ ತಪ್ಪಿಸಿಕೊಂಡಿದ್ದು, ಕಾಡಾನೆ ಸೆರೆಗಾಗಿ ಅರಣ್ಯ ಇಲಾಖೆ ಕಾರ್ಯಚರಣೆ ಮುಂದುವರೆಸಿದ್ದಾರೆ.

# ಬಿತ್ತನೆ ಬೀಜ, ರಸಗೊಬ್ಬರ ಕೊರತೆಯಾಗದಂತೆ ಕ್ರಮವಹಿಸಿ : ಬಿ.ಟಿ.ಕುಮಾರಸ್ವಾಮಿ

**ಚಿತ್ರದುರ್ಗ :** ಮುಂಗಾರು ಪೂರ್ವದಲ್ಲಿಯೇ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದೆ. ರೈತರು ಭೂಮಿಯನ್ನು ಹದ ಮಾಡಿಕೊಂಡು ಬಿತ್ತನೆಗೆ ಸಿದ್ಧತೆ ನಡೆಸಿದ್ದಾರೆ. ಕೃಷಿ ಅಧಿಕಾರಿಗಳು ಬಿತ್ತನೆ ಬೀಜ ಹಾಗೂ ಅಗತ್ಯ ರಸಗೊಬ್ಬರಗಳು ಕೊರತೆಯಾಗದಂತೆ ಕ್ರಮ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ 2025–26ನೇ ಸಾಲಿನ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ, ಬಿತ್ತನೆ ಬೀಜ ಮತ್ತು ರಸಗೊಬ್ಬರ ಇತ್ಯಾದಿ ಕೃಷಿ ಪರಿಕರಗಳ ಯೋಜನೆ ಮತ್ತು ಲಭ್ಯತೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಬಿತ್ತನೆ ಬೀಜ ಹಾಗೂ ರಸಗೊಬ್ಬರಕ್ಕೆ ರೈತರು ಸಾಲುಗಟ್ಟಿ ನಿಲ್ಲುವಂತಾಗಬಾರದು. ಕಾಳ ಸಂತೆಯಲ್ಲಿ ಹೆಚ್ಚಿನ ದರಕ್ಕೆ ಮಾರಾಟವಾಗುವುದನ್ನು ಅಧಿಕಾರಿಗಳು ತಡೆಗಟ್ಟಬೇಕು. ಬೇಡಿಕೆಗೆ ಅನುಸಾರವಾಗಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಅಗತ್ಯ ದಾಸ್ತಾನು ಶೇಖರಿಸಿಡಬೇಕು. ಕೃಷಿ ಇಲಾಖೆಯ ಸಂಚಾರಿ ಮಣ್ಣು ಪರೀಕ್ಷಾ ಕೇಂದ್ರಗಳ ಸದುಪಯೋಗಪಡಿಸಿಕೊಂಡು ರೈತರ ಜಮೀನಿನ ಮಣ್ಣಿನ ಪರೀಕ್ಷೆ ನಡೆಸಬೇಕು. ರೈತರಿಗೆ ಮಣ್ಣಿನ ಫಲವತ್ತತೆಯ ವರದಿಯನ್ನು ನೀಡಬೇಕು. ಇದನ್ನು ಆಧರಿಸಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಬಳಕೆ ಮಾಡಲು ರೈತರಿಗೆ ಅಧಿಕಾರಿಗಳು ಶಿಫಾರಸ್ಸು ಮಾಡಬೇಕು. ಇದರಿಂದ ಅನಾವಶ್ಯಕವಾಗಿ ಮಣ್ಣಿಗೆ ರಾಸಾಯನಿಕ ಗೊಬ್ಬರಗಳನ್ನು ಸುರಿಯುವುದು ತಪ್ಪುತ್ತದೆ. ಮಣ್ಣಿನ ಫಲವತ್ತತೆ ಆಧರಿಸಿ ಬೆಳೆ ಬೆಳೆಯುವುದರಿಂದ ರೈತರಿಗೆ ಆರ್ಥಿಕವಾಗಿ ಹೆಚ್ಚಿನ ನಷ್ಟ ಉಂಟಾಗುವುದಿಲ್ಲ. ರೈತರು ಸಾಲದ ಸುಳಿಯಲ್ಲಿ ಸಿಲುಕುವುದಿಲ್ಲ. ರೈತರು ಕೃಷಿಯೊಂದಿಗೆ ಪಶು ಸಂಗೋಪನೆ ಕೈಗೊಂಡು ಸಮಗ್ರ ಬೇಸಾಯ ಪದ್ಧತಿಯನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡಬೇಕು. ಕೊಟ್ಟಿಗೆ ಹಾಗೂ ಸಾವಯವ ಗೊಬ್ಬರಗಳನ್ನು ಬಳಸುವುದರಿಂದ ಮಣ್ಣಿನ ಫಲವತ್ತತೆ ಹಾಳಾಗುವುದಿಲ್ಲ. ಈ ಕುರಿತು ರೈತರಿಗೆ ಮನದಟ್ಟು ಮಾಡಿಕೊಡಬೇಕು. ಡಿಎಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಇತರೆ ಸಂಯುಕ್ತ ರಸ ಗೊಬ್ಬರಗಳನ್ನು ಬಳಸಲು ರೈತರಿಗೆ ಸಲಹೆ ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ ಟಿ ಕುಮಾರಸ್ವಾಮಿ ಹೇಳಿದರು.

12,924 ಕ್ವಿಂಟಾಲ್ ಬಿತ್ತನೆ ಬೀಜ ಸಂಗ್ರಹಣೆ: ಜನವರಿಯಿಂದ ಮೇ ತಿಂಗಳವರೆಗೆ ಜಿಲ್ಲೆಯಲ್ಲಿ 79.9 ಮಿ.ಮೀ. ವಾಡಿಕೆ ಮಳೆ ನಿರೀಕ್ಷೆ ಇತ್ತು. ಆದರೆ ಜಿಲ್ಲೆಯಲ್ಲಿ ಈವರೆಗೆ 135.8 ಮಿ.ಮೀ.ಮಳೆಯಾಗಿದೆ. ಇದರಿಂದಾಗಿ ಜಿಲ್ಲೆಯಲ್ಲಿ ಬಿತ್ತನೆ ಚಟುವಟಿಕೆಗಳು ಗರಿ ಗೆದರಿವೆ. ಶೇಂಗಾ, ಮೆಕ್ಕೆಜೋಳ, ರಾಗಿ, ತೊಗರಿ, ಸೂರ್ಯಕಾಂತಿ, ಹೆಸರು, ಹಲಸಂದಿ, ಸಿರಿಧಾನ್ಯ, ಹತ್ತಿ ಬೆಳೆಗಳನ್ನು ಹೆಚ್ಚಾಗಿ ಬೆಳೆಯುತ್ತಾರೆ. ಕೃಷಿ ಇಲಾಖೆಯಿಂದ ಒಟ್ಟು 31454 ಕ್ವಿಂಟಾಲ್ ಬಿತ್ತನೆ ಬೀಜದ ಗುರಿ ನಿಗದಿ ಪಡಿಸಿಕೊಂಡಿದ್ದು, ಈಗಾಗಲೇ 12,924 ಕ್ವಿಂಟಾಲ್ ಬಿತ್ತನೆ ಬೀಜದ ದಾಸ್ತಾನು ಸಂಗ್ರಹಣೆ ಮಾಡಲಾಗಿದೆ. ಜುಲೈ 2ನೇ ವಾರದವರೆಗೂ ಬಿತ್ತನೆ ಮಾಡಲು ಅವಕಾಶವಿದೆ ಎಂದು ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ಸಭೆಯಲ್ಲಿ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಏಪ್ರಿಲ್–25 ರಿಂದ ಮಾರ್ಚ್–26 ವರೆಗೆ ಒಟ್ಟು 94,546 ಮೆಟ್ರಿಕ್ ಟನ್ ರಸಗೊಬ್ಬರದ ಬೇಡಿಕೆ ನಿರೀಕ್ಷೆಯಿದೆ. ಇದುವರೆಗೂ ಒಟ್ಟು 32,045 ಮೆಟ್ರಿಕ್ ಟನ್ ಹೊಸ ಗೊಬ್ಬರ ದಾಸ್ತಾನು ಸಂಗ್ರಹಿಸಲಾಗಿದ್ದು, 12,567 ಮೆಟ್ರಿಕ್ ಟನ್ ಮಾರಾಟವಾಗಿದೆ. 19,477 ಮೆಟ್ರಿಕ್ ಟನ್ ಗೊಬ್ಬರ ಉಳಿಕೆಯಾಗಿದೆ. ಕೃಷಿ ಇಲಾಖೆಯ 22 ರೈತಸಂಪರ್ಕ ಕೇಂದ್ರ ಹಾಗೂ 13 ಹೆಚ್ಚುವರಿ ವಿತರಣಾ ಕೇಂದ್ರಗಳಲ್ಲಿ ಸಹಾಯ ಧನದಡಿ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುವುದು. ಇದನ್ನು ಹೊರತುಪಡಿಸಿ 59 ಕೃಷಿಪತ್ತಿನ ಸಹಕಾರ ಸಂಘಗಳು, 26 ರೈತ ಉತ್ಪಾದಕ ಸಂಸ್ಥೆಗಳು, 283 ಖಾಸಗಿ ಮಾರಾಟಗಾರರು ಬಿತ್ತನೆ ಬೀಜ ಮಾರಾಟ ಮಾಡಲಿದ್ದಾರೆ. ಕಳಪೆ ಹಾಗೂ ಹೆಚ್ಚಿನ ದರಕ್ಕೆ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಮಾರಾಟ ಮಾಡದಂತೆ ಈಗಾಗಲೇ ಸಂಬಂಧಪಟ್ಟವರಿಗೆ ಎಚ್ಚರಿಕೆ ನೀಡಲಾಗಿದೆ. ತೊಗರಿ, ಶೇಂಗಾ, ಸೂರ್ಯಕಾಂತಿ ಮುಸುಕಿನ ಜೋಳ, ರಾಗಿ ಮತ್ತು ಸಿರಿಧಾನ್ಯ ಬೆಳೆಗಳಲ್ಲಿ ಉತ್ತಮ ಇಳುವರಿ ಪಡೆಯಲು ಸುಧಾರಿತ ಬಿತ್ತನೆ ಬೀಜ ಹಾಗೂ ನವೀನ ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳಲು ರೈತರಿಗೆ ಶಿಫಾರಸ್ಸು ಮಾಡಲಾಗುತ್ತಿದೆ. ರಾಷ್ಟ್ರೀಯ ಖಾದ್ಯ ತೈಲ ಅಭಿಯಾನದಡಿ ಎಣ್ಣೆಕಾಳುಗಳಾದ ಶೇಂಗಾ, ಸೂರ್ಯಕಾಂತಿ, ಹರಳೆ ಬಿತ್ತನೆ ಮಾಡಲು ಪ್ರೋತ್ಸಾಹ ನೀಡಲಾಗುತ್ತಿದೆ. ಯೂರಿಯಾ, ಡಿಎಪಿ, ಎಂಓಪಿ, ಕಾಂಪ್ಲೆಕ್ಸ್ ಹಾಗೂ ಎಸ್‌ಎಸ್‌ಪಿ ರಸಗೊಬ್ಬರಗಳ ಜೊತೆಗೆ ಲಘು ಪೋಷಕಾಂಶಗಳು, ಪೊಟಾಸಿಯಂ ಹಾಗೂ ಗಂಧಕ ಸಾರಗಳನ್ನು ಒದಗಿಸುವ ಹೊಸ ಗೊಬ್ಬರಗಳನ್ನು ಬಳಸಲು ರೈತರಿಗೆ ಸಲಹೆ ನೀಡಲಾಗುತ್ತಿದೆ ಎಂದು ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ತಿಳಿಸಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ರೈತರ ಸಲಹೆ ಕರ ಪತ್ರಗಳನ್ನು ಬಿಡುಗಡೆ ಮಾಡಿ, ರಸಗೊಬ್ಬರ ಮಾರಾಟ ಮಾಡುವ ಪಿಓಎಸ್ ಯಂತ್ರಗಳಿಗೆ ಚಾಲನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಗಾಯಿತ್ರಿ, ಕೃಷಿ ಉಪ ನಿರ್ದೇಶಕ ಕೆ.ಎಸ್.ಶಿವಕುಮಾರ್, ಕೃಷಿ ಇಲಾಖೆ ಜಾರಿ ದಳದ ಸಹಾಯಕ ನಿರ್ದೇಶಕರಾದ ಮಲ್ಲನಗೌಡ, ಜೆ,ಉಲ್ಪತ್ ಜೈಬ್, ಇಫ್ಕೋ ಕ್ಷೇತ್ರಾಧಿಕಾರಿ ಚಿದಂಬರಮೂರ್ತಿ, ಜಿಲ್ಲಾ ರಸಗೊಬ್ಬರ ಮಾರಾಟಗಾರರ ಯೂನಿಯನ್ ಅಧ್ಯಕ್ಷ ಜಿ.ಪಿ.ರೇವಣಸಿದ್ದಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಬೆತ್ತಲೆಯಾಗಿ ಅಂಗಡಿಗೆ ನುಗ್ಗಿ 85 ಮೊಬೈಲ್ ಕದ್ದು ಪರಾರಿಯಾದ ಕಳ್ಳ

**ಬೆಂಗಳೂರು, ಮೇ 15–** ಗುರುತು ಮರೆಮಾಚಲು ಖತರ್ನಾಕ್ ಕಳ್ಳನೊಬ್ಬ ಸಂಪೂರ್ಣ ಬೆತ್ತಲೆಯಾಗಿ ಮುಖಕ್ಕೆ ಮಾಸ್ಕ್ ಧರಿಸಿ ಮೊಬೈಲ್ ಅಂಗಡಿಗೆ ನುಗ್ಗಿ 85 ಕ್ಕೂ ಹೆಚ್ಚು ಮೊಬೈಲ್ ಗಳನ್ನು ದೋಚಿ ಪರಾರಿಯಾಗಿದ್ದಾನೆ. ಮುಖಕ್ಕೆ ಮಾಸ್ಕ್ ಧರಿಸಿ ಬೆತ್ತಲೆಯಾಗಿ ಬಂದು ಕಳೆದ 8 ರಂದು ರಾತ್ರಿ ಬೊಮ್ಮನಹಳ್ಳಿಯ ಹೊಂಗಸಂದ್ರದ ಟೆಲಿಕಾಂ ಮೊಬೈಲ್ ಅಂಗಡಿ) ಶಾಪ್‌ನ ಗೋಡೆ ಕೊರೆದು ಆಮೂಲಕ ಒಳನುಗ್ಗಿ ವಿವಿಧ ಕಂಪನಿಯ 85 ಮೊಬೈಲ್‌ಗಳನ್ನು ಕಳ್ಳತನ ಮಾಡಿಕೊಂಡು ಪರಾರಿಯಾಗಿದ್ದಾನೆ. ಮಾರನೇ ದಿನ ಬೆಳಗ್ಗೆ ಅಂಗಡಿ ಮಾಲೀಕ ಎಂದಿನಂತೆ ಬಂದು ಅಂಗಡಿ ಬೀಗ ತೆಗೆದು ಒಳಗೆ ಹೋದಾಗ ವಸ್ತುಗಳೆಲ್ಲಾ ಚೆಲ್ಲಾಪಿಲ್ಲಿಯಾಗಿರುವುದು ಗಮನಿಸಿದಾಗ ಗೋಡೆ ಕೊರೆದು ಒಳನುಗ್ಗಿ ಮೊಬೈಲ್‌ಗಳ ಕಳ್ಳತನವಾಗಿರುವುದು ಗೊತ್ತಾಗಿದೆ. ತಕ್ಷಣ ಅವರು ಸಿಸಿ ಕ್ಯಾಮೆರಾ ನೋಡಿದಾಗ ಕಳ್ಳ ಬೆತ್ತಲೆಯಾಗಿ ಬಂದು ಮೊಬೈಲ್‌ಗಳನ್ನು ಕಳ್ಳತನ ಮಾಡಿರುವುದು ಸೆರೆಯಾಗಿದೆ. ಕ್ಯಾಮರಾದಲ್ಲಿ ಸೆರೆಯಾಗುತ್ತದೆ. ಬಟ್ಟೆ ಜಾಡುಹಿಡಿದು ನನ್ನನ್ನು ಪೊಲೀಸರು ಬಂಧಿಸುತ್ತಾರೆ ಎಂದು ತಿಳಿದು ಪೊಲೀಸರ ತನಿಖೆಯ ಹಾದಿ ತಪ್ಪಿಸಿಲು ಬೆತ್ತಲೆಯಾಗಿ ಕಳ್ಳತನ ಮಾಡಿರುವುದು ಗೊತ್ತಾಗಿದೆ.

# ಪಿಯು ಹಂತದಲ್ಲಿಯೇ ಉನ್ನತ ಶಿಕ್ಷಣದ ಮಾರ್ಗದರ್ಶನ ನೀಡಿ

### ಉನ್ನತ ಶಿಕ್ಷಣ ಮಾಹಿತಿ ಕಾರ್ಯಾಗಾರದಲ್ಲಿ ಡಿಡಿಪಿಯು ಪುಟ್ಟಸ್ವಾಮಿ

**ಚಿತ್ರದುರ್ಗ :** ಪದವಿ ಪೂರ್ವ ಹಂತದಲ್ಲಿಯೇ ಉಪನ್ಯಾಸಕರು ಉನ್ನತ ಶಿಕ್ಷಣದ ಕುರಿತು ವಿದ್ಯಾರ್ಥಿಗಳಿಗೆ ಸೂಕ್ತ ಪ್ರೇರಣೆ ಹಾಗೂ ಮಾರ್ಗದರ್ಶನ ನೀಡಿ ಅವರ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಬೇಕು ಎಂದು ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್. ಪುಟ್ಟಸ್ವಾಮಿ ಹೇಳಿದರು.

ನಗರದ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಕಚೇರಿಯಲ್ಲಿ ಶುಕ್ರವಾರ ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರಿನ ಕಾಲೇಜು ಮಾಹಿತಿ ಸಹಯೋಗದಲ್ಲಿ ಜಿಲ್ಲೆಯ ಪಿಯು ಕಾಲೇಜು ಪ್ರಾಂಶುಪಾಲರು ಹಾಗೂ ಉಪನ್ಯಾಸಕರಿಗಾಗಿ ಹಮ್ಮಿಕೊಂಡಿದ್ದ "ಉನ್ನತ ಶಿಕ್ಷಣ ಮಾಹಿತಿ ಕಾರ್ಯಾಗಾರ" ಉದ್ಘಾಟಿಸಿ ಅವರು ಮಾತನಾಡಿದರು.

ಪದವಿಪೂರ್ವ ಶಿಕ್ಷಣ ನಂತರ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಮಾಹಿತಿ



ಅತ್ಯಗತ್ಯ. ಈ ನಿಟ್ಟಿನಲ್ಲಿ ಮಾಹಿತಿ ಕಾರ್ಯಾಗಾರ ಆಯೋಜಿಸಲಾಗಿದೆ. ಪಿಯು ನಂತರ ಯಾವ ಶಿಕ್ಷಣ ಪಡೆದರೆ ಅನುಕೂಲವಾಗಲಿದೆ ಎಂಬ ಮಾಹಿತಿ ಪದವಿ ಪೂರ್ವ ಹಂತದಲ್ಲಿಯೇ ನೀಡಬೇಕು. ಇದರಿಂದ ಗ್ರಾಮೀಣ ಪ್ರದೇಶದ ಬಡ ವಿದ್ಯಾರ್ಥಿಗಳಿಗೆ ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಉನ್ನತ ಶಿಕ್ಷಣ ಮಾಹಿತಿ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳು ನೀಡುವ ಮಾಹಿತಿ, ಸಲಹೆ–ಸೂಚನೆಗಳನ್ನು ತಮ್ಮ ವಿದ್ಯಾರ್ಥಿಗಳಿಗೆ ತಲುಪಿಸುವ ಜವಾಬ್ದಾರಿ ಉಪನ್ಯಾಸಕರು ಮಾಡಬೇಕು ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್ ಮಾತನಾಡಿ, ಪಿಯು ನಂತರ ಯಾವ ರೀತಿಯ ಕೋರ್ಸ್‌ಗಳನ್ನು ಆಯ್ಕೆ ಮಾಡಿಕೊಂಡರೆ ವಿದ್ಯಾರ್ಥಿಗಳ ಜೀವನಕ್ಕೆ ಅನುಕೂಲವಾಗಲಿದೆ ಎಂಬ ಮಾಹಿತಿಯನ್ನು ಸಂಪನ್ಮೂಲ ವ್ಯಕ್ತಿಗಳಿಂದ ತಿಳಿಸುವುದು ಅಗತ್ಯವಾಗಿದೆ. ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಇದ್ದು, ಈ ವಿದ್ಯಾರ್ಥಿಗಳಿಗೆ ಮಾಹಿತಿಯ ಕೊರತೆ ಇದೆ. ಮಾಹಿತಿ ಕೊರತೆಯಿಂದ ಜೀವನದಲ್ಲಿ ಹಿನ್ನಡೆಯಾಗುವ ಸಾಧ್ಯತೆ–ಯೂ ಇದೆ. ಹಾಗಾಗಿ ನಾವು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುವ ಮೂಲಕ ಅವರ ಸರ್ವಾಂಗೀಣ ಪ್ರಗತಿಗೆ ಶ್ರಮಿಸಬೇಕಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ನೆರವಿಗಾಗಿ ಬ್ಯಾಂಕ್‌ಗಳು ಸಹ ಶೈಕ್ಷಣಿಕ ಸಾಲಸೌಲಭ್ಯವನ್ನು ನೀಡುತ್ತವೆ. ಇದರ ಜೊತೆಗೆ ಸರ್ಕಾರವು ಸಾಕಷ್ಟು ಸೌಲಭ್ಯಗಳನ್ನು ನೀಡುತ್ತಿದ್ದು, ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ನಿರ್ಮಾಣಕ್ಕೆ ನಾವೆಲ್ಲರೂ ಪಾತ್ರರಾಗೋಣ ಎಂದು ಅಭಿಪ್ರಾಯಪಟ್ಟರು.

ಎಸ್‌ಆರ್‌ಎಸ್ ವಿದ್ಯಾಸಂಸ್ಥೆಯ ಆಡಳಿತಾಧಿಕಾರಿ ಟಿ.ಎಸ್.ರವಿ ಮಾತನಾಡಿ, ಪಿಯು ಹಂತದಲ್ಲಿ ಮಕ್ಕಳಿಗೆ ಸ್ಪಷ್ಟವಾಗಿ, ಗೊಂದಲಕ್ಕೆ ಒಳಗಾಗದಂತೆ ತಮ್ಮ ಪ್ರತಿಭೆಗೆ ಪೂರಕವಾದ ಶಿಕ್ಷಣ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡರೆ ವಿದ್ಯಾರ್ಥಿಯ ಭವಿಷ್ಯ ಉಜ್ವಲವಾಗಿರುತ್ತದೆ ಎಂದು ಹೇಳಿದರು.

ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಸಹಾಯಕ ಆಯುಕ್ತ ಪಿ.ವೈ. ದೇವರಾಜ್ ಪ್ರಸಾದ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಸುಬ್ರಮಣ್ಯ, ನಾಜಿಯಾ, ಕಾಲೇಜು ಮಾಹಿತಿಯ ರಾಹುಲ್ ರೆಡ್ಡಿ, ಆರ್ಥಿಕ ಸಲಹೆಗಾರ ತಿಪ್ಪೇಸ್ವಾಮಿ ಸೇರಿದಂತೆ ಜಿಲ್ಲೆಯ ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರು, ಉಪನ್ಯಾಸಕರು ಇದ್ದರು.

# ಪೌರ ಕಾರ್ಮಿಕರನ್ನು ಗೌರವಿಸುವುದು ಉತ್ತಮ ಕಾರ್ಯ : ಶಾಸಕ ಶ್ರೀನಿವಾಸ್


**ತರೀಕೆರೆ :** ಪೌರಸೇವೆ ಮತ್ತು ಸ್ವಚ್ಛತಾ ನೌಕರರನ್ನು ಗೌರವಿಸುವುದು ಉತ್ತಮ ಕಾರ್ಯವಾಗಿದೆ ಎಂದು ಶಾಸಕ ಜಿ.ಎಚ್. ಶ್ರೀನಿವಾಸ್ ಹೇಳಿದ್ದಾರೆ.

ಅವರು ಶ್ರೀಮತಿ ಜಯಮ್ಮ ಮತ್ತು ಶ್ರೀ ಎಸ್. ಮಲ್ಲಯ್ಯ ಸೇವಾ ಪ್ರತಿಷ್ಠಾಪನದ ವತಿಯಿಂದ ಪಟ್ಟಣದ ಎಪಿಎಂಸಿ ಯಾರ್ಡ್‌ನಲ್ಲಿ ನಡೆದ ಶ್ರೀಮತಿ ಜಯಮ್ಮನವರ ಪುಣ್ಯ ಸ್ಮರಣೆ, ಪೌರಸೇವೆ, ಸ್ವಚ್ಛತಾ ನೌಕರರು, ಬೀದಿಬದಿ ವ್ಯಾಪಾರ ಮಾಡುವ ಸ್ತ್ರೀಯರು, ತಳ್ಳುಗಾಡಿ ವ್ಯಾಪಾರಿಗಳ ಸೇವೆ ಗುರುತಿಸಿ ಹಾಗೂ ಭದ್ರಾವತಿಯ ಅಂಧಮಕ್ಕಳಿಗೆ ಸನ್ಮಾನಿಸಿ ಮಾತನಾಡಿದರು.

ಎಂ. ನರೇಂದ್ರರವರು ಪುರಸಭೆ ಅಧ್ಯಕ್ಷರಾಗಿ, ಸಹಕಾರಿ ರತ್ನ ಪ್ರಶಸ್ತಿ ಪುರಸ್ಕೃತರಾಗಿ ಅನೇಕ ಸೇವಾ ಕಾರ್ಯಗಳನ್ನು ನಿರ್ವಹಿಸುತ್ತಿದ್ದಾರೆ ಎಂದರು.

ಪುರಸಭಾ ಮಾಜಿ ಅಧ್ಯಕ್ಷ ಟಿ.ಎಸ್. ಧರ್ಮರಾಜ್ ಮಾತನಾಡಿ, ಜಯಮ್ಮ ನಗುಮುಖದವರು. ಮನೆಯ ಹಿರಿಯ ಸೊಸೆಯಾಗಿದ್ದರು. ಅವರು ಎಲ್ಲರನ್ನು ಸಮಾನವಾಗಿ ಕಾಣುತ್ತಿದ್ದರು. ಎಂ.ನರೇಂದ್ರ ಅವರ ಕುಟುಂಬ ಒಗ್ಗಟ್ಟಾಗಿದ್ದಾರೆ. ಕಾಯಕ ನಿಷ್ಠೆ ಹೊಂದಿರುವ ಅವರು ಅನೇಕ ಸಹಕಾರ ಸಂಘಗಳ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಸಮಾಜದ ಕಾಯಕ, ಶ್ರಮಜೀವಿಗಳನ್ನು ಗುರುತಿಸಿ ಗೌರವಿಸುತ್ತಿರುವುದು ಮಾದರಿಯಾಗಿದೆ ಎಂದರು.

ವಿಧಾನ ಪರಿಷತ್ತಿನ ಮಾಜಿ ಸದಸ್ಯೆ ಗಾಯಿತ್ರಿ ಶಾಂತೇಗೌಡ



ಮಾತನಾಡಿದರು. ಪುರಸಭಾ ಮಾಜಿ ಅಧ್ಯಕ್ಷ ಎಂ. ನರೇಂದ್ರ ಮಾತನಾಡಿ, ನಮ್ಮ ಮಾತೃಶ್ರೀ ಅವರ ಆಶಯದಂತೆ ಶ್ರಮಿಕ ವರ್ಗದವರನ್ನು ಸನ್ಮಾನಿಸಿ ಅವರ ಸೇವೆಯನ್ನು ಸ್ಮರಿಸಲಾಗುತ್ತಿದೆ. ಅವರಿಗೆ ಉಡುಗೊರೆ ನೀಡಿ ದುಡಿಮೆಯ ಮೂಲ ಬಂಡವಾಳಕ್ಕೆ ಆರ್ಥಿಕ ನೆರವು ವಿತರಿಸಲಾಗಿದೆ ಎಂದು ತಿಳಿಸಿದರು.

ಶಿಕ್ಷಕ ಯೋಗೀಶ್ ಮಾತನಾಡಿ, ಅಂಧಮಕ್ಕಳ ಕೇಂದ್ರದ ಮಕ್ಕಳನ್ನು ಗೌರವಿಸಿರುವುದು ಸಂತೋಷ ತಂದಿದೆ. ಇದು ತಮ್ಮ ತಾಯಿಯವರ ಆಶಯವಾಗಿತ್ತು ಎಂದರು.

ಕುಟುಂಬದ ಹಿರಿಯರಾದ ಗುರುಮೂರ್ತಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ಮಾಜಿ ಶಾಸಕ ಡಿ.ಎಸ್.ಸುರೇಶ್, ಮಾಜಿ ಶಾಸಕ ಎಸ್.ಎಂ. ನಾಗರಾಜ್, ಪುರಸಭೆ ಅಧ್ಯಕ್ಷ ವಸಂತ ಕುಮಾರ್, ಉಪಾಧ್ಯಕ್ಷೆ ಪಾರ್ವತಮ್ಮ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಶಿವಾನಂದಸ್ವಾಮಿ, ಪುರಸಭಾ ಮಾಜಿ ಅಧ್ಯಕ್ಷ ಟಿ.ವಿ. ಶಿವಶಂಕರಪ್ಪ, ಟಿ.ಎಸ್. ಪ್ರಕಾಶ್ ವರ್ಮಾ, ಟಿ.ಎಸ್. ರಮೇಶ್, ಟಿ.ಎನ್. ಜಗದೀಶ್, ಚಿಕ್ಕಮಗಳೂರು ಜಿಲ್ಲಾ ಭೂದಾಖಲೆ ಉಪ ನಿರ್ದೇಶಕ ಟಿ.ಕೆ. ಲೋಹಿತ್, ಮುಖಂಡರಾದ ಎಂ.ಎಲ್. ಮೂರ್ತಿ, ಬಿಜೆಪಿ ಜಿಲ್ಲಾಧ್ಯಕ್ಷ ದೇವರಾಜ ಶೆಟ್ಟಿ, ಜಿಪಂ ಮಾಜಿ ಅಧ್ಯಕ್ಷ ಕೆ.ಆರ್. ದೃವಕುಮಾರ್, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಎಚ್.ಯು. ಫಾರೂಕ್, ವಾಣಿ ಶ್ರೀನಿವಾಸ್, ಚೇತನ್ ಗೌಡ, ಪರುಶುರಾಮ್, ಶಿವಾನಂದ್, ಹಾದಿಕೆರೆ ರಾಜು ಭಾಗವಹಿಸಿದ್ದರು.

## ಆಲ್ದೂರು ಗ್ರಾಮ ಪಂಚಾಯಿತಿಗೆ ಉಪಾಧ್ಯಕ್ಷರಾಗಿ ಭರತ್ ಆಯ್ಕೆ



**ಚಿಕ್ಕಮಗಳೂರು:** ತಾಲ್ಲೂಕಿನ ಆಲ್ದೂರು ಗ್ರಾಮ ಪಂಚಾಯಿತಿಯ ಉಪಾಧ್ಯಕ್ಷರಾಗಿ ಎ.ಬಿ. ಭರತ್ ಅವಿರೋಧವಾಗಿ ಆಯ್ಕೆಯಾದರು. ಚುನಾವಣಾಧಿಕಾರಿಯಾಗಿ ಎನ್. ಚೇತನ್‌ಕುಮಾರ್ ಕಾರ್ಯನಿರ್ವಹಿಸಿದರು.

ಬಳಿಕ ಅಭಿನಂದನೆ ಸಲ್ಲಿಸಿ ಮಾತನಾಡಿದ ಉಪಸಭಾಪತಿ ಎಂ.ಕೆ.ಪ್ರಾಣೇಶ್, ಪಂಚಾಯಿತಿ ಸ್ಥಾನ ಹೊತ್ತಿರುವ ನೂತನ ಉಪಾಧ್ಯಕ್ಷರ ಮೇಲೆ ಮಹತ್ತರ ಜವಾಬ್ದಾರಿಯಿದೆ. ಗ್ರಾಮಸ್ಥರ ನಿರೀಕ್ಷೆಗೂ ಮೀರಿ ಕೆಲಸ ಮಾಡಲಾಗದಿದ್ದರೂ ಜನತೆಯ ಮನಸ್ಸನ್ನು ಗೆಲ್ಲುವಂತ ನಿಟ್ಟಿನಲ್ಲಿ ಅವಧಿ ಪೂರೈಸಬೇಕು ಎಂದರು.

ಸರ್ವ ಸದಸ್ಯರು ಹಾಗೂ ಗ್ರಾಮಸ್ಥರ ಸಹಕಾರದಿಂದ ಅನುದಾನವನ್ನು ಇತಿಮಿತಿಯಲ್ಲಿ ಬಳಸಿಕೊಂಡು ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಿಗೆ ಮೂಲಭೂತ ಸೌಕರ್ಯ ಒದಗಿಸುವುದು ಪ್ರತಿನಿಧಿಗಳ ಕರ್ತವ್ಯ. ಹೀಗಾಗಿ ಹಂತಹಂತವಾಗಿ ಅಪೂರ್ಣ ಕಾಮಗಾರಿ ಪೂರ್ಣಗೊಳಿಸಿ ಸಾಗಬೇಕಿದೆ ಎಂದು ಹೇಳಿದರು.

ಇಂದು ಪಂಚಾಯಿತಿಯಲ್ಲಿ ಹಿರಿಯರು–ಕಿರಿಯರ ಸಮ್ಮಿಲನವಾಗಿದೆ. ನೂತನ ಉಪಾಧ್ಯಕ್ಷರು ಅಂದಿನಿಂದಲೂ ಭಾಜಪದಲ್ಲಿ ಗುರುತಿಸಿಕೊಂಡು ಗ್ರಾ.ಪಂ. ಸದಸ್ಯರಾಗಿ ಇದೀಗ ಉಪಾಧ್ಯಕ್ಷ ಸ್ಥಾನ ಗಳಿಸಲು ಜನ ಸಂಪರ್ಕವೇ ಕಾರಣ. ಬಾಲ್ಯದಲ್ಲಿ ಇದೇ ಗ್ರಾ.ಪಂ.ಗೆ ಪತ್ರಿಕೆ ಹಂಚುವ ಯುವಕ ಇದೀಗ ಉಪಾಧ್ಯಕ್ಷ ಸ್ಥಾನಕ್ಕೇರಿರುವ ಹಾದಿ ಸಾಮಾನ್ಯವಲ್ಲ ಎಂದರು.

ಭಾಜಪ ಆಲ್ದೂರು ಮಂಡಲ ಅಧ್ಯಕ್ಷ ರವಿ ಬಸರವಳ್ಳಿ ಮಾತನಾಡಿ, ಸುಮಾರು 26 ಸದಸ್ಯರನ್ನು ಒಳಗೊಂಡಿರುವ ಅತಿದೊಡ್ಡ ಗ್ರಾ.ಪಂ. ಆಲ್ದೂರು ಸಂಪೂರ್ಣ ಮಲೆನಾಡು ಭಾಗದಿಂದ ಕೂಡಿದೆ. ಜೊತೆಗೆ ವಸತಿ, ನಿವೇಶನ ರಹಿತರ ಸಮಸ್ಯೆಗಳಿರುವ ಹಿನ್ನೆಲೆಯಲ್ಲಿ ಹೆಚ್ಚಿನ ಆದ್ಯತೆಯನ್ನು ಉಪಾಧ್ಯಕ್ಷರು ಬಡವರ್ಗಕ್ಕೆ ನೀಡಲಿ ಎಂದು ಆಶಿಸಿದರು.

ನೂತನ ಉಪಾಧ್ಯಕ್ಷ ಎ.ಬಿ.ಭರತ್ ಮಾತನಾಡಿ, ಅತ್ಯಧಿಕ ಮತಗಳಿಂದ ಗ್ರಾ.ಪಂ. ಸದಸ್ಯನಾದ ತಮಗೆ ಸರ್ವ ಪಕ್ಷಗಳ ಒಪ್ಪಂದ ಮೇರೆಗೆ ಉಪಾಧ್ಯಕ್ಷ ಸ್ಥಾನ ಸಿಕ್ಕಿದೆ. ಮುಂದಿನ ದಿನಗಳಲ್ಲಿ ಪಂಚಾಯಿತಿ ಭ್ರಷ್ಟಮುಕ್ತ ಗ್ರಾ.ಪಂ.ವಾಗಿ ನಿರ್ಮಿಸಲು ಸದಾಕಾಲ ಕಾರ್ಯನಿರ್ವಹಿಸುತ್ತೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಅಧ್ಯಕ್ಷೆ ಶ್ರೀದೇವಿ ಕುಮಾರಸ್ವಾಮಿ, ಧರ್ಮಗುರುಗಳಾದ ರಾಘವೇಂದ್ರ, ಫಾದರ್ ಸಂತೋಷ್, ಬ್ಯಾರಿ ಮಸೀದಿ ಮೌಲಾನ, ಮುಖಂಡರುಗಳಾದ ಕೆ.ಟಿ.ರಾಧಾಕೃಷ್ಣ, ಕುರುವಂಗಿ ವೆಂಕಟೇಶ್, ಕೆ.ಆರ್.ಅನಿಲ್‌ಕುಮಾರ್, ಸಂತೋಷ್ ಕೋಟ್ಯಾನ್, ಸೀತರಾಮಭರಣ್ಯ, ನವರಾಜ್, ಗ್ರಾ.ಪಂ. ಸದಸ್ಯರು ಮತ್ತಿತರರು ಉಪಸ್ಥಿತರಿದ್ದರು.

### ಬಾಸೂರಿನಲ್ಲಿ ಹೇಮರಡ್ಡಿಮಲ್ಲಮ್ಮ ಜಯಂತ್ಯುತ್ಸವ

# ತಾಳುವಿಕೆಗಿಂತ ತಪವಿಲ್ಲ: ಕಾಶಿ ಜಗದ್ಗುರುಗಳು

**ಚಿಕ್ಕಮಗಳೂರು:** ತಾಳುವಿಕೆಗಿಂತ ತಪವಿಲ್ಲ ಎಂಬ ಮಾತಿಗೆ ಹೇಮರಡ್ಡಿಮಲ್ಲಮ್ಮ ನಿದರ್ಶನ ಎಂದು ವಾರಣಾಸಿಯ ಕಾಶೀ ಜ್ಞಾನಸಿಂಹಾಸನ ಮಹಾಪೀಠದ ಶ್ರೀಶ್ರೀಶ್ರೀ 1008 ಜಗದ್ಗುರು ಡಾ.ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಅಭಿಪ್ರಾಯಿಸಿದರು.

ಬಡಗನಾಡು ಹೇಮರಡ್ಡಿ ವೀರಶೈವ ಜನಾಂಗಸಂಘದ ಬಾಸೂರು ಘಟಕ ನೇತೃತ್ವದಲ್ಲಿ ಹಿರೇನಲ್ಲೂರು ಹೋಬಳಿ ಬಾಸೂರು ಕ್ರೀಡಾಂಗಣದಲ್ಲಿ ಎರಡುದಿನಗಳ ಕಾಲ ಆಯೋಜಿಸಿದ್ದ ಜಿಲ್ಲಾಮಟ್ಟದ ಶಿವಶರಣೆ ಶ್ರೀ ಹೇಮರಡ್ಡಿಮಲ್ಲಮ್ಮರ ಜಯಂತ್ಯುತ್ಸವದ ದಿವ್ಯ ಸಾನಿಧ್ಯವಹಿಸಿ ಅವರು ಆಶೀರ್ವಚನ ನೀಡಿ–ದರು.

ತಾಳಿದವನು ಬಾಳಿಯಾನು ಎಂಬ ಗಾದೆ ಮಾತಿದೆ. ಹಳಿದು ಹಂಗಿಸುವ ಹಗೆಮಾತು ತಾಳು, ಬುತ್ತಿಯನ್ನು ಬಿಚ್ಚಿಕೊಡುವವರೆಗೂ ತಾಳು ಎಂಬುದು ಜನಪ್ರಿಯ ನುಡಿಗಟ್ಟು. ನಿಂದನೆ ಸಹನೆ ಮಾಡಿಕೊಂಡವರು ಮಹಾಪುರುಷರಾಗಿದ್ದಾರೆ. ಸಾಧು ಸಂತರು ತಾಳ್ಮೆ ಎಂಬ ತಪದಿಂದಲೇ ದೊಡ್ಡರಾಗಿದ್ದಾರೆ. ಸಾಧ್ವಿ ಶಿರೋಮಣಿ ಮಲ್ಲಮ್ಮ ತಾಳುವಿಕೆಯ ಪ್ರತೀಕ ಎನಿಸಿಕೊಂಡಿದ್ದು, ಮಹಿಳಾ ಸಂಕುಲಕ್ಕೆ ಆದರ್ಶಪ್ರಾಯ ಎಂದರು.

ಮಲ್ಲಮ್ಮ ಅನುಭವಿಸಿದ ಸಂಸಾರಿಕ ಕಷ್ಟ–



ನಷ್ಟ, ಸಾಧಿಸಿದ ಧಾರ್ಮಿಕ ಅಭ್ಯುದಯ ಗಮನೀಯ. ಸಾಮಾನ್ಯ ಗೃಹಸ್ಥ ಜೀವನ ಸಾಗಿಸಿ ಸಹನಾಗುಣ ಪರಾಕಷ್ಠೆಗೆ ಹೋದಾಗ ಶ್ರೀಶೈಲ ಮಲ್ಲಯ್ಯನೆ ಬಂದು ನೆರವಾದ ಐತಿಹ್ಯವಿದೆ. ಮೈದುನ ವೇಮನನ ಕಾಮ ವಾಸನೆಸುಟ್ಟು ಆತನನ್ನು ಯೋಗಿಯಾಗಿ ಪರಿವರ್ತಿಸಿದ ಸಹನಾಗುಣ ಲೋಕಪ್ರಸಿದ್ಧಿ ಎಂದರು.

ಭಾರತದ ವಿವಿಧ ಕ್ಷೇತ್ರಗಳಲ್ಲಿ ಹಿಂದಿನಿಂದಲೂ ಅನೇಕ ಮಹಿಳೆಯರು ಸಾಧನೆ ಮಾಡಿದ್ದಾರೆ. ಧಾರ್ಮಿಕ ಕ್ಷೇತ್ರದಲ್ಲೂ ಹಿರಿಮೆ ಕಡಿಮೆ ಇಲ್ಲ. ಕಾಶ್ಮೀರದ ಲಲ್ಲೇಶ್ವರಿ, ಅಕ್ಕಮಹಾದೇವಿ, ಗುಡ್ಡಾಪುರ ದಾನಮ್ಮ... ಇಂತವರ ಸಾಲಿನಲ್ಲಿ ನಿಲ್ಲಬಹುದಾದ ಹೇಮರಡ್ಡಿಮಲ್ಲಮ್ಮ ಸಹನಾಶಕ್ತಿಯಿಂದ ಸಂಘರ್ಷ ಜಯಿಸಿದವಳು. ವ್ಯಕ್ತಿ ಶಕ್ತಿಯಾಗಿ ಬೆಳೆದು ಸಮಾಜಕ್ಕೆ ಮಾರ್ಗದರ್ಶನ ಮಾಡುವ ಸ್ಥಿತಿ ತಲುಪಿದ್ದು, ಲಿಂಗಪೂಜೆ ಮತ್ತು ಸಹನಾಶಕ್ತಿಯ ಗುಣದಿಂದ ಎಂದ ಕಾಶೀ ಜಗದ್ಗುರುಗಳು, ಬ್ರಹ್ಮನಿಗೆ ಸೃಷ್ಟಿ, ವಿಷ್ಣುವಿಗೆ ಪಾಲನೆಯಶಕ್ತಿ ಬರಲು ಲಿಂಗಪೂಜೆ ಪರಂಪರೆಯೆ ಕಾರಣವೆಂಬ ಶ್ಲೋಕವನ್ನು ಉಲ್ಲೇಖಿಸಿದರು.

ಹಿಂದೂ ಸಮಾಜ ಬಹಳ ವಿಶಾಲವಾದದ್ದು ಅದರಲ್ಲಿ ವೀರಶೈವ ಲಿಂಗಾಯತ ಸಮೂಹ ವಿಶಿಷ್ಟವಾದದ್ದು. ಇಷ್ಟಲಿಂಗ ಪೂಜೆಯ ಸಂಸ್ಕಾರಯುತ ಬದುಕು ಲೋಕ ಕಲ್ಯಾಣಕ್ಕೆ ಸಹಕಾರಿ ಎಂದ ಕಾಶೀ ಜಗದ್ಗುರುಗಳು, ಹೇಮರಡ್ಡಿಮಲ್ಲಮ್ಮ ಪರಂಪರೆಯ ಸಮೂಹ ಸಂಘಟಿತವಾಗಿ ಸಾರ್ಥಕ ಸ್ಮರಣೆ ಹಮ್ಮಿಕೊಳ್ಳುತ್ತಿದೆ ಎಂದರು.

ಚಿತ್ರದುರ್ಗದ ಅಪರಜಿಲ್ಲಾಧಿಕಾರಿ ಬಾಸೂರು ಮೂಲದ ಬಿ.ಟಿ.ಕುಮಾರಸ್ವಾಮಿ ಉಪನ್ಯಾಸ ನೀಡಿ, ಜ್ಞಾನ ಸಂಪಾದಿಸಿ ಅಜ್ಞಾನದ ಕತ್ತಲನ್ನು ತೊಲಗಿಸಬೇಕು. ಕಾಯಕ ಮತ್ತು ದಾಸೋಹ ಅದ್ಭುತವಾದ ಸಂಗತಿ. ಇವು ಉತ್ಪಾದನೆ ಮತ್ತು ಹಂಚಿಕೆಯನ್ನು ಸೂಚಿಸುತ್ತವೆ. ನಡೆ ಮತ್ತು ನುಡಿ ಒಂದೇ ಆದ ಬದುಕು ಆದರ್ಶಮಯ. ಇಂದು ಮಾನವೀಯತೆ ಮೌಲ್ಯಗಳು ಕುಸಿದಿರುವ ಸಂದರ್ಭ. ಆಸ್ತಿ, ಹಣ, ಅಧಿಕಾರದ ಬಿಸಿಲ ಕುದುರೆಯೇರಿ ಓಡುತ್ತಿದ್ದೇವೆ. ಅರಿವೆ ಗುರು ಎಂಬುದನ್ನು ಮರೆತು ಮೊಬೈಲನ್ನೆ ಗುರುವೆಂದು ಪರಿಗಣಿಸಿದ್ದೇವೆ. ಇಂತಹ ಸಂದರ್ಭದಲ್ಲಿ ಸಾತ್ವಿಕ ಸಹನಾಶೀಲ ಹೇಮರಡ್ಡಿಮಲ್ಲಮ್ಮನ ಆದರ್ಶಗಳು ನಮಗೆ ಅತ್ಯಗತ್ಯ ಎಂದರು.

ಶ್ರೀಶೈಲ ಹಾಗೂ ಉಜ್ಜಯಿನಿ ಶ್ರೀಜಗದ್ಗುರುಗಳು ದಿವ್ಯ ಸಾನಿಧ್ಯವಹಿಸಿದ್ದರು. ಹುಣಸಘಟ್ಟದ ಶ್ರೀಗುರುಮೂರ್ತಿ ಶಿವಾಚಾರ್ಯರು ಮತ್ತು ಬೀರೂರು ರಂಭಾಪುರಿಖಾಸಾ ಶಾಸಾಮಠದ ಶ್ರೀರುದ್ರಮುನಿ ಶಿವಾಚಾರ್ಯರು ಸಮಾರಂಭದ ಸಮ್ಮುಖವಹಿಸಿದ್ದರು. ಘಟಕದ ಅಧ್ಯಕ್ಷ ಬಿ.ಕೆ. ವಸಂತಕುಮಾರ್ ಅಧ್ಯಕ್ಷತೆವಹಿಸಿದ್ದರು. ಪದಾಧಿಕಾರಿಗಳಾದ ರೇವಣಸಿದ್ದಪ್ಪ, ಮುರುಗೇಶ್, ತಿಪ್ಪೇಸ್ವಾಮಿ, ಬಿ.ಎಸ್.ಪ್ರಭು, ನಾಗಭೂಷಣ ಮತ್ತಿತರರು ವೇದಿಕೆಯಲ್ಲಿದ್ದರು.

# ಯುವಕರ ದೃಢ ನಿರ್ಧಾರ, ಕಠಿಣ ಪರಿಶ್ರಮ, ಸತತ ಪ್ರಯತ್ನ ರಾಷ್ಟ್ರದ ಅಭಿವೃದ್ಧಿಗೆ ಶಕ್ತಿ

**ದಾವಣಗೆರೆ :** ಭಾರತವು ಯೌವನದ ಶಕ್ತಿಯಿಂದ ಕೂಡಿದ ರಾಷ್ಟ್ರವಾಗಿದೆ. ಇಂದಿನ ವಿದ್ಯಾರ್ಥಿಗಳು ಕೇವಲ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಷ್ಟೇ ಅಲ್ಲ, ನಾಳೆಯ ನಾಯಕರಾಗಿದ್ದಾ–ರೆ. ಯುವಕರ ದೃಢ ನಿರ್ಧಾರ, ಕಠಿಣ ಪರಿಶ್ರಮ ಮತ್ತು ಸತತ ಪ್ರಯತ್ನಗಳನ್ನು ಸಮಾಜ ಮುಖಿ ಕಾರ್ಯಗಳಿಗೆ ಬಳಸಿ ರಾಷ್ಟ್ರದ ಅಭಿವೃದ್ಧಿಗೆ ಶಕ್ತಿಯಾಗಬೇಕು ಎಂದು ಪ್ರಾಧ್ಯಾಪಕ ಡಾ. ವೆಂಕಟೇಶ್‌ಬಾಬು ಕರೆ ನೀಡಿದರು.

ನಗರದ ಚಾಣಕ್ಯ ಪ್ರಥಮ ದರ್ಜೆ ಕಾಲೇಜಿನ ಆಶ್ರಯದಲ್ಲಿ ಹೊಸಳ್ಳಿ ಗ್ರಾಮದಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ಶಿಬಿರದ ನಾಲ್ಕನೇ ದಿನದ ಕಾರ್ಯಕ್ರಮದಲ್ಲಿ ಬುದ್ಧ ಪೂರ್ಣಿಮೆಯ ಸಂದರ್ಭದಲ್ಲಿ ಉಪಸ್ಥಿತರಿದ್ದು ಅವರು ಮಾತನಾಡುತ್ತಿದ್ದರು.

ಸ್ವಾಮಿ ವಿವೇಕಾನಂದ, ಭಗತ್ ಸಿಂಗ್, ಡಾ.




ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಜೀವನದ ಉದಾಹರಣೆಗಳನ್ನು ನೀಡಿ, ಯುವಕರಲ್ಲಿ ದೇಶಭಕ್ತಿ, ಶಿಸ್ತು ಮತ್ತು ನೈತಿಕ ಮೌಲ್ಯಗಳ ಅಗತ್ಯವನ್ನು ಒತ್ತಿ ಹೇಳಿದರು.

ಸಾಮಾಜಿಕ ಮಾಧ್ಯಮಗಳಲ್ಲಿ ಸಮಯ ವ್ಯರ್ಥ ಮಾಡುವ ಬದಲು, ಯುವಕರು ತಮ್ಮ ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಒತ್ತು ನೀಡಬೇಕು ಎಂದು ವೆಂಕಟೇಶ್‌ಬಾಬು ಸಲಹೆ ನೀಡಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಡಾ. ಮಂಜುನಾಥ್ ಜೆ.ಎಂ. ಅವರು ಬುದ್ಧ ಪೂರ್ಣಿಮೆಯ ಮಹತ್ವ ಮತ್ತು ಗೌತಮ ಬುದ್ಧರ ತತ್ವಗಳ ಕುರಿತು ವಿವರಿಸುತ್ತಾ, ಬುದ್ಧ ಪೂರ್ಣಿಮೆಯು ಶಾಂತಿ, ಸಹಿಷ್ಣುತೆ ಮತ್ತು ಜ್ಞಾನದ ಪ್ರತೀಕವಾಗಿದೆ. ಬುದ್ಧರ ಜನನ, ಬೋಧಿ ಮತ್ತು ಮಹಾಪರಿನಿರ್ವಾಣವು ಈ ದಿನದಂದೇ ಸಂಭವಿಸಿದೆ. ಅವರ ಅಷ್ಟಾಂಗಮಾರ್ಗ ಸಮ್ಯಕ್ ದೃಷ್ಟಿ, ಸಮ್ಯಕ್ ಸಂಕಲ್ಪ, ಸಮ್ಯಕ್ ವಾಚನ ಮುಂತಾದ ತತ್ವಗಳು ಮಾನವೀಯತೆಯ ಮಾರ್ಗದರ್ಶಿಗಳಾಗಿವೆ ಎಂದು ತಿಳಿಸಿದರು. ಯುವಕರು ಬುದ್ಧನ ತತ್ವಗಳನ್ನು ಅಳವಡಿಸಿಕೊಂಡು ವ್ಯಕ್ತಿತ್ವ ವಿಕಾಸ, ಶಾಂತಿಯುತ ಸಮಾಜ ನಿರ್ಮಾಣ ಮತ್ತು ಜ್ಞಾನಮಾರ್ಗದಲ್ಲಿ ಮುನ್ನಡೆಯಬೇಕೆಂದು ಸಲಹೆ ನೀಡಿದರು. ಚೈತನ್ಯ ಕಾಲೇಜಿನ ಉಪನ್ಯಾಸಕ ನಾಗರಾಜ್ ನಾಯಕ್ ಅವರು ಎನ್ನೆಸ್ಸೆಸ್‌ನ ಉದ್ದೇಶಗಳನ್ನು ವಿವರಿಸಿದರು. ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ, ನಾಯಕತ್ವ ಕೌಶಲ್ಯ ಮತ್ತು ಗ್ರಾಮೀಣ ಅಭಿವೃದ್ಧಿಯ ಜವಾಬ್ದಾರಿಯನ್ನು ಬೆಳೆಸುತ್ತದೆ. ಇದು ಪಠ್ಯೇತರ ಚಟುವಟಿಕೆಗಳ ಮೂಲಕ ವ್ಯಕ್ತಿತ್ವ ವಿಕಾಸಕ್ಕೆ ವೇದಿಕೆಯಾಗಿದೆ ಎಂದು ಒತ್ತಿ ಹೇಳಿದರು.

# ಸಾಧನೆಗೆ ಶ್ರಮ ತಾಳ್ಮೆ ಶಕ್ತಿ ಬೇಕು: ಡಾ. ನಾಗರಾಜ ಬೈರಿ

**ದಾವಣಗೆರೆ:** ಸಾಧನೆ ಮಾಡುವುದು ಅಷ್ಟು ಸುಲಭದ ಕೆಲಸವಲ್ಲ. ಸಾಧನೆ ಮಾಡಲು ಬಹಳಷ್ಟು ಶ್ರಮ, ತಾಳ್ಮೆ, ಶಕ್ತಿ ಬೇಕು. ಅಷ್ಟು ಸುಲಭವಾಗಿ ಗುರುತಿಸಿಕೊಳ್ಳುವುದು ಸಾಧ್ಯವಿಲ್ಲ ಎಂದು ಮೈಸೂರು ಜಿಲ್ಲೆ ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾಧ್ಯಕ್ಷ ಡಾ. ನಾಗರಾಜ ಬೈರಿ ಆಶಿಸಿದರು.

ನಗರದ ಗಡಿಯಾರ ಕಂಬದ ಬಳಿ ಇರುವ ಚನ್ನಗಿರಿ ವಿರೂಪಾಕ್ಷಪ್ಪ ಕಲ್ಯಾಣ ಮಂಟಪದಲ್ಲಿ ಭಾನುವಾರ ಬೆಂಗಳೂರಿನ ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನ, ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಸಹಯೋಗದಲ್ಲಿ 70ನೇ ವರ್ಷದ ಕನ್ನಡ ನಿತ್ಯೋತ್ಸವ ಪ್ರಯುಕ್ತ ನಡೆದ ಸರಸ್ವತಿ ಸಾಧಕ ಸಿರಿ ರಾಷ್ಟ್ರಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದೆ ನಮ್ಮ ಜನಸಂಖ್ಯೆ ಕಡಿಮೆ ಇದ್ದಾಗ ಸಾಧನೆ ನಮ್ಮ ಮುಂದೆ ಬರುತ್ತಿತ್ತು. ಈಗ ಬರುವುದು ಕಷ್ಟ. ಅಂತಹದರಲ್ಲಿ ನಿಮ್ಮ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವುದು




ಪುಣ್ಯದ ಕೆಲಸವಾಗಿದೆ. ಸರ್ಕಾರದವರು ಅಂತಹ ಸಾಧಕರನ್ನು ಗುರುತಿಸಿ ಮಾಡಬೇಕಾದ ಗೌರವವನ್ನು ಸಂಘ ಸಂಸ್ಥೆಗಳು ಮಾಡುತ್ತಿದ್ದು, ನಿಮ್ಮಗಳ ಸಾಧನೆ ಇನ್ನೊಬ್ಬರಿಗೆ ಸ್ಫೂರ್ತಿ ಆಗಬೇಕು. ನಿಮ್ಮ ಕೆಲಸಕ್ಕೆ ಮತ್ತಷ್ಟು ಜವಾಬ್ದಾರಿಗಳನ್ನು ತರಲಿ ಎಂದು ಹಾರೈಸಿದರು.

ಸಾಮಾನ್ಯವಾಗಿ ನಾವು ಸರ್ಕಾರಿ ಶಾಲೆಯಲ್ಲಿ ನೋಂದಣಿ ನೋಡಿದಾಗ ನೂರು ಮಕ್ಕಳು ದಾಖಲಾಗುವುದು ಹೆಚ್ಚು, ನಮ್ಮ ಮೈಸೂರು ಕಡೆಗೆ ಇದನ್ನು ನಾವು ನೋಡುತ್ತಿದ್ದೇವೆ. ಆದರೆ ಡಾ.ನಾಗೇಶ ಸಂಜೀವ ಕಿಣಿಯವರ ಸರ್ಕಾರಿ ಶಾಲೆಯಲ್ಲಿ ಒಂದು ಸಾವಿರಕ್ಕೂ ಹೆಚ್ಚು ಮಕ್ಕಳು ಶಿಕ್ಷಣ ಪಡೆಯುತ್ತಿದ್ದಾ–ರೆ. ಇದು ನಿಜಕ್ಕೂ ಆಶ್ಚರ್ಯಕರ ಸಂಗತಿ ಎಂದರು. ಅವರ ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನದ ನೇತೃತ್ವದಲ್ಲಿ ಈ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ನಡೆಯುತ್ತಿರುವುದು ಶ್ಲಾಘನೀಯ ಕಾರ್ಯ ಎಂದರು.

ಸಂಘ ಸಂಸ್ಥೆಗಳ ಸೇವಾ ಕಾರ್ಯಗಳನ್ನು ನಾವು ಭೂಕಂಪ, ಚಂಡಮಾರುತ, ಖಾಯಿಲೆಗಳು ಹರಡುವಂತಹ ಪ್ರಾಕೃತಿಕ ವಿಕೋಪ ಸಂದರ್ಭಗಳಲ್ಲಿ ನೋಡಬೇಕು. ಸಂಸಾರ, ಆಸ್ತಿಪಾಸ್ತಿಗಳು ಹಾಳಾಗುತ್ತವೆ. ಅಂತಹ ಸಂದರ್ಭದಲ್ಲಿ ಅವರಿಗೆ ಅವಶ್ಯಕವಾಗಿರುವಂತಹ ವಸ್ತುಗಳನ್ನು ನೀಡಲು ಮುಂದಾಗುತ್ತಾರೆ. ಅವರು ನಮಗೆ ಸಾಕು ಬೇಡ ವಾಪಾಸು ತೆಗೆದುಕೊಂಡು ಹೋಗಲು ಹೇಳುತ್ತಾರೆ. ಅಷ್ಟು ಸಂಘ ಸಂಸ್ಥೆಗಳು ಪರೋಪಕಾರಕ್ಕೆ ಮುಂದಾಗಿರುತ್ತವೆ.

ಸರ್ಕಾರದ ಜೊತೆಗೆ ಸಂಘ ಸಂಸ್ಥೆಗಳು ಇರುವುದರಿಂದ ನಮ್ಮ ಭಾರತ ಮುಂದುವರೆಯಲು ಸಾಧ್ಯವಾಗಿದೆ ಎಂದರು. ಮೈಸೂರಿನ ಸಾಮಾಜಿಕ ಸಾಧಕ ಡಾ. ಜಿ. ಗಂಗಾಧರಪ್ಪ ಮಾತನಾಡಿ, ಅಂದು ಇದ್ದ ಮಾನವೀಯ ಮೌಲ್ಯಗಳು ಇಂದಿನ ಪೀಳಿಗೆಯಲ್ಲಿ ಬರುವ ಮಾನವೀಯ ಮೌಲ್ಯಗಳು ಬಹುಪಾಲು ಕುಸಿಯುತ್ತಿವೆ. ಇಲ್ಲಿ ಬಂದಿರುವ ಸಾಧಕರು ಹೆಚ್ಚಾಗಿ ಶಿಕ್ಷಣ ಸಂಸ್ಥೆ ಸೇರಿದಂತೆ ಅನೇಕ ವಿಭಾಗಗಳಲ್ಲಿ ಸಮಾಜಮುಖಿ ಸೇವಾ ಕಾರ್ಯಗಳನ್ನು ಮಾಡಿ ಇಂದು ಸಾಧಕರಾಗಿ ಇಲ್ಲಿ ಗೌರವ ಸ್ವೀಕರಿಸುತ್ತಿದ್ದೀರಿ. ನಮ್ಮಿಂದ ಪ್ರತಿಫಲ ಪಡೆದವರು ಎಂದಿಗೂ ಮರೆಯುವುದಿಲ್ಲ. ಅವರೂ ಸಹಾ ಇಂತಹ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುತ್ತಾರೆ ಎಂದು ತಿಳಿಸಿದರು.

## ವಿದ್ಯುತ್ ನಿಲುಗಡೆ

**ಚಿಕ್ಕಮಗಳೂರು, ಮೇ 26:** ನಗರ ಉಪ ವಿಭಾಗದ ಘಟಕ–3 ಮತ್ತು ಗ್ರಾಮೀಣ ಉಪವಿಭಾಗದ ವ್ಯಾಪ್ತಿಯಲ್ಲಿ ಬರುವ 66/11 ಕೆ.ವಿ. ಚಿಕ್ಕಮಗಳೂರು ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ಕೆಂಪನಹಳ್ಳಿ ಫೀಡರ್ ಮತ್ತು ತ್ರಿವಿಕ್ ಫೀಡರ್ ಮಾರ್ಗಗಳಲ್ಲಿ ಮೇ 27 ಹಾಗೂ 29ರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಈ ಫೀಡರ್‌ಗಳ ಪ್ರದೇಶಗಳಾದ ಅಲ್ಲಂಪುರ, ರಾಮನಹಳ್ಳಿ, ಹಾಲೇನಹಳ್ಳಿ, ಕೆಂಪನಹಳ್ಳಿ, ಕರ್ಕಿಪೇಟೆ ಮತ್ತು ತ್ರಿವಿಕ್ ಫೀಡರ್‌ನ ಸುತ್ತಮುತ್ತಲಿನ ಪ್ರದೇಶಗಳಿಗೆ ವಿದ್ಯುತ್ ಸರಬರಾಜನ್ನು ನಿಲುಗಡೆಗೊಳಿಸಲಾಗುತ್ತದೆ. ಲೋಕೋಪಯೋಗಿ ಇಲಾಖೆಯಿಂದ ರಸ್ತೆ ಅಗಲೀಕರಣ ಸಂಬಂಧ ಮರಗಳ ತೆರವು ಮತ್ತು ಕಡಿತಲೆ ಮಾಡುವ ಕಾರ್ಯ ನಡೆಯಲಿದ್ದು, ಆ ಇಲಾಖೆಯ ಕೋರಿಕೆ ಮೇರೆಗೆ ವಿದ್ಯುತ್ ನಿಲುಗಡೆ ಮಾಡಲಾಗುತ್ತಿದ್ದು, ಗ್ರಾಹಕರು, ಸಾರ್ವಜನಿಕರು ಸಹಕರಿಸುವಂತೆ ನಗರ ಉಪ ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್‌ರವರು ಕೋರಿದ್ದಾರೆ.

# Bird Flu: ಮಾಂಸ, ಮೊಟ್ಟೆ ಚೆನ್ನಾಗಿ ಬೇಯಿಸಿ ತಿಂದರೆ ಸೋಂಕು ತಗುಲುವುದಿಲ್ಲ, ಜ್ವರದ ಲಕ್ಷಣ– ಮುಂಜಾಗ್ರತೆ ಬಗ್ಗೆ ಇಲ್ಲಿದೆ ಮಾಹಿತಿ.

**ಬೆಂಗಳೂರು:** ನೆರೆಯ ಆಂಧ್ರಪ್ರದೇಶ. ಮಹಾರಾಷ್ಟ್ರ ಮತ್ತು ಕರ್ನಾಟಕದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಕ್ಕಿ ಜ್ವರ (ಊ5ಓ1) ಪ್ರಕರಣಗಳು ಕಂಡುಬಂದಿರುವ ಹಿನ್ನೆಲೆಯಲ್ಲಿ ಎಲ್ಲೆಡೆ ಕೋಳಿ ಮಾಂಸ ಹಾಗೂ ಮೊಟ್ಟೆಯ ಸೇವನೆಯ ಬಗ್ಗೆ ಆತಂಕ ಶುರುವಾಗಿದೆ.

ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ. ಜಗದೀಶ ಅವರು ಮಂಗಳವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಸ್ಥಿತಿ ಅವಲೋಕನ ನಡೆಸಿದರು. ಈ ವೇಳೆ ಹಕ್ಕಿ ಜ್ವರ ಹರಡದಂತೆ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸೂಚನೆ ನೀಡಿದರು.

ಪಕ್ಷಿಗಳು ಅಥವಾ ಕೋಳಿಗಳ ಯಾವುದೇ ಅನುಮಾನಾಸ್ಪದ, ಅಸಹಜ ಅಥವಾ ಹಠಾತ್ ಸಾವು ಕಂಡುಬಂದರೆ, ಹತ್ತಿರದ ಪಶುವೈದ್ಯಕೀಯ ಇಲಾಖೆಗೆ ತಿಳಿಸಿ ಎಂದು ತಿಳಿಸಿದರು.

ಹಕ್ಕಿ ಜ್ವರ ಪತ್ತೆಯಾದ ಸ್ಥಳದಿಂದ 10 ಕಿ.ಮೀ ವ್ಯಾಪ್ತಿಯ ಸುತ್ತಲಿನ ನಿವಾಸಿಗಳು ಶೀತ, ಕೆಮ್ಮು, ಜ್ವರ, ತಲೆನೋವು, ಮೈ-ಕೈ ನೋವು, ಗಂಟಲು ನೋವು ಮತ್ತು ಇತರ ರೋಗಲಕ್ಷಣಗಳಿಂದ ಬಳಲುತ್ತಿದ್ದರೆ, ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬೇಕು. ಗ್ರಾಮ ಪಂಚಾಯಿತಿಗಳಲ್ಲಿ ಹಕ್ಕಿ ಜ್ವರದ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲು ಆರೋಗ್ಯ ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ಹೇಳಿದರು.

## ಏನಿದು ಹಕ್ಕಿ ಜ್ವರ?




ಹಕ್ಕಿಜ್ವರ ಸಾಂಕ್ರಾಮಿಕ ರೋಗವಾಗಿದ್ದು, ಮುನ್ನೆಚ್ಚರಿಕೆ ವಹಿಸಿದರೆ ಸೋಂಕನ್ನು ತಡೆಯಬಹುದಾಗಿದೆ. ಹೀಗಾಗಿ ಕಾಯಿಲೆಯ ಲಕ್ಷಣಗಳು ಕೋಳಿಗಳಲ್ಲಿ ಕಾಣಿಸಿಕೊಂಡ ಕೂಡಲೇ ಹತ್ತಿರದ ಮಾಹಿತಿ ಕೇಂದ್ರ ಅಥವಾ ಪಶು ವೈದ್ಯಕೀಯ ಸಂಸ್ಥೆಗೆ ಮಾಹಿತಿ ನೀಡಬೇಕು ಎಂದು ಆರೋಗ್ಯ ಇಲಾಖೆ ಸಾರ್ವಜನಿಕರಿಗೆ ಸೂಚಿಸಿದೆ.

## ಹಕ್ಕಿಜ್ವರದ ಲಕ್ಷಣಗಳೇನು?

ಹಕ್ಕಿಜ್ವರದ ಲಕ್ಷಣಗಳು ಸಾಮಾನ್ಯವಾಗಿ ಎಚ್1ಎನ್1 ಜ್ವರದ ಲಕ್ಷಣಗಳಂತೆಯೇ ಇರುತ್ತದೆ. ಜ್ವರ, ಕೆಮ್ಮು, ಶೀತ, ತಲೆನೋವು, ಗಂಟಲು ಕೆರೆತ, ನೆಗಡಿ, ಸ್ನಾಯುಗಳಲ್ಲಿ ನೋವು, ಆಯಾಸ ಕಾಣಿಸಿಕೊಳ್ಳುತ್ತದೆ. ಕೆಲವೊಮ್ಮೆ ವಾಂತಿ ಮತ್ತು ಭೇದಿಯೂ ಆಗಬಹುದು. ಉಸಿರಾಟದಲ್ಲಿ ತೊಂದರೆಯೂ ಉಂಟಾಗಬಹುದು.

## ಮುನ್ನೆಚ್ಚರಿಕಾ ಕ್ರಮಗಳೇನು?

ಹಕ್ಕಿಜ್ವರ ಪೀಡಿತ ಕೋಳಿಗಳು, ಪಕ್ಷಿಗಳು ಹಾಗೂ ಬಾತುಕೋಳಿಗಳ ಸಂಪರ್ಕಕ್ಕೆ ಬರದಂತೆ ಎಚ್ಚರ ವಹಿಸಬೇಕು.

ಹಕ್ಕಿಜ್ವರ ಪೀಡಿತ ಫಾರಂಗಳಿಗೆ ಭೇಟಿ ನೀಡಬಾರದು.

ಹಕ್ಕಿಜ್ವರ ಹರಡಿರುವ ಫಾರಂನ ಸಂಪರ್ಕಕ್ಕೆ ಬಂದಲ್ಲಿ ತಕ್ಷಣ ಕೈಕಾಲು, ಮುಖ ತೊಳೆದುಕೊಂಡು ಬಟ್ಟೆ ಬದಲಾಯಿಸಿಕೊಳ್ಳಬೇಕು. ಕನಿಷ್ಠ 15 ಸೆಕೆಂಡುಗಳ ಕಾಲವಾದರೂ ಸೋಪ್ ಮತ್ತು ನೀರಿನಿಂದ ಕೈಗಳನ್ನು ತೊಳೆಯಿರಿ,

ಒಂದು ವೇಳೆ ಜ್ವರದ ಲಕ್ಷಣ ಕಾಣಿಸಿದಲ್ಲಿ ತಕ್ಷಣ ವೈದ್ಯರನ್ನು ಕಾಣಬೇಕು.

ಸೋಂಕಿತ ಸ್ಥಳದಲ್ಲಿ ಯಾವುದೇ ವಸ್ತು ಮುಟ್ಟಿದರೂ ಕೈಯನ್ನು ಸ್ವಚ್ಛಗೊಳಿಸಬೇಕು.

ಹಕ್ಕಿಜ್ವರ ಪ್ರಕರಣಗಳು ವರದಿಯಾಗಿರುವ ಪ್ರದೇಶದ 3ರಿಂದ 10 ಕಿ.ಮೀ ವ್ಯಾಪ್ತಿಯ ಪ್ರದೇಶಗಳಲ್ಲಿ ಜ್ವರ, ಶೀತ ನೆಗಡಿಯ ರೋಗ ಲಕ್ಷಣ ಇರುವ ಬಗ್ಗೆ ವಾರಕ್ಕೊಮ್ಮೆ ಸಮೀಕ್ಷೆ ಮಾಡಬೇಕು ಮತ್ತು ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು.

ಕೋಳಿ ಫಾರಂಗಳಿಂದ ಕೋಳಿಗಳನ್ನು ಸಾಗಣೆ ಮಾಡುವ ವಾಹನಗಳನ್ನು ಸೋಂಕು ನಿವಾರಕ ಸಿಂಪಡಿಸಿ ಸ್ವಚ್ಛಗೊಳಿಸಬೇಕು.

ನಿಮ್ಮ ಸಾಕುಪ್ರಾಣಿಗಳಿಗೆ ಲಸಿಕೆ ಹಾಕಿಸಿ.

ಕೋಳಿ ಮತ್ತು ಜಾನುವಾರುಗಳಿರುವ ಸ್ಥಳದಲ್ಲಿ ಕೆಲಸ ಮಾಡುವಾಗ ಕೈಗವಸುಗಳು, ಮುಖವಾಡ ಮತ್ತು ಕನ್ನಡಕಗಳನ್ನು ಧರಿಸಿ,


ಆರೋಗ್ಯ ದುರ್ಬಲವಾಗಿರುವ ವ್ಯಕ್ತಿಗಳಿಗೆ ಲಸಿಕೆಗಳನ್ನು ಹಾಕಿಸಿ.

# ಪ್ರತಿ ಐವರು ಭಾರತೀಯರಲ್ಲಿ ಒಬ್ಬರು ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ: ಅಧ್ಯಯನ ಬಹಿರಂಗ

**ನವದೆಹಲಿ: ಭಾರತೀಯರು ಗುಪ್ತ ಆರೋಗ್ಯ ಸಮಸ್ಯೆಯ ಸಂಕಷ್ಟದಲ್ಲಿ ಸಿಲುಕಿಹಾಕಿಕೊಂಡಿದ್ದಾರೆಯೇ? ಇತ್ತೀಚಿನ ಅಧ್ಯಯನವೊಂದರ ಪ್ರಕಾರ, ಪ್ರತಿ ಐದು ಭಾರತೀಯರಲ್ಲಿ ಒಬ್ಬರು ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ ಎಂದು ತಿಳಿದುಬಂದಿದೆ. ಜನರ ಜೀವನಶೈಲಿ, ಆಹಾರ ಪದ್ಧತಿ ಮತ್ತು ನೀತಿ ನಿರೂಪಣೆಯಲ್ಲಿನ ನ್ಯೂನತೆಗಳಿಂದಾಗಿ ಆರೋಗ್ಯ ಸಮಸ್ಯೆಗಳು ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗಿ ಕಾಡುತ್ತಿವೆ ಎಂಬ ಆತಂಕಕಾರಿ ಅಂಕಿಅಂಶಗಳನ್ನು ಅಧ್ಯಯನವು ತೋರಿಸಿದೆ.**

**ಭಾರತೀಯ ಅಂತಾರಾಷ್ಟ್ರೀಯ ಆರ್ಥಿಕ ಸಂಬಂಧಗಳ ಸಂಶೋಧನಾ ಮಂಡಳಿ (ಖಅಖಖಇಖ) ಮತ್ತು ಒಗಿಐಎಂ ಫೌಂಡೇಶನ್ ನಡೆಸಿದ ಸಂಶೋಧನೆ ಪ್ರಕಾರ, ದೇಶದ ನೀತಿ ನಿರೂಪಕರು, ಆರೋಗ್ಯ ವೃತ್ತಿಪರರು ಮತ್ತು ಶಿಕ್ಷಣ ತಜ್ಞರು ಸೇರಿದಂತೆ 300 ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಈ ವಿಷಯ ಬಹಿರಂಗವಾಗಿದೆ.**

ಭಾರತ ದೇಶದ ಪೂರ್ವ ಪ್ರದೇಶದಲ್ಲಿ ವಿಟಮಿನ್ ಡಿ ಕೊರತೆಯು ಹೆಚ್ಚಾಗಿದೆ. ಹದಿಹರೆಯದವರು, ಶಿಶುಗಳು, ವೃದ್ಧರು ಮತ್ತು ಎಲ್ಲಾ ವಯೋಮಾನದ ಮಹಿಳೆಯರು ವಿಟಮಿನ್ ಡಿ ಕೊರತೆಯಿಂದ ಹೆಚ್ಚು ಬಳಲುತ್ತಿದ್ದಾರೆ. ನಗರ ಪ್ರದೇಶದ ಜನರ ಜೀವನಶೈಲಿ ಮತ್ತು ಸೂರ್ಯನ ಬೆಳಕಿಗೆ ಸೀಮಿತ ಒಡ್ಡಿಕೊಳ್ಳುವಿಕೆಯಿಂದಾಗಿ, ಗ್ರಾಮೀಣ




ಪ್ರದೇಶದವರಿಗಿಂತ ಕಾಯಿಲೆಗಳಿಗೆ ಹೆಚ್ಚಾಗಿ ಒಳಗಾಗುತ್ತಿದ್ದಾರೆ.

ವಿಟಮಿನ್ ಡಿ ಕೊರತೆಯು ರಿಕೆಟ್ಸ್ ಮತ್ತು ಆಸ್ಟಿಯೋಮಲೇಶಿಯಾದಂತಹ ಅಸ್ಥಿಪಂಜರದ ಅಸ್ವಸ್ಥತೆಗಳನ್ನು ಮೀರಿ ಬೆಳೆಯುತ್ತದೆ ಎಂದು ತಜ್ಞರು ಎಚ್ಚರಿಸಿದ್ದಾರೆ. ಇದು ಸ್ನಾಯು

ದೌರ್ಬಲ್ಯ, ಖಿನ್ನತೆ, ಹೃದಯ ಸಂಬಂಧಿ ಕಾಯಿಲೆಗಳು, ಟೈಪ್ 2 ಮಧುಮೇಹ ಮತ್ತು ಕೆಲವು ಕ್ಯಾನ್ಸರ್ಗೆ ಕಾರಣವಾಗುತ್ತದೆ.

ವಿಟಮಿನ್ ಡಿ ಕೊರತೆಯು ಲಕ್ಷಾಂತರ ಜನರನ್ನು ಬಾಧಿಸುವ ಮೌನ ಸಾಂಕ್ರಾಮಿಕ ರೋಗವಾಗಿದೆ, ಆದರೆ ಹೆಚ್ಚಾಗಿ ಜನರು ಇದನ್ನು ಕಡೆಗಣಿಸುತ್ತಾರೆ. ಇದರ ಪರಿಣಾಮಗಳು ದುರ್ಬಲ ಮೂಳೆಗಳನ್ನು ಮೀರಿ ವಿಸ್ತರಿಸುತ್ತವೆ. ಆರೋಗ್ಯ ವ್ಯವಸ್ಥೆಯನ್ನು ಒತ್ತಡಕ್ಕೆ ಒಳಪಡಿಸುತ್ತದೆ.

ನಮ್ಮ ರಾಷ್ಟ್ರೀಯ ಆರೋಗ್ಯ ಗುರಿಗಳನ್ನು ದುರ್ಬಲಗೊಳಿಸುತ್ತದೆ ಎಂದು ಆಕಾಶ್ ಹೆಲ್ತ್‌ಕೇರ್ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಅಧ್ಯಯನದ ಸಹ-ಲೇಖಕ ಡಾ. ಆಶಿಶ್ ಚೌಧರಿ ಹೇಳುತ್ತಾರೆ.

ಬಿಕ್ಕಟ್ಟನ್ನು ಪರಿಹರಿಸಲು ಹಲವಾರು ವ್ಯವಸ್ಥಿತ ಅಡೆತಡೆಗಳನ್ನು ವರದಿಯು ಗುರುತಿಸುತ್ತದೆ. ಆರೋಗ್ಯ ಕೇಂದ್ರಗಳು, ಆಸ್ಪತ್ರೆಗಳಲ್ಲಿ ಹೆಚ್ಚಿನ ಪರೀಕ್ಷಾ ವೆಚ್ಚಗಳು ಮತ್ತು ಆರೋಗ್ಯ ಪೂರಕಗಳ ಮೇಲಿನ ಶೇಕಡಾ 18ರಷ್ಟು ಜಿಎಸ್ಟಿಯು ರೋಗನಿರ್ಣಯ ಮತ್ತು ಚಿಕಿತ್ಸೆಯನ್ನು ಅನೇಕರಿಗೆ ಭರಿಸಲಾಗದಂತೆ ಮಾಡುತ್ತದೆ.

# ದೃಷ್ಟಿಯನ್ನೇ ಕಸಿದುಕೊಳ್ಳುವ ಡೇಂಜರ್ ಗ್ಲುಕೋಮಾ

ಕಂಪ್ಯೂಟರ್ ವೀಕ್ಷಿಸುವುದರಿಂದ ಕಣ್ಣಿನ ಸಮಸ್ಯೆ ಸಾಮಾನ್ಯವಾಗಿದೆ. ಲ್ಯಾಪ್ ಟಾಪ್/ ಕಂಪ್ಯೂಟರ್ ಮೂಲಕ ಕೆಲಸ ಮಾಡುವುದು ಅನಿವಾರ್ಯವಾದ ಕಾರಣ ಕಣ್ಣಿನ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದು ಅಗತ್ಯವಾಗಿದೆ.

ವಯಸ್ಸಾದಂತೆ ಕಣ್ಣಿನ ಸಮಸ್ಯೆಗಳು ಹೆಚ್ಚಾಗುತ್ತಿರುತ್ತದೆ. ಅಂತಹ ಸಮಸ್ಯೆಗಳಲ್ಲಿ ಗ್ಲುಕೋಮಾ ಕೂಡ ಒಂದು. ಆರಂಭದಲ್ಲಿ ಗ್ಲುಕೋಮಾ ಯಾವುದೇ ತರಹದ ರೋಗ ಲಕ್ಷಣಗಳನ್ನು ತೋರುವುದಿಲ್ಲ. ಸದ್ದಿಲ್ಲದೆ ತನ್ನ ಪಾಡಿಗೆ ತಾನು ಬೆಳವಣಿಗೆ ಆಗುತ್ತಿರುತ್ತದೆ. ವಯಸ್ಸಾಗುತ್ತಾ ಹೋದಂತೆ ಕಣ್ಣಿನೊಳಗಿನ ಹೆಚ್ಚಿದ ಒತ್ತಡವು ಆಪ್ಟಿಕ್ ನರದ ಅಂಗಾಂಶಕ್ಕೆ ಹಾನಿ ಮಾಡುತ್ತದೆ. ಇದರಿಂದ ದೃಷ್ಟಿ ದುರ್ಬಲವಾಗುತ್ತದೆ. ಹಾಗೆಯೇ ಕುರುಡುತನ ಉಂಟು ಮಾಡುತ್ತದೆ. ಇದರಿಂದ ದೂರ ಇರಬೇಕಾದರೆ ಆಗಾಗ ಕಣ್ಣುಗಳನ್ನು ಪರೀಕ್ಷೆ ಮಾಡಿಸಿಕೊಳ್ಳುವುದು ಇದಕ್ಕಿರುವ ಒಂದು ಉತ್ತಮ ಮಾರ್ಗ.ವೈದ್ಯರು ರೋಗ ನಿರ್ಣಯ ಮಾಡುವ ಮೂಲಕ ಕಣ್ಣುಗಳ ನರಮಂಡಲಗಳ ಮೇಲೆ ಇರುವ ಒತ್ತಡ ಮತ್ತು ಕಣ್ಣುಗಳ ದೃಷ್ಟಿಗೆ ಸಂಬಂಧಪಟ್ಟಂತೆ ಪರೀಕ್ಷೆಗಳನ್ನು ಮಾಡುತ್ತಾರೆ. ಇದರಿಂದ ಗಂಭೀರವಾದ ದೃಷ್ಟಿ ಸಮಸ್ಯೆ ಎದುರಾಗುವ ಮುನ್ನವೇ ಸಮಸ್ಯೆಯನ್ನು



ಸರಿಪಡಿಸುತ್ತಾರೆ. ಭಾರತದಲ್ಲಿ ಈ ಸಮಸ್ಯೆ 12 ಮಿಲಿಯನ್ ಜನರಲ್ಲಿ ಕಂಡುಬರುತ್ತಿದ್ದು, ಶೇ.90 ರಷ್ಟು ಗ್ಲುಕೋಮಾ ಸಮಸ್ಯೆಯು ಪತ್ತೆಯಾಗುವುದೇ ಇಲ್ಲ. ಇದರಿಂದಾಗಿ ಪ್ರತೀ ವರ್ಷ ಗ್ಲುಕೋಮಾದಿಂದ ದೃಷ್ಟಿ ಕಳೆದುಕೊಳ್ಳುವವರ ಸಂಖ್ಯೆಯು ಹೆಚ್ಚಾಗುತ್ತಲೇ ಇದೆ.

## ಏನಿದು ಗ್ಲುಕೋಮಾ ಕಾಯಿಲೆ?

ಗ್ಲುಕೋಮಾ ಎಂಬುವುದು ಒಂದು ರೀತಿಯ ಕಣ್ಣಿನ ಕಾಯಿಲೆಯಾಗಿದ್ದು, ಈ ಸ್ಥಿತಿಯಲ್ಲಿ ಕಣ್ಣಿನ ದೃಷ್ಟಿನರ ನಿಧಾನವಾಗಿ ಘಾಸಿಗೊಳ್ಳುತ್ತಾ ತನ್ನ ಕ್ಷಮತೆಯನ್ನು ಕಳೆದುಕೊಳ್ಳುತ್ತಾ ಬರುತ್ತದೆ. ಇದಕ್ಕೆ ಮುಖ್ಯ ಕಾರಣ ಕಣ್ಣಿನ ಒಳಭಾಗದ ಒತ್ತಡ.

# ಬೇಬಿ ಕಾರ್ನ್ ಫ್ರೈ

**ಬೇಕಾಗುವ ಪದಾರ್ಥಗಳು...**

ಬೇಬಿ ಕಾರ್ನ್– 1 ಬಟ್ಟಲು

ಕಡಲೆ ಹಿಟ್ಟು– 1 ಬಟ್ಟಲು

ಈರುಳ್ಳಿ– 1

ಬ್ರೆಡ್ ಪೌಡರ್– 1 ಬಟ್ಟಲು

ಅಕ್ಕಿ ಹಿಟ್ಟು– 1 ಚಮಚ

ಕ್ಯಾಪ್ಸಿಕಂ– 1

ಅಚ್ಚ ಖಾರದ ಪುಡಿ– 1 ಚಮಚ

ಕಾಳುಮೆಣಸಿನ ಪುಡಿ– ಅರ್ಧ ಚಮಚ

ಉಪ್ಪು–ರುಚಿಗೆ ತಕ್ಕಷ್ಟು

## ಮಾಡುವ ವಿಧಾನ...



ಒಂದು ಪಾತ್ರೆಯಲ್ಲಿ ಎಣ್ಣೆಯನ್ನು ಬಿಸಿ ಮಾಡಲು ಇಡಿ. ಮತ್ತೊಂದು ಪಾತ್ರೆಯಲ್ಲಿ ಕಡಲೆ ಹಿಟ್ಟು, ಕಾಳು ಮೆಣಸಿನ ಪುಡಿ, ಖಾರದ ಪುಡಿ, ಅಕ್ಕಿ ಹಿಟ್ಟು, ಉಪ್ಪು ಹಾಗೂ ಸ್ವಲ್ಪ ನೀರು ಹಾಕಿ ದಪ್ಪ ಮಿಶ್ರಣ ಮಾಡಿಕೊಳ್ಳಿ. ಒಲೆಯ ಮೇಲೆ ಬಾಣಲೆ ಇಟ್ಟು, ಎಣ್ಣೆ ಹಾಕಿ. ಬಿಸಿಯಾದ ಮೇಲೆ ಕತ್ತರಿಸಿದ ಕ್ಯಾಪ್ಸಿಕಂ ಹಾಗೂ ಕತ್ತರಿಸಿದ ಈರುಳ್ಳಿಯನ್ನು ಎಣ್ಣೆಗೆ ಹಾಕಿ ಫ್ರೈ ಮಾಡಿ. ಬದಿಗಿಟ್ಟುಕೊಳ್ಳಿ.ನಂತರ ಬೇಬಿ ಕಾರ್ನ್ ಪೀಸ್ ಗಳನ್ನು ಕಡಲೆ ಹಿಟ್ಟಿನ ಮಿಶ್ರಣದಲ್ಲಿ ಅದ್ದಿ. ನಂತರ ಬ್ರೆಡ್ ಪೌಡರ್ ನಲ್ಲಿ ಹೊರಳಿಸಿ ಎಣ್ಣೆಯಲ್ಲಿ ಬಿಡಿ. ಬೇಬಿ ಕಾರ್ನ್ ಗೋಲ್ಡನ್ ಬಣ್ಣಕ್ಕೆ ಬರ್ತಿದ್ದಂತೆ ತೆಗೆದು, ಕರಿದ ಈರುಳ್ಳಿ, ಕ್ಯಾಪ್ಸಿಕಂ ಮೇಲೆ ಉದುರಿಸಿದರೆ ರುಚಿಕರಾದ ಬೇಬಿ ಕಾರ್ನ್ ಫ್ರೈ ಸವಿಯಲು ಸಿದ್ಧ.

# ಬಾದಾಮಿ ತಿನ್ನುವುದರಿಂದ ಚರ್ಮ, ಕೂದಲು ಮತ್ತು ಆರೋಗ್ಯಕ್ಕಗುವ ಪ್ರಯೋಜನ?

ಇದರಲ್ಲಿರುವ ವಿಟಮಿನ್ ಇ, ಆಂಟಿಆಕ್ಸಿಡೆಂಟ್ಸ್, ಆರೋಗ್ಯಕರ ಕೊಬ್ಬು ನಮ್ಮ ಚರ್ಮವನ್ನು ಕಾಪಾಡುವಲ್ಲಿ ಸಹಾಯ ಮಾಡುತ್ತದೆ. ಬಾದಾಮಿ ಚರ್ಮವನ್ನು ತೇವಗೊಳಿಸಲು ಮತ್ತು ಹೈಡ್ರೇಟ್ ಮಾಡಲು ಸಹಾಯ ಮಾಡುತ್ತದೆ, ಕೊಲ್ಯಾಜಿನ್ ಉತ್ಪಾದನೆಯನ್ನು ಉತ್ತೇಜಿಸುತ್ತದೆ ಮತ್ತು ಆಕ್ಸಿಡೇಟಿವ್ ಹಾನಿಯಿಂದ ರಕ್ಷಿಸುತ್ತದೆ.

ಬಾದಾಮಿಯು ಕೊಬ್ಬಿನಾಮ್ಲಗಳಿಂದ ತುಂಬಿದ್ದು, ಇದು ಕೂದಲಿನ ಆರೋಗ್ಯ ಹಾಗೂ ಬಲ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಬಾದಾಮಿ ಎಣ್ಣೆಯನ್ನು ಕೂದಲಿಗೆ ಹಚ್ಚಿದರೆ, ಕೂದಲಿನ ಆರೋಗ್ಯ ಹೆಚ್ಚಾಗುವುದಲ್ಲದೆ, ಕೂದಲಿನ ಹೊಳಪು ಕೂಡ ಹೆಚ್ಚಾಗುತ್ತದೆ.

ಬಾದಾಮಿಯಲ್ಲಿ ಕಂಡುಬರುವ ಮೆಗ್ನೀಸಿಯಮ್ ಆರೋಗ್ಯಕರ ಕೂದಲನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ಮೆಗ್ನೀಸಿಯಮ್ ಕೊರತೆಯು ಸಾಮಾನ್ಯವಾಗಿ ಕೂದಲು ಉದುರುವಿಕೆಗೆ ಕಾರಣವಾಗುತ್ತದೆ. ಆದ್ದರಿಂದ ಬಾದಾಮಿ ಎಣ್ಣೆ ಅಥವಾ ಬೀಜಗಳನ್ನು ನಿಮ್ಮ ದಿನಚರಿಯಲ್ಲಿ ಸೇರಿಸಿಕೊಂಡರೆ, ಕೂದಲು ತೆಳುವಾಗುವುದನ್ನು ತಡೆಯಬಹುದಾಗಿದೆ.

ಬಾದಾಮಿ ಎಣ್ಣೆಯನ್ನು ನೇರವಾಗಿ ನೆತ್ತಿಗೆ ಹಚ್ಚುವ ಮೂಲಕ, ಕೂದಲಿನ ಬೇರುಗಳನ್ನು ಗಟ್ಟಿ ಮಾಡಬಹುದು. ಇದು ಆರೋಗ್ಯಕರ ಕೂದಲು ಪಡೆಯಲು ಹಾಗೂ ಕೂದಲು ಉದುರುವಿಕೆಯನ್ನು ಕಡಿಮೆ ಮಾಡುತ್ತದೆ.

ಬಾದಾಮಿಯು ಚರ್ಮವನ್ನು ಮೃದುಗೊಳಿಸುವ ಮತ್ತು ಆರೋಗ್ಯಕರವಾಗಿರುವಂತೆ ಮಾಡುವ ಸಾಮರ್ಥ್ಯವನ್ನು ಹೊಂದಿದೆ. ಅಟೊಪಿಕ್ ಎಸ್ಜಿಮಾದಂತಹ ಒಣ ಚರ್ಮದ ಸಮಸ್ಯೆಗೆ ಚಿಕಿತ್ಸೆ ನೀಡಲು ಬಾದಾಮಿ ಎಣ್ಣೆಯನ್ನು ಹೆಚ್ಚಾಗಿ ಶಿಫಾರಸು ಮಾಡಲಾಗುತ್ತದೆ. ಗರ್ಭಾವಸ್ಥೆಯಿಂದ ಉಂಟಾಗುವ ಗುರುತುಗಳನ್ನೂ ಕಡಿಮೆ ಮಾಡಲು ಇದು ಪರಿಣಾಮಕಾರಿಯಾಗಿದೆ.



ಬಾದಾಮಿಯಲ್ಲಿ ವಿಟಮಿನ್ ಇ ಮತ್ತು ಉತ್ಕರ್ಷಣ ನಿರೋಧಕಗಳಿವೆ, ಇದು ಆರೋಗ್ಯಕರ ಚರ್ಮವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತದೆ. ವಿಟಮಿನ್ ಇ ಚರ್ಮವನ್ನು ಆಕ್ಸಿಡೇಟಿವ್ ಒತ್ತಡದಿಂದ ರಕ್ಷಿಸಲು ಸಹಾಯ ಮಾಡುತ್ತದೆ, ಇದು ಅಕಾಲಿಕ ವಯಸ್ಸಾಗುವಿಕೆ ಮತ್ತು ಇತರ ಚರ್ಮದ ಸಮಸ್ಯೆಗಳಿಂದ ನಿಮ್ಮ ದೇಹವನ್ನು ದೂರವಿರಿಸುತ್ತದೆ. ಬಾದಾಮಿಯಲ್ಲಿರುವ ಆರೋಗ್ಯಕರ ಕೊಬ್ಬುಗಳು ಚರ್ಮದ ಆರೋಗ್ಯಕ್ಕೆ ಸಹಕಾರಿಯಾಗಿದೆ.

ಬಾದಾಮಿಯು ಮೊನೊಸಾಚುರೇಟೆಡ್ ಫ್ಯಾಟಿ ಆಸಿಡ್ (ಒಗಈಂ) ಗಳಿಂದ ತುಂಬಿದ್ದು, ಇದು ಇನ್ಸುಲಿನ್ ಸುಧಾರಿಸಲು ಮತ್ತು ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಪ್ರಯೋಜನಕಾರಿಯಾಗಿದೆ. ಬಾದಾಮಿಯಲ್ಲಿರುವ ಹೆಚ್ಚಿನ ಫೈಬರ್ ಮತ್ತು ಆಂಟಿಆಕ್ಸಿಡೆಂಟ್ ಅಂಶವು ಚರ್ಮದ ಕ್ಯಾನ್ಸರ್ ನಿಂದ ದೇಹವನ್ನು ರಕ್ಷಿಸಲು ಮತ್ತು ಹಾನಿಕಾರಕ ಪರಿಣಾಮಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ತೂಕವನ್ನು ನಿರ್ವಹಿಸಲು ಬಯಸುವವರಿಗೆ, ಬಾದಾಮಿ ಉತ್ತಮ ಆಯ್ಕೆಯಾಗಿದೆ. ಬಾದಾಮಿಯಲ್ಲಿರುವ ಪ್ರೋಟೀನ್, ಫೈಬರ್ ಮತ್ತು ಆರೋಗ್ಯಕರ ಕೊಬ್ಬಿನ ಸಂಯೋಜನೆಯು ಹೊಟ್ಟೆ ತುಂಬಿದ ಭಾವನೆಯನ್ನು ಉತ್ತೇಜಿಸುತ್ತದೆ ಮತ್ತು ಒಟ್ಟಾರೆ ಕ್ಯಾಲೊರಿ ಸೇವನೆಯನ್ನು ಕಡಿಮೆ ಮಾಡುತ್ತದೆ. ಬೆರಳೆಣಿಕೆಯಷ್ಟು ಬಾದಾಮಿಯನ್ನು ತಿನ್ನುವುದು ಹಸಿವನ್ನು ನಿಯಂತ್ರಿಸಲು ಮತ್ತು ಅತಿಯಾಗಿ ತಿನ್ನುವುದನ್ನು ತಡೆಯಲು ಸಹಾಯ ಮಾಡುತ್ತದೆ.

ಬಾದಾಮಿಯ ಗುಣಗಳಲ್ಲಿ ಅತ್ಯುತ್ತಮ ಪ್ರಯೋಜನವೆಂದರೆ ಮೆದುಳಿನ ಕ್ಷಮತೆ ಹೆಚ್ಚಿಸುವುದು. ಬಾದಾಮಿಯಲ್ಲಿರುವ ವಿಟಮಿನ್ ಇ ಮೆದುಳಿನ ತಾರ್ಕಿಕ, ಸ್ಮರಣಾ ಮತ್ತು ಚಿಂತನಾ ಸಾಮರ್ಥ್ಯಗಳನ್ನು ಹೆಚ್ಚಿಸುತ್ತದೆ ಹಾಗೂ ಮರೆಗುಳಿತನವನ್ನು ಇಲ್ಲವಾಗಿಸುತ್ತದೆ. ಮಕ್ಕಳಿಗೆ ಪರೀಕ್ಷಾ ಸಮಯದಲ್ಲಿ ಹೆಚ್ಚಿನ ಸ್ಮರಣ ಶಕ್ತಿಯ ಅಗತ್ಯವಿರುವ ಕಾರಣದಿಂದಲೇ ತಾಯಂದಿರುವ ಮಕ್ಕಳಿಗೆ ತಪ್ಪದೇ ಬಾದಾಮಿಯನ್ನು ತಿನ್ನಿಸುತ್ತಾರೆ.

ಬಾದಾಮಿಯನ್ನು ಒಣದಾಗಿದ್ದಾಗ ಸೇವಿಸುವುದಕ್ಕಿಂತ ನೆನೆಸಿಟ್ಟು ಸೇವಿಸಿದಾಗ ಜೀರ್ಣಿಸಿಕೊಳ್ಳುವುದು ಸುಲಭ. ನೆನೆಸಿಟ್ಟ ಬಾದಾಮಿ ಜೀರ್ಣಕ್ರಿಯೆಯನ್ನು ಉತ್ತೇಜಿಸುತ್ತದೆ. ಅಲ್ಲದೇ, ಪೋಷಕಾಂಶಗಳನ್ನು ಹೀರಿಕೊಳ್ಳಲು ಹೆಚ್ಚಿನ ಸಹಾಯ ಸಿಗುತ್ತದೆ. ಈ ಪೋಷಕಾಂಶಗಳು ಜೀರ್ಣಕ್ರಿಯೆಯನ್ನು ಉತ್ತೇಜಿಸುವ ಕಿಣ್ವಗಳ ಉತ್ಪಾದನೆಗೆ ಪ್ರಚೋದನೆ ನೀಡುತ್ತವೆ. ಪರಿಣಾಮವಾಗಿ ಜೀರ್ಣಕ್ರಿಯೆ ಸುಲಭ ಮತ್ತು ಪರಿಪೂರ್ಣವಾಗುತ್ತದೆ.

ಬಾದಾಮಿಯು ಒಮೆಗಾ–3 ಕೊಬ್ಬಿನಾಮ್ಲಗಳು ಮತ್ತು ಪಾಲಿಫಿನಾಲ್ ಉರಿಯೂತ ಕಡಿಮೆಗೊಳಿಸುವ ಸಾಮರ್ಥ್ಯ ಹೊಂದಿರುತ್ತದೆ. ನೆನೆಸಿದ ಬಾದಾಮಿ ತಿನ್ನುವುದರಿಂದ ಮುಖದ ಮೇಲೆ ಮೊಡವೆ, ಎಸ್ಜಿಮಾ, ಮತ್ತು ಸೋರಿಯಾಸಿಸ್ ನಂತಹ ಸಮಸ್ಯೆಗಳು ಸಹ ದೂರವಾಗುತ್ತದೆ. ಆರೋಗ್ಯಕರ ಕಾಂತಿಯುಕ್ತ ಚರ್ಮ ನಿಮ್ಮದಾಗುತ್ತದೆ.

ಒಂದು ದಿನಕ್ಕೆ ಸರಿಸುಮಾರು 23 ಬಾದಾಮಿಗಳನ್ನು ತಿನ್ನಬಹುದು ಎಂದು ತಜ್ಞರು ಶಿಫಾರಸು ಮಾಡುತ್ತಾರೆ. ಬಾದಾಮಿಯ ಬಹುತೇಕ ಎಲ್ಲಾ ಪೋಷಕಾಂಶಗಳು ಒಳಗಿನ ತಿರುಳಿನಲ್ಲಿದೆ ಹಾಗೂ ಸಿಪ್ಪೆಯಲ್ಲಿ ಅತ್ಯಲ್ಪ ಪ್ರಮಾಣದಲ್ಲಿವೆ. ಸಿಪ್ಪೆಯಲ್ಲಿ ಕರಗದ ನಾರು ಹೆಚ್ಚಿನ ಪ್ರಮಾಣದಲ್ಲಿದೆ. ಹಾಗಾಗಿ, ಸಿಪ್ಪೆ ಸಹಿತ ತಿನ್ನುವುದು ಉತ್ತಮವೇ ಆದರೂ ಕಡ್ಡಾಯವಲ್ಲ. ಸಿಪ್ಪೆ ನಿವಾರಿಸಿ ತಿನ್ನುವುದರಿಂದ ಹೆಚ್ಚಿನ ನಷ್ಟವೇನೂ ಇಲ್ಲದ ಕಾರಣ ಹಾಗೂ ಸಿಪ್ಪೆಯ ಮೂಲಕ ಸಿಗಬಹುದಾದ ಕರಗದ ನಾರಿನ ಅಂಶ ಬೇರೆ ಆಹಾರದ ಮೂಲಕವೂ ಸಿಗುವ ಸಾಧ್ಯತೆ ಹೆಚ್ಚಿರುವ ಕಾರಣ ಸಿಪ್ಪೆಯನ್ನು ನಿವಾರಿಸಿಯೂ ತಿನ್ನಬಹುದು ಎಂದು ತಜ್ಞರು ಹೇಳುತ್ತಾರೆ.

# ಒಂದು ಸಣ್ಣ ಅಭ್ಯಾಸ, ದೊಡ್ಡ ಪ್ರಯೋಜನ..!

ಸಂಜೆಯ ನಂತರ ದೇಹದಲ್ಲಿನ ಚಯಾಪಚಯ (Metabolism) ಕ್ರಿಯೆಯ ಪ್ರಮಾಣ ಕಡಿಮೆ ಇರುತ್ತದೆ. ತಿಂದ ಆಹಾರ ಸರಿಯಾಗಿ ಜೀರ್ಣವಾಗದಿದ್ದರೆ ಅದು ದೇಹದಲ್ಲಿ ಕೊಬ್ಬಾಗಿ ಬದಲಾಗುವ ಅಪಾಯವಿದೆ. ಇದರಿಂದ ತೂಕ ಹೆಚ್ಚಾಗುವುದು, ಅಜೀರ್ಣ ಮತ್ತು ಹೊಟ್ಟೆ ಉಬ್ಬರದಂತಹ ಸಮಸ್ಯೆಗಳಿಗೆ ದಾರಿ ಮಾಡಿಕೊಡುತ್ತದೆ. ಹಾಗಾಗಿ ನಾವು ರಾತ್ರಿಯ ಊಟವನ್ನು ಬೇಗ ಮಾಡಿದ್ರೆ, ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು.

ರಾತ್ರಿ ವಿಶ್ರಾಂತಿ ಬಯಸುತ್ತದೆ..

ರಾತ್ರಿ ವೇಳೆ ನಮ್ಮ ದೇಹವು ವಿಶ್ರಾಂತಿ ಬಯಸುತ್ತದೆ. ನಾವು ತಡವಾಗಿ ಊಟ ಮಾಡಿದಾಗ ದೇಹವು ವಿಶ್ರಾಂತಿಯ ಮೇಲೆ ಸಂಪೂರ್ಣವಾಗಿ ಗಮನಹರಿಸಲು ಸಾಧ್ಯವಾಗುವುದಿಲ್ಲ. ಆದರೆ ಮೊದಲೇ ಊಟ ಮಾಡುವುದರಿಂದ ದೇಹವು ಆರಾಮವಾಗಿ ವಿಶ್ರಾಂತಿ ಪಡೆಯಲು ಅನುವು ಮಾಡಿಕೊಡುತ್ತದೆ. ಮಾತ್ರವಲ್ಲ, ನಿದ್ರೆಯು ಕೂಡ ತುಂಬಾ ಚೆನ್ನಾಗಿ ಆಗುತ್ತದೆ. ಒಳ್ಳೆಯ ನಿದ್ರೆ ಮಾನಸಿಕ ಒತ್ತಡವನ್ನು ಕಡಿಮೆ ಮಾಡುತ್ತದೆ.



ಇದರಿಂದ ಆರೋಗ್ಯ ಸುಧಾರಿಸುತ್ತದೆ.

ದೇಹದಲ್ಲಿರುವ ಲೆಪ್ಟಿನ್ ಮತ್ತು ಗ್ರೆಲಿನ್ ಹಾರ್ಮೋನುಗಳು (leptin and obesity) ಆಹಾರ ಸೇವಿಸಿದ ನಂತರ ಹಸಿವು ಮತ್ತು ಹೊಟ್ಟೆ ತುಂಬುವಿಕೆಯ ಭಾವನೆ ನಿಯಂತ್ರಿಸುತ್ತವೆ.

ತಡವಾಗಿ ಊಟ ಮಾಡುವುದರಿಂದ ಈ ಹಾರ್ಮೋನುಗಳ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ. ಇದು ನಿದ್ರೆಗೆ ಅಗತ್ಯವಾದ ಮೆಲಟೋನಿನ್ (melatonin) ಎಂಬ ಹಾರ್ಮೋನ್ ಕಾರ್ಯನಿರ್ವಹಣೆಯನ್ನು ಅಡ್ಡಿಪಡಿಸುತ್ತದೆ. ಇದರಿಂದ ರಾತ್ರಿ ನಿದ್ರೆ ಬರದೆ ಪರದಾಡಬೇಕಾಗುತ್ತದೆ.

ಅಲ್ಲದೇ ರಾತ್ರಿ ವೇಳೆ ಹೆಚ್ಚಾಗಿ ಕಾರ್ಬೋಹೈಡ್ರೇಟ್ ಇರುವ ಪದಾರ್ಥ ಸೇವಿಸೋದ್ರಿಂದ ಇದು ರಕ್ತದಲ್ಲಿನ ಸಕ್ಕರೆ ಪ್ರಮಾಣವನ್ನು ಹೆಚ್ಚಿಸುತ್ತದೆ. ಟೈಪ್ 2 ಮಧುಮೇಹ ಬರುವ ಅಪಾಯ ಹೆಚ್ಚಿಸುತ್ತದೆ. ಹಾಗಿದ್ದೂ ನೀವು ನಿಮ್ಮ ಊಟ ಬೇಗನೆ ಮುಗಿಸಿದರೆ ಇಂಥ ಸಮಸ್ಯೆ ಕಡಿಮೆ ಪ್ರಮಾಣದಲ್ಲಿ ಇರುತ್ತದೆ.

## ಎಷ್ಟು ಗಂಟೆಗೆ ಊಟ ಮಾಡಬೇಕು..?


ಸಂಜೆ 7 ಗಂಟೆಯ ಮೊದಲು ಊಟ ಮುಗಿಸುವುದು ಉತ್ತಮ ಅಭ್ಯಾಸ. ಇದರಿಂದ ಬೆಳಗ್ಗೆ ಬೇಗನೆ ಎದ್ದು ಆರೋಗ್ಯಕರ ಉಪಹಾರ ಸೇವಿಸಲು ಸಹಾಯ ಆಗುತ್ತದೆ. ಈ ರೀತಿಯ ಅಭ್ಯಾಸ ದೇಹದ ಸದೃಢಕ್ಕೆ ಮತ್ತು ದಿನಚರಿಯ ಅಗತ್ಯ ನಿಯಮಗಳ ಅನುಸರಿಸಲು ಸಹಾಯ ಮಾಡ್ತದೆ.

# ಹೃದಯ ಅಸಹಜವಾಗಿ ಅಥವಾ ಅತಿಯಾಗಿ ಬಡಿದುಕೊಳ್ಳುತ್ತಿದೆಯೇ? ಯಾವಾಗ ವೈದ್ಯರನ್ನು ಸಂಪರ್ಕಿಸಬೇಕು

**ಹೃದಯದ ಬಡಿತವು ಮನುಷ್ಯನ ಆರೋಗ್ಯವನ್ನು ತಿಳಿಸುತ್ತದೆ. ವೈದ್ಯರ ಬಳಿ ಹೋದಾಗ ವೈದ್ಯರು ಸ್ಟೆತಸ್ಕೋಪ್‌ನಿಂದ ಮೊದಲು ಹೃದಯದ ಬಡಿತವನ್ನು ಪರೀಕ್ಷಿಸುತ್ತಾರೆ. ಹಾರ್ಟ್ ಬೀಟ್ ಹೃದಯ ಬಡಿತದ ಅಳತೆಯಾಗಿದೆ. ಹೃದಯ ಬಡಿತ ಅಥವಾ ಹೃದಯ ಬಡಿತದ ದರವು, ನಮ್ಮ ಹೃದಯವು ನಿಮಿಷಕ್ಕೆ ಎಷ್ಟು ಬಾರಿ ಬಡಿಯುತ್ತದೆ ಎಂಬುದನ್ನು ಸೂಚಿಸುತ್ತದೆ.**

**ಇದು ನಮ್ಮ ಹೃದಯದ ಆರೋಗ್ಯದ ನಿಯತಾಂಕ ಮಾತ್ರವಲ್ಲ, ನಮ್ಮ ದೇಹದ ಫಿಟ್ನೆಸ್ ಮತ್ತು ಒತ್ತಡದ ಮಟ್ಟವನ್ನು ಕೂಡ ಸೂಚಿಸುತ್ತದೆ. ಸಾಮಾನ್ಯ ಹೃದಯ ಬಡಿತ ನಿಮಿಷಕ್ಕೆ 60 ರಿಂದ 100 ಬಾರಿ ಬಡಿಯುತ್ತದೆ. ಒಂದು ವೇಳೆ ನಿಮ್ಮ ಹೃದಯದ ಬಡಿತವು ನಿಮಿಷಕ್ಕೆ 100 ಕ್ಕಿಂತ ಹೆಚ್ಚು ಅಥವಾ 60 ಕ್ಕಿಂತ ಕಡಿಮೆ ಇದ್ದರೆ ಅದು ಅಪಾಯದ ಸೂಚನೆಯಾಗಿರಬಹುದು.**

ಸಾಮಾನ್ಯ ಹೃದಯ ಬಡಿತ ಎಂದರೆ ನಿಮ್ಮ ಹೃದಯವು ರಕ್ತವನ್ನು ಸರಿಯಾಗಿ ಪಂಪ್ ಮಾಡುತ್ತಿದೆ ಎಂದರ್ಥ, ಆದರೆ ಅಪಾಯಕಾರಿ ಹೃದಯ ಬಡಿತವು ಗಂಭೀರ ಸಮಸ್ಯೆಯ ಸಂಕೇತವಾಗಿರಬಹುದು. ವಿಶ್ರಾಂತಿಯಲ್ಲಿರುವ ಹೃದಯ ಬಡಿತವನ್ನು ವಿಶ್ರಾಂತಿ ಹೃದಯ ಬಡಿತ ಎಂದು ಕರೆಯಲಾಗುತ್ತದೆ. ಸಕ್ರಿಯ ಸ್ಥಿತಿಯಲ್ಲಿರುವ ಹೃದಯ ಬಡಿತವನ್ನು ಸಕ್ರಿಯ ಹೃದಯ ಬಡಿತ ಎಂದು ಕರೆಯಲಾಗುತ್ತದೆ, ಎರಡೂ ವಿಭಿನ್ನ ಸಾಮಾನ್ಯ ಮತ್ತು ಅಪಾಯದ ವ್ಯಾಪ್ತಿಯನ್ನು ಹೊಂದಿವೆ. ಹೃದಯ ಬಡಿತವು ವಯಸ್ಸು, ಆರೋಗ್ಯ ಸ್ಥಿತಿ, ವ್ಯಾಯಾಮ, ಔಷಧಿಗಳು ಮತ್ತು ಒತ್ತಡದಂತಹ ಹಲವು ಅಂಶಗಳಿಂದ ಪ್ರಭಾವಿತವಾಗಿರುತ್ತದೆ.ಆರೋಗ್ಯಕರ



ಹೃದಯಕ್ಕೆ ಸಾಮಾನ್ಯ ಹೃದಯ ಬಡಿತದ ವ್ಯಾಪ್ತಿಯನ್ನು ಕಾಪಾಡಿಕೊಳ್ಳುವುದು ಮುಖ್ಯ, ಆದರೆ ಅಪಾಯಕಾರಿ ಹೃದಯ ಬಡಿತವನ್ನು ದೀರ್ಘಕಾಲದವರೆಗೆ ನಿರ್ಲಕ್ಷಿಸುವುದರಿಂದ ಹೃದ್ರೋಗ, ಪಾರ್ಶ್ವವಾಯು ಅಥವಾ ಇತರ ಹೃದಯ ಸಮಸ್ಯೆಗಳು ಎದುರಾಗುತ್ತವೆ. ಹೀಗಾಗಿ ಹೃದಯ ಬಡಿತವನ್ನು ಮೇಲ್ವಿಚಾರಣೆ ಮಾಡುವುದು ಮತ್ತು ಯಾವುದೇ ಅಸಹಜತೆ ಕಂಡುಬಂದರೆ ಸಮಯಕ್ಕೆ ಸರಿಯಾಗಿ ವೈದ್ಯರನ್ನು ಸಂಪರ್ಕಿಸುವುದು ಮುಖ್ಯವಾಗುತ್ತದೆ.

ಅಸಹಜ ಹೃದಯ ಬಡಿತವೆಂದರೇನು?

ಅಸಹಜ ಹೃದಯ ಬಡಿತವು ಅಪಾಯಕಾರಿ ಹೃದಯ ಬಡಿತದ ವರ್ಗಕ್ಕೆ ಸೇರುತ್ತದೆ. ಈ ಸಮಸ್ಯೆಯು ಹೃದಯಾಘಾತ ಅಥವಾ ಪಾರ್ಶ್ವವಾಯುವಿನ ಅಪಾಯವನ್ನು ಹೆಚ್ಚಿಸುವ ಸಾಧ್ಯತೆಗಳಿವೆ. ಅಸಹಜ ಹೃದಯ ಬಡಿತದಲ್ಲಿ ಎರಡು ವಿಧವಿದೆ. ಒಂದು ಅತಿ ವೇಗದ ಬಡಿತ (ಟಾಕಿಕಾರ್ಡಿಯಾ). ಮತ್ತೊಂದು ನಿಧಾನಗತಿಯ ಬಡಿತ ಅಥವಾ ಅನಿಯಮಿತ ಬಡಿತ (ಬ್ರಾಡಿಕಾರ್ಡಿಯಾ).

ಪ್ರತಿ ನಿಮಿಷಕ್ಕೆ 100ಕ್ಕೂ ಹೆಚ್ಚು ಬಡಿತಗಳಿದ್ದರೆ ಅದನ್ನು ಟಾಕಿಕಾರ್ಡಿಯಾ ಎನ್ನಲಾಗುತ್ತದೆ. ಗಂಟೆಗೆ 60ಕ್ಕಿಂತ ಕಡಿಮೆ ಬಡಿತಗಳಿದ್ದರೆ ಬ್ರಾಡಿಕಾರ್ಡಿಯಾ ಎನ್ನಲಾಗುತ್ತದೆ. ಈ ಎರಡೂ ಪರಿಸ್ಥಿತಿಯಲ್ಲಿ ಹೃದಯವು ಸಾಕಷ್ಟು ರಕ್ತವನ್ನು ಪಂಪ್ ಮಾಡಲು ಕಷ್ಟಪಡುತ್ತದೆ. ಅಕಾಲಿಕ ಹೃದಯ ಬಡಿತಗಳು ಕೆಲವೊಮ್ಮೆ ಹಾನಿಕಾರಕ ಎನಿಸದೇ ಇದ್ದರೂ ಹೃದಯ ಸೇರಿದಂತೆ ಇತರೆ ಅಂಗಾಂಗಗಳಿಗೆ ಆಮ್ಲಜನಕ ಪೂರೈಕೆಯಲ್ಲಿ ವ್ಯತ್ಯಯವನ್ನುಂಟು ಮಾಡುತ್ತದೆ. ಹೃದಯಕ್ಕೆ ಸಾಕಷ್ಟು ಆಮ್ಲಜನಕಯುಕ್ತ ರಕ್ತ ಪೂರೈಕೆಯಾಗದ ಸ್ಥಿತಿಯನ್ನು ಆಂಜಿನಾ ಎಂದು ಕರೆಯಲಾಗುತ್ತದೆ. ಇದರಿಂದ ಎದೆನೋವು ಅಥವಾ ಅಸ್ವಸ್ಥತೆ ಉಂಟಾಗುತ್ತದೆ. ಹೃದಯ ಸಮರ್ಪಕವಾಗಿ ಕೆಲಸ ಮಾಡಲು ಸಾಧ್ಯವಾಗುವುದಿಲ್ಲ. ಇದು ರೋಗ ಅಲ್ಲದೇ ಇರಬಹುದು. ಆದರೆ, ಅಪಧಮನಿಯಲ್ಲಿ ಮುಂದೆ ಉಂಟಾಗುವ ತೊಂದರೆಗಳ ಸೂಚನೆಯೂ ಆಗಿರಬಹುದು. ನಿಯಮಿತವಾಗಿ ಇಂತಹ ಸಮಸ್ಯೆ ಉಂಟಾಗುತ್ತಿದ್ದೆ ಹೃದಯದ ಸ್ನಾಯುಗಳಲ್ಲಿ ಘರ್ಷಣೆ ಉಂಟಾಗುವ ಸಾಧ್ಯತೆ ಹೆಚ್ಚು.

# ಆಯಸಿಡಿಟಿ, ಮಲಬದ್ಧತೆ, ಸಾಕಷ್ಟು ಆರೋಗ್ಯ ಪ್ರಯೋಜನಗಳನ್ನು ನೀಡುತ್ತೆ ಓಂಕಾಳು

ಓಂ ಕಾಳನ್ನು ಅಡುಗೆಗೆ ಸಾಮಾನ್ಯವಾಗಿ ಉಪಯೋಗಿಸುತ್ತಲೇ ಇರುತ್ತೇವೆ. ಆದ–ರೆ, ಈ ಓಂ ಕಾಳನ್ನು ಸೇವಿಸುವುದರಿಂದ ಹತ್ತು ಹಲವು ಆರೋಗ್ಯಕಾರಿ ಲಾಭಗಳಿದೆ. ಸಾಕಷ್ಟು ಮಂದಿ ಹೊಟ್ಟೆ, ಕರುಳು ಹಾಗೂ ಜೀರ್ಣಕ್ರಿಯೆಗೆ ಸಂಬಂಧಪಟ್ಟ ಅಂಗಾಂಗಗಳಲ್ಲಿ ಹುಣ್ಣುಗಳಿಂದ ಬಳಲುತ್ತಿರುತ್ತಾರೆ, ಈ ಹುಣ್ಣುಗಳಿಂದ ಬಹಳಷ್ಟು ತೊಂದರೆಯನ್ನು ಅನುಭವಿಸುತ್ತಿರುತ್ತಾರೆ, ಇದಕ್ಕಾಗಿ ಹಲವು ಔಷಧಗಳ ಮೊರೆ ಹೋಗಿರುತ್ತಾರೆ. ಆದ–ರೆ, ಓಂ ಕಾಳುಗಳು ಇಂತಹ ಹುಣ್ಣುಗಳನ್ನು



ವಾಸಿಮಾಡಲು ಪರಿಣಾಮಕಾರಿಯಾಗಿದೆ ಎಂದರೆ ನಿಮಗೆ ಆಶ್ಚರ್ಯವಾಗಬಹುದು.

ಓಂ ಕಾಳುಗಳು ಅಸಿಡಿಟಿ, ಗ್ಯಾಸ್ ಸಮಸ್ಯೆ, ಜೀರ್ಣಕ್ರಿಯೆಯ ವಿಳಂಬವಾಗುವ ತೊಂದರೆಗಳನ್ನು ಸರಿಪಡಿಸುತ್ತದೆ. ಜೀರ್ಣಕ್ರಿಯೆಯ ತೊಂದರೆಗಳನ್ನು ಸರಿಮಾಡಿಕೊಳ್ಳಲು ಅರ್ಧ ಚಮಚದಷ್ಟು ಓಂಕಾಳು ಗಳನ್ನು ಜಗಿದು ತಿನ್ನಬಹುದು ಅಥವಾ ನೀರಿನೊಂದಿಗೆ ಬೆರೆಸಿ ಕುಡಿಯಬಹುದು.

## ಎಸ್ಸೆಸ್ಸೆಲ್ಸಿ ಪರೀಕ್ಷೆ: ನಿಷೇಧಾಜ್ಞೆ ಜಾರಿ

**ಚಿಕ್ಕಮಗಳೂರು, ಮೇ 26:** ಇಂದಿನಿಂದ ಮೇ 31 ರವರೆಗೆ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆ –2 ನಡೆಯುತ್ತಿದ್ದು, ಪರೀಕ್ಷಾ ಪ್ರಕ್ರಿಯೆಯನ್ನು ಶಾಂತಿ ಮತ್ತು ಶಿಸ್ತುಪಾಲನೆಯೊಂದಿಗೆ ನಡೆಸುವ ದೃಷ್ಟಿಯಿಂದ ಪರೀಕ್ಷೆ ನಡೆಯುವ ದಿನಗಳಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ಆದೇಶ ಹೊರಡಿಸಿದ್ದಾರೆ.

ಪರೀಕ್ಷೆ ನಡೆಯುತ್ತಿರುವ ಕೇಂದ್ರಗಳು ಇಂತಿವೆ: ಬೀರೂರಿನ ಕೆ.ಎಲ್.ಕೆ. ಸರ್ಕಾರಿ ಪದವಿ ಪೂರ್ವ ಕಾಲೇಜು, ಕಡೂರಿನ ಸರ್ಕಾರಿ ಜೂನಿಯರ್ ಕಾಲೇಜು, ವೇದಾವತಿ ಬಾಲಕಿಯರ ಪ್ರೌಢಶಾಲೆ, ಕೊಪ್ಪದ ಕರ್ನಾಟಕ ಪಬ್ಲಿಕ್ ಸ್ಕೂಲ್, ಮೂಡಿಗೆರೆಯ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು, ನರಸಿಂಹರಾಜಪುರದ ಕರ್ನಾಟಕ ಪಬ್ಲಿಕ್ ಸ್ಕೂಲ್, ಶೃಂಗೇರಿಯ ಸರ್ಕಾರಿ ಜೂನಿಯರ್ ಕಾಲೇಜು, ತರೀಕೆರೆಯ ಬಾಲಕರ ಸರ್ಕಾರಿ ಜೂನಿಯರ್ ಕಾಲೇಜು, ಅಜ್ಜಂಪುರದ ಶೆಟ್ರು ಸಿದ್ದಪ್ಪ ಸರ್ಕಾರಿ ಪರದವಿ ಪೂರ್ವ ಕಾಲೇಜು, ನಗರದ ಬೇಲೂರು ರಸ್ತೆಯ ಸರ್ಕಾರಿ ಪದವಿ ಪೂರ್ವ ಕಾಲೇಜು, ಸೇಂಟ್ ಜೋಸೆಫರ ಕಾನ್ವೆಂಟ್‌ನ ಬಾಲಕಿಯರ ಪ್ರೌಢಶಾಲೆ ಹಾಗೂ ಬಸವನಹಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜು.

# ಕಂದಾಯ ಭೂಮಿ ಅರಣ್ಯ ಇಲಾಖೆಗೆ ವರ್ಗಾಯಿಸದಿರಲು ಒತ್ತಾಯ

**ಚಿಕ್ಕಮಗಳೂರು:** ಮೂಡಿಗೆರೆ ತಾಲ್ಲೂಕಿನ ಕಂದಾಯ ಭೂಮಿಯನ್ನು ಅರಣ್ಯ ಇಲಾಖೆಗೆ ವರ್ಗಾಯಿಸದಂತೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಮಾಜಿ ಶಾಸಕರು ಶುಕ್ರವಾರ ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ಅವರಿಗೆ ಮನವಿ ಸಲ್ಲಿಸಿದರು.

ಬಳಿಕ ಮಾತನಾಡಿದ ಮಾಜಿ ಶಾಸಕ ಎಂ.ಪಿ.ಕುಮಾರಸ್ವಾಮಿ ಮುಂದಿನ ಪೀಳಿಗೆಗೆ ಮೂಲಭೂತ ಸೌಲಭ್ಯವನ್ನು ಗಮನದಲ್ಲಿಟ್ಟುಕೊಂಡು ಕಂದಾಯ ಭೂಮಿಯನ್ನು ಅರಣ್ಯಕ್ಕೆ ಸೇರಿಸಬಾರದು. ಪ್ರಸ್ತುತ 4/1 ಆಗಿರುವ ಅನೇಕ ಗ್ರಾಮಗಳಲ್ಲಿ 4/1 ನೋಟಿಫಿಕೇಷನ್‌ನ್ನು ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.



ಇದೀಗ ಕಳಸ ತಾಲ್ಲೂಕಿನ ಎಸ್.ಕೆ.ಮೇಗಲ್, ಮಾವಿನಕೆರೆ, ಕಗ್ಗನಹಳ್ಳ, ಹೊರನಾಡು, ಬಾಳೂರು ಹೋಬಳಿಯ ಕಲ್ಮನೆ, ಹಾದಿಓಣಿ, ಕುವೆ, ತೆಲಗೂರು, ಆಲ್ದೂರು ಹೋಬಳಿಯ ಹಳಿಯೂರು, ಬನ್ನೂರು, ಆವ್ವಳ್ಳಿ, ಇಳೇಖಾನ್, ಬೆಳಗೋಡು, ವಸ್ತಾರೆ, ಬಾಚಿನಗಹಳ್ಳಿ, ಹಲಸುಮನೆ, ಕದ್ರಿಮಿದ್ರಿ ಗ್ರಾಮಗಳಲ್ಲಿ 4/1 ನೋಟಿಫಿಕೇಷನ್ ಪರಿವರ್ತನೆ ಮಾಡಲು ಅರಣ್ಯ ಇಲಾಖೆ ಸಿದ್ಧತೆ ಮಾಡಿಕೊಂಡಿದೆ ಎಂದರು.

ಈ ಹಿಂದೆ ಅನೇಕ ಕಂದಾಯ ಭೂಮಿಯನ್ನು ಅರಣ್ಯ ಭೂಮಿಯಾಗಿ ಪರಿವರ್ತನೆ ಮಾಡಲಾಗಿದೆ. ಅಂತ ಕಡೆಗಳಲ್ಲಿ ಕೂಡ ರೈತರು ಬೀದಿಪಾಲಾಗಿದ್ದಾರೆ. ಬಹುತೇಕ ಗ್ರಾಮದ ಭೂಮಿಗಳಲ್ಲಿ ಕೃಷಿಕರು, ನಿವೇಶನ ರಹಿತರು ವಾಸವಾಗಿದ್ದು ಜೊತೆಗೆ ಸಾವಿರಾರು ಮಂದಿ ನಿವೇಶನಕ್ಕಾಗಿ ಕಾದು ಕುಳಿತುಕೊಂಡಿದ್ದಾರೆ ಎಂದು ಹೇಳಿದರು.

ಇನ್ನೂ ಕೆಲವೆಡೆ ಸಾವಿರಾರು ಕುಟುಂಬಗಳು, ಬೆಳೆಗಾರರ ಕೂಲಿಲೈನ್‌ಗಳಲ್ಲಿ ನಿವೇಶನಕ್ಕಾಗಿ, ಸ್ವಂತ ಮನೆ ನಿರ್ಮಿಸಿಕೊಳ್ಳಲು ಕನಸು ಕಾಣಲಾಗುತ್ತಿದೆ. ಅಂಗನವಾಡಿ ಶಾಲೆ, ಆಟದ ಮೈದಾನ, ಸಮುದಾಯ ಭವನ, ಸ್ಮಶಾನಕ್ಕೆ ಜಾಗವಿಲ್ಲದೇ ಆಹಾಕಾರಪಡುವಂತಾಗಿದೆ ಎಂದರು.

ಆದ್ದರಿಂದ ಜಿಲ್ಲೆಯ ಯಾವುದೇ ಗ್ರಾಮದ ಕಂದಾಯ ಭೂಮಿಯನ್ನು ಅರಣ್ಯ ಎಂದು ಪರಿವರ್ತನೆ ಮಾಡಬೇಕಾದರೆ ಎಲ್ಲಾ ಮೂಲಭೂತ ಸೌಲಭ್ಯದ ಕೊರತೆಗಳನ್ನು ನೀಗಿಸಬೇಕಾಗಿದೆ ಮತ್ತು ಅರಣ್ಯಕ್ಕೆ ವರ್ಗಾಯಿಸಬೇಕಾದ ವೇಳೆಯಲ್ಲಿ ಮುಂದಿನ ಪೀಳಿಗೆಗೆಯನ್ನು ಗಮನದಲ್ಲಿಟ್ಟುಕೊಂಡು ನಿರ್ಧಾರವನ್ನು ಕೈ ಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎಸ್ಸಿಎಸ್ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯ ಹುಣಸೇಮಕ್ಕಿ ಲಕ್ಷ್ಮಣ್, ಮುಖಂಡರುಗಳಾದ ಹರೀಶ್ ಮಿತ್ರ, ಕಬ್ಬಿಕೆರೆ ಮೋಹನ್‌ಕುಮಾರ್, ಭಾರತಿ, ದಿವಾಕರ್ ಹಾಜರಿದ್ದರು.

# ಕೌಶಲ್ಯ ತರಬೇತಿ ಪಡೆದ ವಿದ್ಯಾರ್ಥಿಗಳು ವಿವಿಧ ಕಂಪನಿಗಳಿಗೆ ಆಯ್ಕೆ



**ದಾವಣಗೆರೆ:** ಎಸ್.ಎಸ್. ಕೇರ್ ಟ್ರಸ್ಟ್‌ವತಿಯಿಂದ ದಾವಣಗೆರೆ ವಿಶ್ವವಿದ್ಯಾನಿಲಯ ಮತ್ತು ಕ್ಯೂ–ಸ್ಪೈಡರ್ಸ್ ತರಬೇತಿ ಸಂಸ್ಥೆಗಳ ಸಹಯೋಗದಲ್ಲಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ನೇತೃತ್ವದಲ್ಲಿ ನಗರದ ಬಿಐಇಟಿ ಹಾಗೂ ಬಾಪೂಜಿ ಎಂಬಿಎ ಕಾಲೇಜಿನಲ್ಲಿ ಕೌಶಲ್ಯ – ಉದ್ಯೋಗಾಧಾರಿತ ತರಬೇತಿ ಕಾರ್ಯಕ್ರಮದ ವಿದ್ಯಾರ್ಥಿಗಳಿಗೆ ಸಂದರ್ಶನ ನಡೆಸಲಾಯಿತು.

ಸಂದರ್ಶನದಲ್ಲಿ ಹೆಚ್ ಡಿಬಿ ಫೈನಾನ್ಸಿಯಲ್ ಸರ್ವೀಸಸ್ ಕಂಪನಿಗೆ 92 ವಿದ್ಯಾರ್ಥಿಗಳು ಹಾಗೂ ಮುತ್ತೂಟ್ ಫೈನಾನ್ಸ್ ಕಂಪನಿಗೆ 89 ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ. ಅಂತಿಮ ಪದವಿ ಪರೀಕ್ಷೆಯ ನಂತರ ಜುಲೈ ತಿಂಗಳಲ್ಲಿ ದಾವಣಗೆರೆ, ಬೆಂಗಳೂರು, ಹುಬ್ಬಳ್ಳಿ, ಮೈಸೂರು ಮುಂತಾದ ಕಡೆ ಉದ್ಯೋಗ–ಕ್ಕೆ ಸೇರಲಿದ್ದಾರೆ.

ಆಯ್ಕೆಯಾದ ವಿದ್ಯಾರ್ಥಿಗಳಿಗೆ ಶಾಸಕ ಡಾ. ಶಾಮನೂರು ಶಿವಶಂಕರಪ್ಪ, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಹಾಗೂ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಡಾ. ಬಿ.ಡಿ. ಕುಂಬಾರ್ ಹಾಗೂ ಕ್ಯೂ ಸ್ಪೈಡರ್ಸ್ ಸಂಸ್ಥೆಯ ಸಿಇಓ ಗಿರೀಶ್ ರಾಮಣ್ಣ, ಸಿಂಡಿಕೇಟ್ ಸದಸ್ಯರು ಹಾಗೂ ಟೀಂ ಕೌಶಲ್ಯ ತಂಡ ಶುಭ ಕೋರಿದ್ದಾರೆ.

## ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ–ಅವಧಿ ವಿಸ್ತರಣೆ

**ಚಿಕ್ಕಮಗಳೂರು, ಮೇ 26:** ಸರ್ಕಾರದ ಆದೇಶ ಕಳೆದ ವರ್ಷದ ನವೆಂಬರ್ 12 ರಂದು ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ವಿವಿಧ ಉಪ ಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು (ಎಂಪೆರಿಕಲ್ ಡಾಟಾ) ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬಗ್ಗೆ ಸೂಕ್ತ ಶಿಫಾರಸ್ಸಿನೊಂದಿಗೆ ವರದಿ ಸಲ್ಲಿಸಲು ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ.ಹೆಚ್.ಎನ್.ನಾಗಮೋಹನ್‌ದಾಸ್ ಇವರ ಅಧ್ಯಕ್ಷತೆಯಲ್ಲಿ ಈಗಾಗಲೇ ಏಕ ಸದಸ್ಯ ಆಯೋಗವನ್ನು ರಚಿಸಲಾಗಿದೆ.

ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು (ಎಂಪೆರಿಕಲ್ ಡಾಟಾ) ಸಂಗ್ರಹಿಸಲು ಹೊಸದಾದ ಸಮೀಕ್ಷೆಯನ್ನು ನಡೆಸಲು ಕಳೆದ ಮಾರ್ಚ್ 27ರ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾದ ಹಿನ್ನೆಲೆಯಲ್ಲಿ ಮೇ 5ರಿಂದ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವುದರ ಮೂಲಕ ರಾಜ್ಯಾದ್ಯಂತ ಈಗಾಗಲೇ ಸಮೀಕ್ಷೆ ನಡೆಯುತ್ತಿದೆ.

ಬಿಬಿಎಂಪಿ ವ್ಯಾಪ್ತಿಯ ವಲಯಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯವು ಇನ್ನೂ ಪ್ರಗತಿಯಾಗಬೇಕಾಗಿರುವುದರಿಂದ, ಮಳೆ, ಹವಾಮಾನ ವೈಪರೀತ್ಯ ಕಾರಣಗಳಿಂದಾಗಿ ಅನೇಕ ಪರಿಶಿಷ್ಟ ಜಾತಿ ಸಂಘಗಳಿಂದ ಮತ್ತು ಬೆಂಗಳೂರು ಮಹಾನಗರ ಪಾಲಿಕೆಯ ಕೋರಿಕೆ ಮೇರೆಗೆ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಲು ಅನುವಾಗುವಂತೆ ದಿನಾಂಕವನ್ನು ವಿಸ್ತರಿಸಲು ನಿರ್ಣಯಿಸಲಾಗಿದೆ. ಮನೆ–ಮನೆ ಭೇಟಿ ನೀಡುವ ಸಮೀಕ್ಷೆಯನ್ನು ಮೇ 26 ರಿಂದ 29 ರವರೆಗೆ ವಿಸ್ತರಿಸಲಾಗಿದೆ. ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) ಮೂರು ದಿನಗಳ ಕಾಲ ಅಂ–ದರೆ ಮೇ 30, 31 ಹಾಗೂ ಜೂನ್ 1 ರವರೆಗೆ ಮರು ನಿಗದಿಪಡಿಸಲಾಗಿದೆ ಮತ್ತು ಆನ್‌ಲೈನ್ ಮೂಲಕ ಸ್ವಯಂಘೋಷಣೆ– ಜೂನ್ 1 ರವರೆಗೆ ಮುಂದುವರೆಯಲಿದೆ ಎಂದು ಏಕ ಸದಸ್ಯ ಆಯೋಗದ ಕಾರ್ಯದರ್ಶಿಗಳು ತಿಳಿಸಿರುವುದಾಗಿ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತ್ತೊಬ್ಬ ನಕ್ಸಲ್ ನಾಯಕ ಲೋಹ್ರಾ ಹತ್ಯೆ



**ರಾಂಚಿ :** ನಕ್ಸಲ್ ವಿರುದ್ಧ ಭದ್ರತಾ ಪಡೆಗಳು ಜಾರ್ಖಂಡ್‌ನಲ್ಲಿ ನಡೆಸುತ್ತಿರುವ ಕಾರ್ಯಾಚರಣೆಯಲ್ಲಿ ಮತ್ತೊಬ್ಬ ಮೋಸ್ಟ್ ವಾಂಟೆಡ್ ನಕ್ಸಲ್ ನಾಯಕ ಪಪ್ಪು ಲೋಹ್ರಾನನ್ನು ಹತ್ಯೆ ಮಾಡಿವೆ.

ಲತೇಹಾರ್ ಜಿಲ್ಲೆಯಲ್ಲಿ ತಡ ರಾತ್ರಿ ಈ ಕಾರ್ಯಾಚರಣೆ ನಡೆದಿದ್ದು ನಕ್ಸಲರಿಂದ ಭಾರಿ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಪಪ್ಪು ಲೋಹರಾ ಬಗ್ಗೆ ಸುಳಿವು ಕೊಟ್ಟವರಿಗೆ ಜಾರ್ಖಂಡ್ ಪೊಲೀಸ್ 10 ಲಕ್ಷ ರೂಪಾಯಿ ಬಹುಮಾನ ಘೋಷಣೆ ಮಾಡಿದ್ದರು. ಲೋಹರಾ ಜೊತೆ ಆತನ ಸಹಚರ ಪ್ರಭಾತ್ ಗಂಜುನನ್ನೂ ಹತ್ಯೆ ಮಾಡಲಾಗಿದೆ ಎಂದು ಪೊಲೀಸರು ವಿವರಿಸಿದ್ದಾರೆ. ಪ್ರಭಾತ್ ಸುಳಿವು ನೀಡಿದವರಿಗೆ 5 ಲಕ್ಷ ಬಹುಮಾನ ಘೋಷಣೆ ಮಾಡಲಾಗಿತ್ತು. ಈ ಇಬ್ಬರೂ ಉನ್ನತ ನಕ್ಸಲ್ ನಾಯಕರು ಜನ ಮುಕ್ತಿ ಪರಿಷತ್ ಸಂಘಟನೆಯ ನಕ್ಸಲ್ ರೂವಾರಿಗಳಾಗಿದ್ದರು. ಜಾರ್ಖಂಡ್‌ನಲ್ಲಿ ಈ ಇಬ್ಬರೂ ನಕ್ಸಲ್ ಚಟುವಟಿಕೆಯ ಉನ್ನತ ಸ್ತರದ ನಾಯಕರಾಗಿದ್ದರು. ಇವರ ಮೇಲೆ ಹಲವು ಪ್ರಕರಣಗಳು ದಾಖಲಾಗಿದ್ದವು. ಮೋಸ್ಟ್ ವಾಂಟೆಡ್ ನಕ್ಸಲ್ ಪಟ್ಟಿಗೆ ಇವರು ಸೇರಿದ್ದರು. ಕೇಂದ್ರ ಸರ್ಕಾರ 2026ರ ಮಾರ್ಚ್‌ನೊಳಗೆ ದೇಶವನ್ನು ನಕ್ಸಲ್ ಮುಕ್ತ ಭಾರತವನ್ನಾಗಿ ಮಾಡಲಾಗುವುದು ಎಂದು ಶಪಥ ತೊಟ್ಟಿದೆ.

### ಬೆಸ್ಕಾಂ ಕಾರ್ಯ ಮತ್ತು ಪಾಲನಾ ಘಟಕ ಕಚೇರಿ ಉದ್ಘಾಟನೆ

# ಗುಣಮಟ್ಟದ ವಿದ್ಯುತ್ ಪೂರೈಕೆಗೆ ಕ್ರಮ –ಸಚಿವ ಡಿ.ಸುಧಾಕರ್

**ಚಿತ್ರದುರ್ಗ :** ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡುವುದು ಸರ್ಕಾರದ ಉದ್ದೇಶವಾಗಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಹೇಳಿದರು. ನಗರದ ತುರುವನೂರು ರಸ್ತೆಯ ಬೆಸ್ಕಾಂ ಹೊಸ ಕಾಲೋನಿಯಲ್ಲಿ ನೂತನವಾಗಿ ನಿರ್ಮಿಸಿರುವ ಕಾರ್ಯ ಮತ್ತು ಪಾಲನಾ ಘಟಕ 03 ಹಾಗೂ ಘಟಕ–04 ರ ಕಚೇರಿಯನ್ನು ಶನಿವಾರ ಉದ್ಘಾಟಿಸಿ ಅವರು ಮಾತನಾಡಿದರು.

2023ರಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅತಿ ಹೆಚ್ಚಿನ ಅನುದಾನವನ್ನು ಇಂಧನ ಇಲಾಖೆಗೆ ಒದಗಿಸಿದ್ದಾರೆ. ಗೃಹಜ್ಯೋತಿ ಜತೆಗೆ ಕೃಷಿ ಸಂಬಂಧ



ರೈತರಿಗೆ ಉಚಿತವಾಗಿ 19 ಸಾವಿರ ಕೋಟಿ ರೂ. ಸಬ್ಸಿಡಿಯನ್ನು ಸಹ ನೀಡಲಾಗುತ್ತಿದೆ ಎಂದು ತಿಳಿಸಿದ ಅವರು, ಪಾರದರ್ಶಕವಾಗಿ ಗುಣಮಟ್ಟದ ವಿದ್ಯುತ್‌ಚ್ಛಕ್ತಿಗಾಗಿ ಕಳಪೆ ಮಟ್ಟದ ವಿದ್ಯುತ್ ಪರಿವರ್ತಕಗಳ ಬದಲಾವಣೆ, ಉಪಕೇಂದ್ರಗಳ ಹೆಚ್ಚಳ, ಹೆಚ್‌ಟಿ ಲೈನ್ ಹಾಗೂ ಎಲ್‌ಟಿ ಲೈನ್ ಸುಧಾರಣೆ ಸೇರಿದಂತೆ ಅನೇಕ ಕಾರ್ಯಕ್ರಮಗಳು ಜಿಲ್ಲೆಯಲ್ಲಿ ನಡೆಯುತ್ತಿದ್ದು, ಇಂಧನ ಇಲಾಖೆ ಬಲಪಡಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಹೇಳಿದರು.

ಗೃಹಜ್ಯೋತಿ ಯೋಜನೆಯು ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿದ್ದು, ಈ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯಲ್ಲಿ 4,19,7722 ಗೃಹಪಯೋಗಿ ಗ್ರಾಹಕರಿದ್ದು, ಅದರಲ್ಲಿ ಒಟ್ಟು 3,75,160 ಗ್ರಾಹಕರು ಗೃಹಜ್ಯೋತಿ ಯೋಜನೆಯಡಿ ಫಲಾನುಭವಿಗಳಾಗಿದ್ದಾರೆ ಹಾಗೂ 3,75,160 ಗ್ರಾಹಕರ ವಿದ್ಯುತ್ ಬಳಕೆ ಸಹಾಯಧನ ಮೊತ್ತ ರೂ.1513.79 ಲಕ್ಷಗಳಷ್ಟು ಏಪ್ರಿಲ್–2025ರ ಮಾಹೆಯಲ್ಲಿ ಸರ್ಕಾರದಿಂದ ಬಿಡುಗಡೆಯಾಗಿದ್ದು, ಈ ಯೋಜನೆ ಜಾರಿಯಾದಾಗಿನಿಂದ ಇಲ್ಲಿಯವರೆಗೂ 3,75,160 ಗ್ರಾಹಕರ ಸಹಾಯಧನ ಮೊತ್ತ ಒಟ್ಟು ರೂ.29275.39 ಲಕ್ಷಗಳಷ್ಟು ಸರ್ಕಾರದಿಂದ ಬಿಡುಗಡೆಯಾಗಿದೆ ಎಂದು ಹೇಳಿದರು.

ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿದರು.

## ಶ್ರೀ ಸಿದ್ಧಲಿಂಗೇಶ್ವರಸ್ವಾಮಿ ಪಾಠಶಾಲೆ : ಜೂ.2 ರಿಂದ ಪ್ರವೇಶಾತಿ ಪ್ರಾರಂಭ

**ತುಮಕೂರು :** ಜಿಲ್ಲೆಯ ಕುಣಿಗಲ್ ತಾಲ್ಲೂಕು ಎಡೆ–ಯೂರು ಶ್ರೀ ಸಿದ್ಧಲಿಂಗೇಶ್ವರಸ್ವಾಮಿ ಕ್ಷೇತ್ರದ ವತಯಿಂದ ನಡೆಯುತ್ತಿರುವ ಶ್ರೀ ಸಿದ್ಧಲಿಂಗೇಶ್ವರಸ್ವಾಮಿ ಸಂಸ್ಕೃತ, ವೇದ, ಜ್ಯೋತಿಷ್ಯ ಮತ್ತು ವೀರಶೈವಾಗಮ ಪಾಠಶಾಲೆಗೆ 2025–26ನೇ ಸಾಲಿನ ಶೈಕ್ಷಣಿಕ ವರ್ಷದ ಪ್ರವೇಶಾತಿಯು ಜೂನ್ 2 ರಿಂದ ಪ್ರಾರಂಭವಾಗಲಿದೆ ಎಂದು ಕಾರ್ಯನಿರ್ವಾಹಣಾಧಿಕಾರಿ ಹೆಚ್.ಎಸ್. ಮಹೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಾಠಶಾಲೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಉಚಿತ ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಲಾಗುವುದು. ಪಾಠಶಾಲೆಯಲ್ಲಿ ಸಂಸ್ಕೃತ ಪ್ರಥಮ 1, 2, 3ನೇ ತರಗತಿ; ಸಂಸ್ಕೃತ ಕಾವ್ಯ 1, 2ನೇ ತರಗತಿ; ವೀರಶೈವ ವೇದ ಪ್ರಥಮ, ಪ್ರವೇಶ ಮೂಲ ತರಗತಿ; ವೀರಶೈವಾಗಮ ಪ್ರವರ, ಪ್ರವೀಣ ತರಗತಿ ಹಾಗೂ ಜ್ಯೋತಿಷ್ಯ ತರಗತಿಯನ್ನು ನಡೆಸಲಾಗುವುದು. ತರಗತಿಯಲ್ಲಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಬೋಧಿಸಲಾಗುವುದು. ಆಸಕ್ತರು ಪಾಠಶಾಲೆಯ ಮುಖ್ಯೋಪಾಧ್ಯಾಯ(ಮೊ.ಸಂ.9731110045)ರನ್ನು ಸಂಪರ್ಕಿಸಬಹುದಾಗಿದೆ.

### ಅಮೇರಿಕಾದ ಕ್ಯಾಲಿಫೋರ್ನಿಯಾದಲ್ಲಿ ಬಸವ ಜಯಂತಿ ಆಚರಣೆ

# ಅಮೆರಿಕಾ ಬಸವ ಭಕ್ತರ ಕಾಯಕ ಶ್ರದ್ಧೆ: ಶಿವನಕೆರೆ ಬಸವಲಿಂಗಪ್ಪ ಮೆಚ್ಚುಗೆ

**ಕ್ಯಾಲಿಫೋರ್ನಿಯ :** ಅಮೆರಿಕಾದ ಕ್ಯಾಲಿಫೋರ್ನಿಯಾದ ವೀರಶೈವ ಸಮಾಜ ಆಫ್ ನಾರ್ಥ್ ಅಮೆರಿಕಾದ ಲಿವರ್‌ಮೋರ್ ದೇವಸ್ಥಾನದಲ್ಲಿ ಬಸವ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ದಾವಣಗೆರೆಯ ಕರುಣ ಜೀವ ಕಲ್ಯಾಣ ಟ್ರಸ್ಟ್‌ನ ಕಾರ್ಯದರ್ಶಿ ಬಸವಲಿಂಗಪ್ಪ ಮಾತನಾಡಿ, ಅಮೆರಿಕಾದ ಬಸವ ಭಕ್ತರು ಬಸವಣ್ಣನ ಕಾಯಕ, ಶ್ರಮ, ಮತ್ತು ಶ್ರದ್ಧೆಯನ್ನು ರೂಢಿಸಿಕೊಂಡು, ಲಂಚ, ವಂಚನೆ, ಮೋಸಗಳಿಲ್ಲದ ಪ್ರಾಮಾಣಿಕ ಜೀವನವನ್ನು ನಡೆಸುತ್ತಿದ್ದಾರೆ. ತಮಗೆ ಪರಮ ಆರೋಗ್ಯ, ಶಾಂತಿ, ಮತ್ತು ಆನಂದ ದೊರಕಲಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

12ನೇ ಶತಮಾನದ ಶರಣರ ಕಾಯಕ, ದಾಸೋಹ, ಸಮಾನತೆ, ಮತ್ತು ಸ್ವಾತಂತ್ರ್ಯದ



ಗುಣಗಳನ್ನು ಎತ್ತಿ ಹಿಡಿದು, ನಡೆ–ನುಡಿಯನ್ನು ಒಂದಾಗಿಸಿ ನಿಜವಾದ ಕಲ್ಯಾಣ ರಾಜ್ಯವನ್ನು ನಿರ್ಮಿಸಿದ ಬಸವಣ್ಣನ ತತ್ವಗಳನ್ನು ಉಲ್ಲೇಖಿಸಿದರು. ಬಸವಣ್ಣ ಕಡು ಬಡವರು, ಮಹಿಳೆಯರ ಕಷ್ಟ–ಸುಖಗಳಿಗೆ ಸ್ಪಂದಿಸುತ್ತಿದ್ದರು. ಬಾಲ್ಯದಲ್ಲಿಯೇ ಮಹಿಳಾ ಸಮಾನತೆಗಾಗಿ ನಿಂತ ಉದಾಹರಣೆಯಾಗಿ, ಅಕ್ಕನಾಗಮ್ಮನಿಗೆ ಜನಿವಾರ ನಿರಾಕರಿಸಿದಾಗ, ಬಸವಣ್ಣ ಸ್ವತಃ ಜನಿವಾರವನ್ನು ತ್ಯಜಿಸಿ, ಕೂಡಲಸಂಗಮಕ್ಕೆ ತೆರಳಿದ ಘಟನೆಯನ್ನು ನೆನಪಿಸಿದರು.

ಮೂಕ ಪ್ರಾಣಿಗಳ ಬಗ್ಗೆಯೂ ಬಸವಣ್ಣನ ಅಪಾರ ಕರುಣೆಯನ್ನು ವಿವರಿಸಿದ ಬಸವಲಿಂಗಪ್ಪ, ಕಳ್ಳರು ಕದ್ದ ಹಸುಗಳ ಜೊತೆ ಕರುಗಳನ್ನೂ ಬಿಡುಗಡೆ ಮಾಡುವಂತೆ ಸೂಚಿಸಿದ ಘಟನೆಯನ್ನು ಉಲ್ಲೇಖಿಸಿದರು. ಇದರಿಂದ ಕಳ್ಳರ ಮನಪರಿವರ್ತನೆಯಾಗಿ ಶರಣರಾದರು. ಇಂತಹ ತತ್ವಗಳಿಂದ 1,96,000 ಜನ ಶರಣರಾದರೆ, 770 ಅಮರಗಣಂಗಳು ಶರಣ ತತ್ವವನ್ನು ವಿವಿಧ ರಾಜ್ಯಗಳಲ್ಲಿ ಪ್ರಚಾರ ಮಾಡಿದರು.

ಅಸಂಗ್ರಹದ ಬಗ್ಗೆ ಬಸವಣ್ಣನ ಧೃಡ ನಿಲುವನ್ನು ಉಲ್ಲೇಖಿಸಿದ ಶಿವನಕೆರೆ ಬಸವಲಿಂಗಪ್ಪ ಅವರು, ನಮಗೆ ಎಷ್ಟು ಬೇಕೋ ಅಷ್ಟು ಮಾತ್ರ ಇಟ್ಟುಕೊಳ್ಳಬೇಕು ಎಂಬ ತತ್ವವನ್ನು ವಿವರಿಸಿದರು.

ಕಳ್ಳರು ಒಡವೆ ಕದಿಯಲು ಬಂದಾಗ, ಬಸವಣ್ಣ ತಮ್ಮ ಪತ್ನಿಗೆ ಒಡವೆಗಳನ್ನು ಬಿಡಿಸಿ ಕೊಡಲು ಆದೇಶಿಸಿದ ಘಟನೆಯಿಂದ ಕಳ್ಳನ ಮನಪರಿವ ರ್ತನೆಯಾಯಿತು. ಇಂತಹ ಕಾರ್ಯಗಳಿಂದ ಬಸವಣ್ಣ ಶರಣ ಗಣವನ್ನು ಸೃಷ್ಟಿಸಿ, ಅರಿವು ಆಧಾರಿತ ಸಾಮೂಹಿಕ ಕಾರ್ಯಗಳನ್ನು ಕಲ್ಯಾಣದಲ್ಲಿ ಜಾರಿಗೆ ತಂದರು.

ನಡೆ–ನುಡಿಯ ಏಕತೆಯನ್ನು ಗಾಂಧೀಜಿ, ಮಾರ್ಟಿನ್ ಲೂಥರ್ ಕಿಂಗ್, ಲಾಲ್ ಬಹದ್ದೂರ್ ಶಾಸ್ತ್ರಿಯವರ ಉದಾಹರಣೆಗಳೊಂದಿಗೆ ಹೋಲಿಸಿದ ಬಸವಲಿಂಗಪ್ಪ, ಬಸವಣ್ಣನ ಪ್ರೀತಿ, ಸಮಾನತೆ, ಏಕತೆ, ಎಚ್ಚರ, ಮತ್ತು ವಿವೇಕದ ತತ್ವಗಳು ಇಂದಿನ 800 ಕೋಟಿ ಜನರಿಗೆ ಅಹಂಕಾರ, ದುರಾಸೆ, ದ್ವೇಷದಂತಹ ಮಹಾರೋಗಗಳಿಗೆ ಔಷಧವಾಗಿವೆ ಎಂದರು. ವಿಎಸ್‌ಎನ್‌ಎ ಆಧ್ಯಕ್ಷ ಪ್ರದೀಪ್ ಅಂಗಡಿ, ಅಭಿಷೇಕ್, ದೀಪಕ್, ಅಶ್ವಿನ್, ಅನಿಲ್ ಹಾಲಪ್ಪ, ಸದಾಶಿವ್, ಎಂ.ಸಿ. ಗೌಡ, ಮೂರ್ತಿ ಮುಂತಾದವರು ಕಾರ್ಯಕ್ರಮವನ್ನು ಆಯೋಜಿಸಿದ್ದರು.

# ಬಟ್ಟೆ ಅಂಗಡಿ ಮುಂದೆ ಬಟ್ಟೆ ಹೊಲಿಯುವವರ ಸಂಖ್ಯೆ ಕ್ಷೀಣಿಸುತ್ತಿದೆ : ಡಾ.ಎಚ್.ಕೆ.ಎಸ್. ಸ್ವಾಮಿ

**ಚಿತ್ರದುರ್ಗ:** ಹಿಂದಲ್ಲ ಹೊಸ ಬಟ್ಟೆಗಳನ್ನು ಕೊಂಡುಕೊಂಡು ಜನರು, ಬಟ್ಟೆ ಅಂಗಡಿಯಲ್ಲಿ, ಅಕ್ಕಪಕ್ಕ ಕುಳಿತಿರುವಂತ ದರ್ಜಿಗಳಿಗೆ ಅಲ್ಲೇ ಅಳತೆ ಕೊಟ್ಟು, ತಮಗೆ ಇಷ್ಟವಾದ ಬಟ್ಟೆಯನ್ನು ಹೊಲಿಸಿಕೊಂಡು, ಅವರ ಜೀವನಕ್ಕೂ ಆಧಾರವಾಗಿದ್ದಂತ ಪದ್ಧತಿ ಈಗ ಬದಲಾಗಿದೆ. ದೊಡ್ಡ ದೊಡ್ಡ ಗಾರ್ಮೆಂಟ್ಸ್ ಕಂಪನಿಗಳೇ ಅವುಗಳನ್ನ ಹೊಲಿದು, ಜನರಿಗೆ ತಲುಪಿಸುವಂತಹ ಏರ್ಪಾಡು ಆದಾಗಿನಿಂದ, ಅಂಗಡಿ ಪಕ್ಕ ಕುಳಿತು ಧರ್ಜಿ ಕೆಲಸ ಮಾಡುವವರಿಗೆ ಇಂದು ಕೆಲಸ ಇಲ್ಲದೆ, ಹಾಗೆ ನಿರುದ್ಯೋಗ ಸಮಸ್ಯೆ ಎದ್ದು ಕಾಣುತ್ತಿದೆ. ಹಳೆಯ ವ್ಯಕ್ತಿಗಳು, 60–70 ವರ್ಷದಿಂದ ಮಾಡಿದಂತಹ ಕೆಲಸಗಾರರು ಮಾತ್ರ ಇಂದು ಸಹ, ಬಟ್ಟೆ ಅಂಗಡಿಯ ಅಕ್ಕಪಕ್ಕ ಕುಳಿತು, ಬಟ್ಟೆ ಹೊಲಿಯುವುದನ್ನು, ಜೀವನೋಪಾಯಕ್ಕಾಗಿ ಇಟ್ಟುಕೊಂಡಿದ್ದಾರೆ. ಆದರೆ ಈ ವ್ಯವಸ್ಥೆ ಇನ್ನು ಮುಂದೆ ಕಾಣದಷ್ಟು ಕ್ಷೀಣಿಸುತ್ತಾ ಬರುತ್ತದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕಳವಳ ವ್ಯಕ್ತಪಡಿಸಿದರು.

ಸಿಂಗರ್ ಎಂಬ ವಿಜ್ಞಾನಿ ತನ್ನ ಹೆಂಡತಿ ರಾತ್ರಿ ಎಲ್ಲಾ ಕುಳಿತು ಬಟ್ಟೆ ಹೊಲಿಯುವುದನ್ನು ನೋಡಲಾರದೇ, ಕೈಯಿಂದ ಬಟ್ಟೆ ಹೊಲಿಯುವುದನ್ನು ನೋಡಲಾರದೆ, ಅವಳಿಗೆ ಅನುಕೂಲಕರವಾಗಲಿ ಎಂದು ಪ್ರೇಮದಿಂದ, ಪ್ರೀತಿಯಿಂದ ಕಂಡು ಹಿಡಿದ ಹೊಲಿಗೆ ಯಂತ್ರವನ್ನು ಗಾಂಧೀಜಿಯವರು ಸಹ ಮೆಚ್ಚುಗೆ ವ್ಯಕ್ತಪಡಿಸಿದ್ದರು, ಏಕೆಂದರೆ ಈ ಯಂತ್ರದ ಹಿಂದೆ ಯಾವುದೇ ದುರಾಸೆ ಇಲ್ಲ, ಮಹಿಳೆಯರ ಸಂಕಷ್ಟಗಳಿಗೆ ಪರಿಹಾರ ಒದಗಿಸಲು ಕಂಡುಹಿಡಿದಂತ ಯಂತ್ರವಾಗಿದೆ, ಜನ ಕೈಯಿಂದ ಬಟ್ಟೆ ಮಾಡಿಕೊಂಡು, ತಮ್ಮ ಕೈಯಿಂದಲೇ ಹೊಲಿದುಕೊಳ್ಳುವುದನ್ನು ರೂಢಿ ಮಾಡಿಕೊಳ್ಳಿ ಎಂದು, ಯಾವುದೇ ವಿದ್ಯುತ್ತಿನ ಸಂಪರ್ಕವಿಲ್ಲದೆ, ಕೇವಲ ಕೈ ಕಾಲುಗಳನ್ನ ಬಳಸಿ, ಈ ಯಂತ್ರಗಳನ್ನ ತುಳಿದು, ಬಟ್ಟೆ ಹೊಲಿದುಕೊಳ್ಳುವಂತಹ ಪದ್ಧತಿ ಇತ್ತು, ಆದರೆ ಇಂದು ನಾವು ಅ ವ್ಯವಸ್ಥೆಯನ್ನು ತಪ್ಪಿಸಿ, ಕೈ ಕಾಲು ಬಳಸುವುದನ್ನು ತಪ್ಪಿಸಿದ್ದೇವೆ. ತಾಂತ್ರಿಕ ತೆಯಲ್ಲಿ ಉತ್ಕೃಷ್ಟ ಸ್ಥಿತಿಗೆ ಹೋಗಿ, ನಿರುದ್ಯೋಗ ಸಮಸ್ಯೆಯನ್ನು ಸೃಷ್ಟಿ ಮಾಡಿಕೊಂಡಿದ್ದೇವೆ ಎಂದರು.

ಈಗಲೂ ಸಹ ಕೆಲವೊಂದಿಷ್ಟು ಜನ ಮನೆಯಲ್ಲಿ ಕೈಯಿಂದನೇ ಹೊಲಿಗೆ ಹಾಕಿ, ಸಣ್ಣ ಸಣ್ಣ ಬಟ್ಟೆಗಳನ್ನ, ಚೀಲಗಳನ್ನ, ಕೈ ಚೀಲಗಳನ್ನ ತಯಾರು ಮಾಡಿಕೊಂಡು, ಕವದಿಗಳನ್ನ ಹೊಲಿದುಕೊಂಡು, ಜೀವನ ನಿರ್ವಹಿಸುತ್ತಿದ್ದಾರೆ. ಎಷ್ಟೇ ತಾಂತ್ರಿಕ ಬದಲಾವಣೆ ಹೊಂದಿದ್ದರು ಸಹ ಸೂಜಿ ದಾರಕ್ಕೆ ಇನ್ನೂ ಸಹ ಬೆಲೆ ಇದ್ದು, ಯಾರು ಸಹ ಅವುಗಳನ್ನ ಇನ್ನೂ ಬಿಸಾಕಿಲ್ಲ, ಇನ್ನೂ ಭಾರತೀಯ ಜನ ಬದಲಾಗಿಲ್ಲ ಎಂಬುದಕ್ಕೆ ಇದು ಸಾಕ್ಷಿಯಾಗಿದೆ ಎಂದರು.

ಹಿಂದೆ ಹೆಣ್ಣು ಮಕ್ಕಳು ಎಸ್‌ಎಸ್‌ಎಲ್‌ಸಿ ಓದು ಮುಗಿಸುವುದರೊಳಗೆ ತಮಗೆ ಬೇಕಾದಂತ ಬಟ್ಟೆಗಳನ್ನ ಹೊಲಿದುಕೊಳ್ಳುವಂತೆ ಹೊಲಿಗೆ ತರಬೇತಿಯನ್ನ, ಟೈಪಿಂಗ್ ತರಬೇತಿಯನ್ನ ನೀಡಿ, ಅವರನ್ನು ಸ್ವಂತ ಕಾಲಗಳ ಮೇಲೆ ನಿಲ್ಲಿಸುತ್ತಿದ್ದರು. ಆದರೆ ಇಂದು ಯಾರ ಮನೆಯಲ್ಲಿಯೂ ಸಹ ಟೈಲರಿಂಗ್ ಮೆಷಿನ್ ಸಹ ಕಾಣದಂತಾಗಿದೆ, ಎಲ್ಲರೂ ಸಹ ರೆಡಿಮೇಡ್ ಬಟ್ಟೆಗಳನ್ನ ಕೊಂಡುಕೊಂಡು, ಹರಿದ ತಕ್ಷಣ ಬಿಸಾಡುವಂತಹ



ಪದ್ಧತಿ, ರೂಡಿಗೆ ಬರುತ್ತಿದೆ. ಮನುಷ್ಯ ಕೊನೇ ಪಕ್ಷ ಮನೆಯೊಳಗಾದರೂ ಕುಳಿತು, ತನ್ನ ಬಟ್ಟೆಗಳನ್ನು ಹೊಲಿದುಕೊಳ್ಳಲಿ ಎಂದು ಸಿಂಗರ್ ಎಂಬ ಮಹಾಶಯ ಟೈಲರಿಂಗ್ ಯಂತ್ರವನ್ನು ಕಂಡುಹಿಡಿದ, ಆದರೆ ಅತಿ ದುರಾಸೆಯಿಂದ ಮನುಷ್ಯ ಆ ಯಂತ್ರಕ್ಕೂ ಸಹ ಇನ್ನೊಂದು ಯಂತ್ರವನ್ನು ಜೋಡಿಸಿ, ವೇಗವಾಗಿ ಚಲಾಯಿಸಿ, ಊರ ಬಟ್ಟೆಯನ್ನೆಲ್ಲ ಒಬ್ಬನೇ ಕಟ್ ಮಾಡಿಕೊಂಡು, ಹೊಲಿಯುವಂತ ಪರಿಸ್ಥಿತಿ ನಿರ್ಮಾಣವಾಗಿದೆ. ಕೈಗಾರಿಕೆಗಳು ಎಷ್ಟರಮಟ್ಟಿಗೆ ಅಭಿವೃದ್ಧಿ ಹೊಂದಿವೆ ಎಂದರೆ ಸಾವಿರಾರು ಬಟ್ಟೆಗಳನ್ನ ಒಮ್ಮೆಲೇ ಕಟ್ಟು ಮಾಡಿ, ಒಮ್ಮೆಲೇ ಯಂತ್ರಗಳ ಮುಖಾಂತರ ಹೊಲಿಗೆ ಹಾಕಿಸಿ, ಬಟ್ಟೆಗಳನ್ನು ಸಿದ್ಧಪಡಿಸಿ, ಮಾರುಕಟ್ಟೆಯಲ್ಲಿ ಕಡಿಮೆ ವೆಚ್ಚದಲ್ಲಿ ಮಾರಾಟ ಮಾಡಿ, ಜನರನ್ನ ನಿರುದ್ಯೋಗಿಗಳನ್ನಾಗಿ, ಕೌಶಲ್ಯ ರಹಿತರನ್ನಾಗಿ ಮಾಡಿ, ಸೋಮಾರಿಗಳನ್ನಾಗಿ ಮಾಡಿ ಬಡತನಕ್ಕೆ ಇಳಿಸುತ್ತಿವೆ ಎಂದರು.

ಮನೆಯಲ್ಲಿರುವ ಅಡುಗೆಮನೆಯನ್ನು ಸಹ ಕೆಲವೇ ದಿನಗಳಲ್ಲಿ ತೆಗೆಯುವ ಉನ್ನಾರ ನಡೆಯುತ್ತಿದ್ದು, ಇನ್ನು ಮುಂದೆ ಜನರು ತಮಗೆ ಬೇಕಾದಂತ ಅನ್ನ, ಸಾಂಬಾರ್, ರೊಟ್ಟಿ, ಚಪಾತಿ, ಮುದ್ದೆಗಳನ್ನ ದೊಡ್ಡ ದೊಡ್ಡ ಕೈಗಾರಿಕೆಗಳಿಂದ ಮನೆ ಬಾಗಿಲಿಗೆ ತಲುಪಿಸುವಂತಹ ವ್ಯವಸ್ಥೆ ಬರಬಹುದು, ಆಗ ಮನೆಯಲ್ಲಿರುವ ಗೃಹಿಣೀಯರು ಯಾವುದೇ ಕೆಲಸವಿಲ್ಲದೆ, ಕೇವಲ ನಿರುದ್ಯೋಗ ಸಮಸ್ಯೆಗಳನ್ನ ಎದುರಿಸಿಕೊಳ್ಳುತ್ತಾ, ದುಡಿಮೆ ಇಲ್ಲದೆ ತಾವೇ ಬಡತನದ ಗುಂಡಿಗೆ ಬೀಳುವಂತಹ ಸಿದ್ಧತೆಗಳಾಗುತ್ತಿವೆ. ಒಲೆಯ ಜೊತೆಗೆ ದಾರಾ ಮಾಡುವ ಯಂತ್ರ, ಚರಕ, ಬಟ್ಟೆ ಮಾಡುವ ಮಗ್ಗ, ಕೈ ಹೊಲಿಗೆ ಮಾಡುವ ಟೈಲರಿಂಗ್ ಯಂತ್ರ, ಇವೆಲ್ಲವನ್ನೂ ಸಹ ಮತ್ತೆ ನಾವು ಗ್ರಾಮಗಳಲ್ಲಿ, ಮನೆ ಮನೆಗಳಲ್ಲಿ ಪ್ರತಿಷ್ಠಾಪನೆ ಮಾಡಿದರೆ ಮಾತ್ರ, ಜನರಲ್ಲಿರುವ ಬಡತನ, ಅಸಮಾನತೆ, ಸೋಮಾರಿತನವನ್ನು ನಿವಾರಿಸಲು ಅನುಕೂಲವಾಗಿರುತ್ತದೆ ಎಂದು ವಿನಂತಿಸಿಕೊಂಡಿದ್ದಾರೆ.

ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಟೈಲರಿಂಗ್ ತರಬೇತಿಯನ್ನು ನೀಡಿ, ಅವರಿಗೆ ತಮ್ಮ ಯೂನಿಫಾರಂಗಳನ್ನು ತಾವೇ ಹೊಲಿದುಕೊಳ್ಳುವಂತಹ ಶಿಕ್ಷಣ ನೀಡಿದರೆ ಮಾತ್ರ ಸ್ವಾವಲಂಬಿ ಜೀವನ ಮಕ್ಕಳಲ್ಲಿ ಅರಿವಿಗೆ ಬರುತ್ತದೆ, ದುಡಿಮೆಯ ಮಹತ್ವ ತಿಳಿಯುತ್ತದೆ. ಬರೀ ಓದಿನಿಂದ ಕೌಶಲ್ಯ ಹೆಚ್ಚಾಗುವುದಿಲ್ಲ, ಅವರಿಗೆ ಪ್ರಯೋಗಾಲಯ ತರಬೇತಿಗಳನ್ನು ನೀಡಿದಂತೆ ಜೀವನಕ್ಕೆ ಬೇಕಾದಂತ ಕೌಶಲ್ಯಗಳನ್ನು ತಿಳಿಸಿ ಕೊಡಬೇಕಾಗಿದೆ ಎಂದರು.

ಈಗಲೂ ಕೆಲವು ಶಾಲೆಗಳಲ್ಲಿ ಎಸ್ ಯು ಡಬ್ಲ್ಯೂ ಪಿ ಎಂಬ ವಿಷಯವನ್ನು ಇಟ್ಟು ಮಕ್ಕಳಿಗೆ, ಕೈ ಕಾಲುಗಳ ಬಳಸುವುದನ್ನು ಹೇಳಿಕೊಡಲಾಗುತ್ತದೆ. ಕೆಲವೊಂದಿಷ್ಟು ಶಾಲೆಗಳಲ್ಲಿ ಟೈಲರಿಂಗ್ ಮೆಷಿನ್ ಗಳನ್ನ ಸ್ಟೋರ್ ರೂಮುಗಳಲ್ಲಿ ಭದ್ರಪಡಿಸಿ, ಬೀಗ ಹಾಕಿ, ಯಾರಿಗೂ ಸಹ ದೊರೆಯದಂತೆ, ಯಂತ್ರಗಳು ಸಹ ಉಪಯೋಗಕ್ಕೆ ಬಾರದಂತೆ ಮಾಡಿರುವ ದೃಶ್ಯ ಕಾಣುತ್ತಿದೆ. ಅವುಗಳನ್ನು ಶಿಕ್ಷಣ ಇಲಾಖೆ ಹೊರ ತೆಗೆದು, ಮಕ್ಕಳಿಗೆ ಟೈಲರಿಂಗ್ ಆದರೂ ಕಲಿಸಿ, ನಿರುದ್ಯೋಗ ಸಮಸ್ಯೆಯನ್ನು ನಿವಾರಣೆ ಮಾಡಬೇಕೆಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**